22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 298 | ನವದೆಹಲಿ | ಬೆಲೆ ₹ 10 | ಮೇ 4, 2025, ಭಾನುವಾರ

## ಒಳಪುಟಗಳಲ್ಲಿ

ಡಿಸೆಂಬರ್ ಅಂತ್ಯದೊಳಗೆ ಎಲ್ಲರಿಗೂ ಹಕ್ಕುಪತ್ರ ನೀಡಲು ಕ್ರಮ ಕೈಗೊಳ್ಳಿ– ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ ಸಚಿವ ಕೃಷ್ಣ ಬೈರೇಗೌಡ – ಪು.5

ಧರ್ಮದ ಹೆಸರಿನಲ್ಲಿ ಆತಂಕ ಸೃಷ್ಟಿಸುವವರ ಬಗ್ಗೆ ಎಚ್ಚರದಿಂದ ಇರಬೇಕು: ಖಂಡ್ರೆ – ಪು.6

# ಪಾಕಿಸ್ತಾನದಿಂದ ನೇರ ಮತ್ತು ಪರೋಕ್ಷ ಆಮದು ನಿಷೇಧ

**ನವದೆಹಲಿ, ಮೇ 3: ವಾಣಿಜ್ಯ ಸಚಿವಾಲಯದ ಅಧಿಸೂಚನೆಯ ಪ್ರಕಾರ, ಭಾರತವು ಪಾಕಿಸ್ತಾನದಿಂದ ಎಲ್ಲ ಸರಕುಗಳ ನೇರ ಅಥವಾ ಪರೋಕ್ಷ ಆಮದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿದೆ.**




ವಿದೇಶಿ ವ್ಯಾಪಾರ ನೀತಿ (ಎಫ್‌ಟಿಪಿ) 2023 ರಲ್ಲಿ ಮುಂದಿನ ಆದೇಶಗಳವರೆಗೆ ಪಾಕಿಸ್ತಾನದಲ್ಲಿ ಹುಟ್ಟುವ ಅಥವಾ ರಫ್ತು ಮಾಡುವ ಎಲ್ಲ ಸರಕುಗಳ ನೇರ ಅಥವಾ ಪರೋಕ್ಷ ಆಮದು ಅಥವಾ ಸಾಗಣೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲು

ಈ ನಿಟ್ಟಿನಲ್ಲಿ ಒಂದು ನಿಬಂಧನೆಯನ್ನು ಸೇರಿಸಲಾಗಿದೆ ಎಂದು ಸಚಿವಾಲಯ ಮೇ 2 ರ ಅಧಿಸೂಚನೆಯಲ್ಲಿ ತಿಳಿಸಿದೆ. ರಾಷ್ಟ್ರೀಯ ಭದ್ರತೆ ಮತ್ತು ಸಾರ್ವಜನಿಕ ನೀತಿಯ ಹಿತಾಸಕ್ತಿಯಲ್ಲಿ ಈ ನಿರ್ಬಂಧವನ್ನು ವಿಧಿಸಲಾಗಿದೆ ಎಂದು ವಿದೇಶಿ ವ್ಯಾಪಾರ ಮಹಾನಿರ್ದೇಶನಾಲಯ (ಡಿಜಿಎಫ್‌ಟಿ) ಅಧಿಸೂಚನೆಯಲ್ಲಿ ತಿಳಿಸಿದೆ. ಈ ನಿಷೇಧಕ್ಕೆ ಯಾವುದೇ ವಿನಾಯಿತಿ ಇದ್ದರೆ ಭಾರತ ಸರ್ಕಾರದ ಅನುಮೋದನೆಯ

ಅಗತ್ಯವಿರುತ್ತದೆ. ಎಫ್‌ಟಿಪಿಯಲ್ಲಿ ಪಾಕಿಸ್ತಾನದಿಂದ ಆಮದು ನಿಷೇಧ ಎಂಬ ಶೀರ್ಷಿಕೆಯೊಂದಿಗೆ, ಪಾಕಿಸ್ತಾನದಲ್ಲಿ ಹುಟ್ಟುವ ಅಥವಾ ರಫ್ತು ಮಾಡುವ ಎಲ್ಲ ಸರಕುಗಳ ನೇರ ಅಥವಾ ಪರೋಕ್ಷ ಆಮದು ಅಥವಾ ಸಾಗಣೆಯನ್ನು, ಮುಕ್ತವಾಗಿ ಆಮದು ಮಾಡಿಕೊಳ್ಳಬಹುದಾದ ಅಥವಾ ಇಲ್ಲದಿದ್ದರೆ ಅನುಮತಿಸದಿದ್ದರೂ, ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಲಾಗುವುದು ಎಂದು ಹೇಳಿದೆ. ವಿದೇಶಿ ವ್ಯಾಪಾರ ನೀತಿ 2023ರ ಅನ್ವಯ ಈ ಘೋಷಣೆ ಮಾಡಲಾಗಿದ್ದು, ಮುಂದಿನ ಆದೇಶದವರೆಗೂ ಇದು ಜಾರಿಯಲ್ಲಿರಲಿದೆ ಎಂದು ಅಧಿಸೂಚನೆಯಲ್ಲಿ ಹೇಳಲಾಗಿದೆ. ರಾಷ್ಟ್ರೀಯ ಭದ್ರತೆ ಹಾಗೂ ಸಾರ್ವಜನಿಕ ನೀತಿಯ ಹಿತದೃಷ್ಟಿಯಿಂದ ಈ ನಿರ್ಬಂಧ ಹೇರಲಾಗಿದೆ ಎಂದು ವಿದೇಶಿ ವ್ಯಾಪಾರದ ಮಹಾನಿರ್ದೇಶಕ ತಿಳಿಸಿದ್ದಾರೆ.

ಪಾಕಿಸ್ತಾನದಿಂದ ಭಾರತ ಕೃಷಿ ಉತ್ಪನ್ನಗಳಾದ ಡ್ರೈ ಫ್ರೂಟ್ಸ್ (ಅಂಜೂರ, ದ್ರಾಕ್ಷಿ, ಬಾದಾಮಿ), ತಾಜಾ ಹಣ್ಣುಗಳು (ಡೇಟ್ಸ್), ಮತ್ತು ಕೆಲವು ಧಾನ್ಯಗಳನ್ನು ಮತ್ತು ಕಲ್ಲು ಉಪ್ಪು, ಸುಣ್ಣದ ಕಲ್ಲು, ಸಿಮೆಂಟ್ ಕಲ್ಲಿನಂತಹ ಖನಿಜ ಉತ್ಪನ್ನಗಳನ್ನು ಹಾಗೂ ಚರ್ಮದ ವಸ್ತುಗಳು, ಹತ್ತಿ, ಉಕ್ಕಿನ ಉತ್ಪನ್ನಗಳಂತಹ ಕೈಗಾರಿಕಾ ವಸ್ತುಗಳನ್ನು ಆಮದು ಮಾಡಿಕೊಳ್ಳುತ್ತಿತ್ತು. ಇದರ ಜೊತೆಗೆ ಪಾಕ್‌ನಿಂದ ಆಪ್ಟಿಕಲ್ ಲೆನ್ಸ್‌ಗಳು, ಕೆಲವು ಮಸಾಲೆ ಪದಾರ್ಥಗಳು ಭಾರತಕ್ಕೆ ಬರುತ್ತಿತ್ತು. 2018–19ಕ್ಕಿಂತ ಮುಂಚೆ ಭಾರತವು ಪಾಕಿಸ್ತಾನದಿಂದ ಸುಮಾರು $494 ಮಿಲಿಯನ್ (ಸುಮಾರು 3,600 ಕೋಟಿ) ಮೌಲ್ಯದ ಸರಕುಗಳನ್ನು ಆಮದು ಮಾಡಿಕೊಳ್ಳುತ್ತಿತ್ತು. ಆದರೆ 2019ರ ನಂತರ ಈ ಪ್ರಮಾಣವು ಕೇವಲ $10–20 ಮಿಲಿಯನ್‌ಗೆ ಇಳಿದಿದೆ ಇದರಲ್ಲಿ ಹೆಚ್ಚಿನ ಭಾಗವು ತೃತೀಯ ದೇಶಗಳ ಮೂಲಕ ಆಮದಾಗುತ್ತದೆ

ಭಾರತದ ನಿರ್ಧಾರದಿಂದ ಪಾಕಿಸ್ತಾನದ ಮೇಲೆ ಹೆಚ್ಚು ಪರಿಣಾಮ ಬೀರಲಿದೆ. ಪಾಕಿಸ್ತಾನದ ರಫ್ತು ಆದಾಯದ ಗಣನೀಯ ಭಾಗವು ಭಾರತಕ್ಕೆ ಸಂಬಂಧಿಸಿದೆ.

ಈ ಆಮದುಗಳನ್ನು ತಡೆಯು ವುದರಿಂದ ಪಾಕಿಸ್ತಾನದ ಆರ್ಥಿಕತೆಗೆ ದೊಡ್ಡ ಹೊಡೆತವಾಗುತ್ತದೆ, ವಿಶೇಷವಾಗಿ ಕೃಷಿ ಮತ್ತು ಖನಿಜ ಉತ್ಪನ್ನಗಳ ರಫ್ತುದಾರರಿಗೆ.

ಭಾರತಕ್ಕೆ ರಫ್ತು ಕಡಿಮೆಯಾದರೆ, ಪಾಕಿಸ್ತಾನದ ವಿದೇಶಿ ವಿನಿಮಯ ಸಂಗ್ರಹ ಕಡಿಮೆಯಾಗುತ್ತದೆ, ಇದು ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿರುವ ಪಾಕಿಸ್ತಾನಕ್ಕೆ ಮತ್ತಷ್ಟು ತೊಂದರೆಯನ್ನುಂಟು ಮಾಡುತ್ತದೆ. ಪಾಕಿಸ್ತಾನವು ತನ್ನ ಉತ್ಪನ್ನಗಳಿಗೆ ಇತರ ಮಾರುಕಟ್ಟೆಗಳನ್ನು (ಉದಾ: ಮಧ್ಯಪ್ರಾಚ್ಯ, ಚೀನಾ) ಹುಡುಕಬೇಕಾಗುತ್ತದೆ, ಆದರೆ ಇದು ಸಮಯ ತೆಗೆದುಕೊಳ್ಳುವ ಮತ್ತು ವೆಚ್ಚದಾಯಕ ಪ್ರಕ್ರಿಯೆಯಾಗಲಿದೆ.

# ಬೈಸರನ್ ವ್ಯಾಲಿಯಲ್ಲಿ ಉಗ್ರರ ಕಳ್ಳ ಮಾರ್ಗ ಪತ್ತೆ: ಎನ್‌ಐಎ

ನವದೆಹಲಿ, ಮೇ 3: ಪೆಹಲ್ಗಾಮ್‌ನ ಬೈಸರನ್ ವ್ಯಾಲಿಯಲ್ಲಿ ದಾಳಿ ನಡೆಸಿ ಅಲ್ಲಿಂದ ಎಸ್ಕೇಪ್ ಆಗಿರುವ ಭಯೋತ್ಪಾದಕರ ಕಳ್ಳ ಮಾರ್ಗವನ್ನು ಎನ್‌ಐಎ ಅಧಿಕಾರಿಗಳು ಬೇಧಿಸಿದ್ದಾರೆ. ಇಡೀ ಪ್ರದೇಶದಲ್ಲಿ ದಾಳಿಯ ಮರುಸೃಷ್ಟಿ ಮಾಡಿ, ತ್ರಿಡಿ ಮ್ಯಾಪಿಂಗ್ ಮಾಡಿದ್ದ ಅಧಿಕಾರಿಗಳು ಭಯೋತ್ಪಾದಕರು ಹೇಗೆ ಬೈಸರನ್ ವ್ಯಾಲಿಯನ್ನು ಪ್ರವೇಶ ಮಾಡಿರಬಹುದು ಎಂದು ಕಂಡುಕೊಂಡಿದ್ದಾರೆ.

ಎನ್‌ಐಎ ಮೂಲಗಳ ಪ್ರಕಾರ, ಉಗ್ರರು ಗಡಿಭಾಗದ ಊರುಗಳಾದ ಮಚ್ಚಿಲ್, ಕರನ್, ನೌಗಾಂ, ಬಾರಮುಲ್ಲಾ ಮತ್ತು ಉರಿ ಪ್ರದೇಶದಿಂದ ಒಳಗೆ ಬಂದಿದ್ದಾರೆ. ಪೆಹಲ್ಗಾಮ್ ತಲುಪಿದ ಅವರು ಸ್ಥಳೀಯರ ಸಹಾಯದ ಮೂಲಕವೇ ಬೈಸರಾನ್ ವ್ಯಾಲಿಯನ್ನು ತಲುಪಿದ್ದಾರೆ ಎಂದು ತಿಳಿದು ಬಂದಿದೆ.

ಅಧಿಕಾರಿಗಳು ಈ ಅಂಶವನ್ನು ತಾಂತ್ರಿಕ, ವೈಜ್ಞಾನಿಕ ಮತ್ತು ಫಾರೆನ್ಸಿಕ್ ಎವಿಡೆನ್ಸ್ ಮೂಲಕ ಖಾತರಿ ಮಾಡಿಕೊಂಡಿದ್ದಾರೆ.

**ಭಯೋತ್ಪಾದಕರಿಗೆ ಸಹಾಯ ಮಾಡಿದ್ದು ಯಾರು?**

ವ್ಯಾಲಿಗೆ ಭಯೋತ್ಪಾದಕರು ಬಂದಿದ್ದೇಗೆ ಎಂದು ತಿಳಿದು ಬಂದಿದೆ, ಇವರಿಗೆ ಸಹಾಯ ಮಾಡಿದ್ದು ಯಾರು ಎನ್ನುವುದು ಪತ್ತೆ ಹಚ್ಚುವ ಕೆಲಸ ಆಗುತ್ತಿದೆ. ಎನ್‌ಐಎ ಅನುಮಾನಗಳ ಪ್ರಕಾರ ಜಮಾತ್–ಎ–ಇಸ್ಲಾಮಿ ಮತ್ತು ಹುರಿಯತ್ನ ವಿವಿಧ ಬಣಗಳು ಭಯೋತ್ಪಾದಕರಿಗೆ ಸಹಕಾರ ನೀಡಿರಬಹುದು, ಪಹಲ್ಗಾಮ್ ಸುತ್ತಮುತ್ತಲಿನ ಮಾರ್ಗಗಳಲ್ಲಿ ಸಂಚಾರಕ್ಕೆ ಸಹಕಾರ ನೀಡಿರಬಹುದು ಎಂದು ಅಂದಾಜಿಸಿದೆ.

ಈ ನಿಟ್ಟಿನಲ್ಲಿ ಇದುವರೆಗೆ 2800 ಕ್ಕೂ ಹೆಚ್ಚು ಜನರನ್ನು ವಿಚಾರಣೆ ಮಾಡಿದೆ, ಇದಲ್ಲದೆ, 180 ಕ್ಕೂ ಹೆಚ್ಚು ಜನರು ಇನ್ನೂ ಬಂಧನದಲ್ಲಿದ್ದಾರೆ. ಕುಪ್ವಾರ ಪ್ರದೇಶದಲ್ಲಿ 14 ಜನ, ಪುಲ್ವಾಮಾದಲ್ಲಿ 12 ಜನ ಹ್ಯಾಂಡ್ವಾರಾದಲ್ಲಿ 15 ಜನರನ್ನು ಪಿಎಸ್‌ಸಿನಲ್ಲಿ ವಶಕ್ಕೆ ಪಡೆದಿದ್ದಾರೆ

**ಫ್ರೀ ಕಾಶ್ಮೀರ ಹೋರಾಟದಲ್ಲಿ ಭಾಗಿಯಾಗಿದ್ದವರ ಮೇಲೂ ಅನುಮಾನ:**

ಈ ಕೃತ್ಯಕ್ಕೆ ಫ್ರೀ ಕಾಶ್ಮೀರ ಹೋರಾಟದಲ್ಲಿ ಭಾಗಿಯಾಗಿದ್ದವರು ಸಹಾಯ ಮಾಡಿರಬಹುದು ಎಂದು ಎನ್‌ಐಎ ಅನುಮಾನ ಪಟ್ಟಿದೆ. ಫ್ರೀ ಕಾಶ್ಮೀರ ಮೂವ್‌ಮ್‌ಂಟ್ ಅಲ್ಲಿ ಇದ್ದವರೇ 370 ಬಳಿಕ ದೊಡ್ಡ ಮಟ್ಟದ ಪ್ರತೀಕಾರಕ್ಕೆ ಪ್ಲಾನ್ ಮಾಡಿದ್ದರು ಅದಕ್ಕಾಗಿ ಇಲ್ಲಿ ಸಹಕಾರ ನೀಡಿರುವ ಸಾಧ್ಯತೆ ಇದೆ. ಈ ಹಿನ್ನಲೆ 27 ಜನ ಸ್ಥಳೀಯ ಶಂಕಿತರನ್ನು ಎನ್‌ಐಎ ಬಂಧಿಸಿದೆ.

**ಹಿಂದೂಗಳನ್ನು ಸಾಲಲ್ಲಿ ನಿಲ್ಲಿಸಿ ಹತ್ಯೆ:**

ಘಟನೆಯಲ್ಲಿ ಗಾಯಗೊಂಡಿದ್ದ ಮುಂಬೈ ಮೂಲದ ಸುಬೋಧ್ ಪಾಟೀಲ್ ದಾಳಿಯ ಕರಾಳ ಚಿತ್ರಣವನ್ನು ಬಿಚ್ಚಿಟ್ಟಿದ್ದಾರೆ. ಎಲ್ಲ ಹಿಂದೂ ಪ್ರವಾಸಿಗರು ಸಾಲಿನಲ್ಲಿ ನಿಲ್ಲುವಂತೆ ಕೇಳಲಾಯಿತು, ಎಷ್ಟೇ ಕರುಣೆಯಿಂದ ಮನವಿ ಮಾಡಿದರೂ ಪ್ರಯೋಜನಕ್ಕೆ ಬರಲಿಲ್ಲ, ಇದನ್ನು ವಿರೋಧಿಸಲು ಪ್ರಯತ್ನಿಸಿದವರಿಗೆ ಗುಂಡಿ ಹಾರಿಸಲಾಯಿತು, ಘಟನೆಯಲ್ಲಿ ನನ್ನ ಕುತ್ತಿಗೆಗೂ ಗುಂಡು ಬಿತ್ತು ಬಳಿಕ ತಾನು ಪ್ರಜ್ಞೆ ತಪ್ಪಿದ್ದೆ. ನನಗೆ ಪ್ರಜ್ಞೆ ಬಂದಾಗ, ನನ್ನ ಸುತ್ತಲೂ ಅನೇಕ ಮೃತದೇಹಗಳು ಬಿದ್ದಿದ್ದವು ಕುದುರೆ ಮೇಲೆ ಸವಾರಿ ಮಾಡಿಸುವ ಕೆಲವರು ಕುಡಿಯಲು ನೀರು ಕೊಟ್ಟರು ಭಯ ಪಡಬೇಡಿ ಎಂದು ಧೈರ್ಯ ತುಂಬಿ, ಅಲ್ಲಿಂದ ಆಸ್ಪತ್ರೆಗೆ ಸಾಗಿಸಿದರು ಐದು ನಿಮಿಷದಲ್ಲಿ ಎಲ್ಲವೂ ಮುಗಿದಯ ಹೊಯ್ತು ಎಂದು ವಿವರಿಸಿದ್ದಾರೆ.



■ ಪ್ರಧಾನಿ ನರೇಂದ್ರ ಮೋದಿ ಮತ್ತು ಅಂಗೋಲಾ ಗಣರಾಜ್ಯದ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಕಾಲ್ವ್ಸ್ ಲೌರೆಂಕೊ ಅವರು ಶನಿವಾರ ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಒಪ್ಪಂದಗಳ ವಿನಿಮಯಕ್ಕೆ ಸಾಕ್ಷಿಯಾದರು.

# ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ: ಜಾತಿ ವ್ಯವಸ್ಥೆ ನಿಂತ ನೀರಿನಂತೆ– ಸಿಎಂ




**ಬೆಂಗಳೂರು, ಮೇ 3:** ಸಂವಿಧಾನ ರಕ್ಷಣೆ ಆದರೆ ನಮ್ಮ ಹಕ್ಕುಗಳೂ ರಕ್ಷಣೆಯಾಗುತ್ತವೆ. ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ. ಸಂವಿಧಾನಕ್ಕೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಯಲಹಂಕದಲ್ಲಿ 14 ಅಡಿಗಳ ಬಾಬಾ ಸಾಹೇಬ್ ಅಂಬೇಡ್ಕರ್ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು. ನಮ್ಮ ದೇಶ, ನಮ್ಮ ಸಮಾಜಕ್ಕೆ ಅವಶ್ಯವಾಗಿದ್ದಂತಹ ಅತ್ಯುತ್ತಮ ಸಂವಿಧಾನವನ್ನು ನೀಡಿದವರು ಬಾಬಾ ಸಾಹೇಬ್ ಅಂಬೇಡ್ಕರ್. ಈ ದೇಶದ ಸಾಮಾಜಿಕ ಪರಿಸ್ಥಿತಿ, ಜಾತಿ ವ್ಯವಸ್ಥೆ ಅಂಬೇಡ್ಕರ್ ಅವರಿಗೆ ಅರ್ಥ ಆದಷ್ಟು ಬೇರೆಯವರಿಗೆ ಆಗಿರಲಿಲ್ಲವೆಂದರೆ ಅದು ಅತಿಶಯೋಕ್ತಿಯಲ್ಲ. ಜಾತಿ ವ್ಯವಸ್ಥೆ ಇದ್ದಷ್ಟೂ ಕಾಲ ಮೀಸಲಾತಿ ಇರಲೇಬೇಕು ಎಂಬುದನ್ನು ಅವರು ಬಲವಾಗಿ ನಂಬಿದ್ದರು ಎಂದರು.

**ಜಾತಿ ವ್ಯವಸ್ಥೆಗೆ ಚಲನೆ ಇಲ್ಲ :**

ನಮ್ಮ ದೇಶದ ಜಾತಿ ವ್ಯವಸ್ಥೆಗೆ ಚಲನೆ ಇಲ್ಲ. ಆದರೆ ವರ್ಗಕ್ಕೆ ಚಲನೆಯಿದೆ. ನಮ್ಮ ಸಮಾಜದಲ್ಲಿ ಶ್ರೀಮಂತ ಬಡವನಾದರೂ, ಬಡವ ಶ್ರೀಮಂತನಾದರೂ ಕಡೆಯವರೆಗೂ ಉಳಿದು ಕೊಳ್ಳುವುದು ಹುಟ್ಟಿದ ಜಾತಿಯಲ್ಲಿ ಮಾತ್ರ. ಆದ್ದರಿಂದ ಈ ಜಾತಿ ವ್ಯವಸ್ಥೆ ನಿಂತ ನೀರಿನಂತೆ.

ಇದನ್ನು ಮನಗಂಡಿದ್ದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸ್ವಾತಂತ್ರ್ಯ ಯಶಸ್ಸನ್ನು ಕಾಣಬೇಕಾದರೆ ಈ ದೇಶದ ಅವಕಾಶ ವಂಚಿತರು, ಶೋಷಿತರು, ದೌರ್ಜನ್ಯಕ್ಕೆ ಒಳಗಾದವರಿಗೆಲ್ಲರಿಗೂ ಸಮಾನ ಅವಕಾಶಗಳು ದೊರೆತು ಅವರೆಲ್ಲರೂ ಸಾಮಾಜಿಕವಾಗಿ, ಆರ್ಥಿಕವಾಗಿ ಸಬಲರಾದಾಗ ಮಾತ್ರ ಸ್ವಾತಂತ್ರ್ಯಕ್ಕೆ ನಿಜವಾದ ಅರ್ಥ ಸಿಗುತ್ತದೆ ಎಂದು ಹೇಳಿದ್ದರು ಎಂದರು.

ಸ್ವಾತಂತ್ರ್ಯಾನಂತರ ಒಬ್ಬ ವ್ಯಕ್ತಿ , ಒಂದು ಮತ ಜಾರಿಗೆ ಬಂದಿದೆ. ಇದು ಈ ದೇಶದ ರಾಷ್ಟ್ರಪತಿಗಳಿಗೂ ಒಂದೇ. ಒಬ್ಬ ಪೌರಕಾರ್ಮಿಕನಿಗೂ ಒಂದೇ. ಬಸವಣ್ಣನವರು ಹೇಳಿದ್ದು ಇದನ್ನೇ. ಅಂಬೇಡ್ಕರ್ ಅವರು ಕೂಡಾ ಬಸವಣ್ಣನವರ ವಚನಗಳನ್ನು ಓದಿದ್ದರು ಎಂಬುದು ಅವರ ಬರಹಗಳಿಂದ ತಿಳಿದು ಬರುತ್ತದೆ. ಸಮಾಜದಲ್ಲಿ ಯಾವ ಕೆಲಸವೂ ಮೇಲೂ ಅಲ್ಲ, ಕೀಳೂ ಅಲ್ಲ. ಎಲ್ಲವೂ ಸಮಾನ ಎಂದೇ ಪ್ರತಿಪಾದಿಸಿ ದರು ಎಂದರು.

ನಮಗೆ ರಾಜಕೀಯ ಸ್ವಾತಂತ್ರ್ಯ ಸಿಕ್ಕಿದೆ ಆದರೆ ಸಾಮಾಜಿಕ ಆರ್ಥಿಕ ಸಿಕ್ಕಿಲ್ಲ. ಎಲ್ಲಿವರೆಗೂ ಇದು ಸಿಗುವುದಿಲ್ಲ ಅಲ್ಲಿಯವರೆಗೆ ಸಮಾಜದಲ್ಲಿ ಸಮಾನತೆ ಕಾಣಲು ಸಾಧ್ಯವಿಲ್ಲ. ನಮ್ಮ ಸರ್ಕಾರವು ಇದನ್ನೇ ನಂಬಿದ್ದು, ನಾವು ರೂಪಿಸುತ್ತಿರುವ ಕಾರ್ಯಕ್ರಮಗಳೂ ಇದೇ ಹಿನ್ನೆಲೆಯಿಂದ ಮೂಡಿಬಂದಿವೆ ಎಂದರು.

**ಜನರನ್ನು ಮುಂದಕ್ಕೆ ಎಳೆಯಲು ಪ್ರಯತ್ನ ಮಾಡಬೇಕು**

ಜನರನ್ನು ಹಿಂದಕ್ಕೆ ಮಾತ್ರ ತಳ್ಳಬೇಡಿ. ಮುಂದಕ್ಕೆ ಎಳೆಯಲು ಪ್ರಯತ್ನ ಮಾಡಬೇಕು. ಮುಂದಕ್ಕೆ ಎಳೆಯಲು ಸಾಧ್ಯವಾಗದಿದ್ದರೆ ಅಲ್ಲೇ ಬಿಡಿ. ಆದರೆ ಹಿಂದಕ್ಕೆ ಮಾತ್ರ ತಳ್ಳಬೇಡಿ ಎಂದ ಮುಖ್ಯಮಂತ್ರಿಗಳು ಅಂಬೇಡ್ಕರ್ ಅವರು ತಾವು ಓದಿಕೊಂಡಿರುವುದು ಸ್ವಾರ್ಥಕ್ಕಾಗಿ ಅಲ್ಲ, ಅಸಮಾನತೆಯನ್ನು ಹೋಗಲಾಡಿಸಲು ಎಂದು ತಿಳಿಸಿದ್ದರು. ನಾವು ಸಾಧ್ಯವಾದಷ್ಟರ ಮಟ್ಟಿಗೆ ಅವರ ತತ್ವಗಳನ್ನು ಅಳವಡಿಸಿಕೊಳ್ಳಬೇಕು ಎಂದರು.



**ಅಕ್ಷರ ಸಂಸ್ಕೃತಿಯಿಂದ ವಂಚಿತರಾದವರು ಶಿಕ್ಷಣವನ್ನು ಪಡೆದುಕೊಳ್ಳಲೇ ಬೇಕು:**

ನಮ್ಮ ಸರ್ಕಾರ ಆರ್ಥಿಕವಾಗಿ, ಸಾಮಾಜಿಕವಾಗಿ ಜನರಲ್ಲಿ ಶಕ್ತಿ ತುಂಬಲು ಪಂಚ ಗ್ಯಾರಂಟಿಗಳನ್ನು ಜಾರಿ ಮಾಡಿದೆ. ಆರ್ಥಿಕವಾಗಿ ಶಕ್ತಿ ತುಂಬದಿದ್ದರೆ ಅಸಮಾನತೆ ಹೋಗಲಾಡಿಸಲು ಸಾಧ್ಯವಿಲ್ಲ. ಎಲ್ಲರನ್ನೂ ಮುಖ್ಯವಾಹಿನಿಗೆ ತರುವ ಪ್ರಯತ್ನ ಮಾಡಬೇಕು. ಒಂದೇ ಬಾರಿಗೆ ಎಲ್ಲರನ್ನೂ ಮುಖ್ಯವಾಹಿನಿಗೆ ತರಲು ಸಾಧ್ಯವಾಗದಿದ್ದರೂ ಕ್ರಮೇಣವಾಗಿ ಮಾಡಲು ಪ್ರಯತ್ನ ಮಾಡಬೇಕು. ನಮ್ಮ ಹೋರಾಟ ನಿರಂತರವಾಗಿರ ಬೇಕು. ಅದಕ್ಕೆ ಬಾಬಾ ಸಾಹೇಬ್ ಅಂಬೇಡ್ಕರ್ ಶಿಕ್ಷಣ, ಸಂಘಟನೆ ಹಾಗೂ ಹೋರಾಟ ಎಂಬ ಮೂರು ಮಂತ್ರಗಳನ್ನು ಬಿಟ್ಟು ಹೋಗಿದ್ದಾರೆ. ಅಕ್ಷರ ಸಂಸ್ಕೃತಿಯಿಂದ ವಂಚಿತರಾದವರು ಶಿಕ್ಷಣವನ್ನು ಪಡೆದುಕೊಳ್ಳಲೇ ಬೇಕು. ಆಗ ಮಾತ್ರ ಸ್ವಾಭಿಮಾನ, ಜ್ಞಾನ ಬರಲು, ಸಂಘಟಿತರಾಗಲು ಸಾಧ್ಯವಾಗುತ್ತದೆ. ಅಂಬೇಡ್ಕರ್ ಅವರು ಅಂದಿನ ಕಾಲದಲ್ಲಿಯೇ ಎಷ್ಟೇ ಕಷ್ಟವಾದರೂ, ಮಾನಸಿಕ ತೊಂದರೆಯಾದರೂ ಶಿಕ್ಷಣವನ್ನು ಬಿಡಲಿಲ್ಲ ಎಂದರು. ಅಂಬೇಡ್ಕರ್ ಅವರೊಬ್ಬ ದೂರದೃಷ್ಟಿಯಿದ್ದ ನಾಯಕರು. ಅಂಥವರಿಗೆ ಮಾತ್ರ ನೂರು ವರ್ಷಗಳಲ್ಲಿ ಸಮಾಜದಲ್ಲಿ ಏನಾಗಬಹುದು ಎಂದು ಊಹಿಸಲು ಸಾಧ್ಯವಾಗುತ್ತದೆ ಎಂದರು.

**ಬೇಡಿಕೆ ಪರಿಗಣಿಸಲಾಗುವುದು:**

ವಿಶ್ವನಾಥ್ ಅವರು ಯಲಹಂಕದಲ್ಲಿ ಪಕ್ಷಾತೀತವಾಗಿ ಕೆಲಸ ಮಾಡುವುದಾಗಿ ಹೇಳಿರುವುದನ್ನು ಸ್ವಾಗತಿಸಿದ ಮುಖ್ಯಮಂತ್ರಿಗಳು,

**ಮಾನ್ಯಮುಖ್ಯ ಮಂತ್ರಿ ಶ್ರೀ ಸಿದ್ದರಾಮಯ್ಯ ನವರು ಇಂದು ಜಿಲ್ಲಾಡಳಿತ ಮತ್ತು ಜಿಲ್ಲಾಪಂಚಾಯತ್ ಬೆಂಗಳೂರು ನಗರ ಜಿಲ್ಲೆ ತಾಲೋಕ್ ಆಡಳಿತ ಮತ್ತು ತಾಲ್ಲೋಕು ಪಂಚಾಯತ್ ಯಲಹಂಕ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಸಂವಿಧಾನ ಶಿಲ್ಪಿ ಭಾರತ ರತ್ನ ಮಹಾ ಮಾನವತಾವಾದಿ ಡಾ. ಬಿ.ಆರ್. ಅಂಬೇಡ್ಕರ್ ಅವರ 14 ಅಡಿ ಎತ್ತರದ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡಿ ನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು.**

ಯಲಹಂಕದಲ್ಲಿ ದಲಿತರು ಹಿಂದುಳಿದವರೇ ಹೆಚ್ಚಿದ್ದು, ಎಲ್ಲರಿಗೂ ನ್ಯಾಯ ದೊರಕಿಸುವ ಕೆಲಸವನ್ನು ವಿಶ್ವನಾಥ್ ಮಾಡುತ್ತಿದ್ದಾರೆ ಎಂದರು. ವಿಶ್ವನಾಥ್ ಅವರ ಕ್ಷೇತ್ರಕ್ಕೆ ಅನುದಾನದ ಬೇಡಿಕೆಯನ್ನು ಪರಿಗಣಿಸ ಲಾಗುವುದು ಎಂದು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು.

**ಅಂಬೇಡ್ಕರ್ ಅವರ ವಿಚಾರಗಳು ಇನ್ನಷ್ಟು ಪಸರಿಸಲಿ:**

ಸಮಗ್ರ ಸಾಮಾಜಿಕ ವ್ಯವಸ್ಥೆ ಬದಲಾಗಬೇಕು. ಅಂಬೇಡ್ಕರ್ ದಲಿತರಾಗಿ ಹುಟ್ಟಿದರೂ ಎಲ್ಲರ ನಾಯಕರಾಗಿದ್ದರು. ಸಾಮಾಜಿಕ ನ್ಯಾಯದಿಂದ ವಂಚಿತರಾದವರೆಲ್ಲರ ನಾಯಕರಾಗಿದ್ದರು. ಈ ದೇಶದಲ್ಲಿ ಅವರು ಹುಟ್ಟಿರವುದೇ ನಮಗೆ ಹೆಮ್ಮೆಯ ಸಂಗತಿ ಎಂದರು. ಅಂಬೇಡ್ಕರ್ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ ಪ್ರತಿಮೆಗಳು ಸಂಕೇತಗಳಾದರೂ, ಇವುಗಳಿಂದ ಅಂಬೇಡ್ಕರ್ ಅವರ ವಿಚಾರಗಳು ಇನ್ನಷ್ಟು ಪಸರಿಸಲಿ ಎಂದರು.

## ಕೃಷ್ಣಾ ನದಿ ನ್ಯಾಯಾಧಿಕರಣ ತೀರ್ಪು ಕುರಿತಂತೆ

# ಗೆಜೆಟ್ ಅಧಿಸೂಚನೆ ಹೊರಡಿಸಲು ಸಭೆಯಲ್ಲಿ ಒತ್ತಾಯಿಸಲಾಗುವುದು



ಬೆಂಗಳೂರು, ಮೇ 3: ಕೃಷ್ಣಾ ನದಿ ನೀರಿನ ಹಂಚಿಕೆ ವಿಚಾರವಾಗಿ ನ್ಯಾಯಾಧೀಕರಣದ ತೀರ್ಪಿನ ಅನ್ವಯ ರಾಜ್ಯದ ಪಾಲಿನ ನೀರು ಬಳಕೆಗೆ ಕೇಂದ್ರ ಸರ್ಕಾರ ಗೆಜೆಟ್ ಅಧಿಸೂಚನೆ ಹೊರಡಿಸಬೇಕು ಎಂದು ಇದೇ ತಿಂಗಳು 7ರಂದು ಕೇಂದ್ರ ಜಲಶಕ್ತಿ ಸಚಿವರು ಕರೆದಿರುವ ಸಭೆಯಲ್ಲಿ ಒತ್ತಡ ಹಾಕಲಾಗುವುದು. ಈ ಸಭೆಯ ನಂತರ ರಾಜ್ಯದಲ್ಲಿ ಸರ್ವಪಕ್ಷ ಸಭೆ ಕರೆದು ಚರ್ಚಿಸಲಾಗುವುದು ಎಂದು ಡಿಸಿಎಂ ಹಾಗೂ ಜಲ ಸಂಪನ್ಮೂಲ ಸಚಿವರೂ ಆಗಿರುವ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, 2010ರಲ್ಲಿ ಕೃಷ್ಣಾ ನದಿ ನ್ಯಾಯಾಧಿಕರಣ ತೀರ್ಪಿನ ಬಗ್ಗೆ ಗೆಜೆಟ್ ಅಧಿಸೂಚನೆ ಹೊರಡಿಸುವ ಸಂಬಂಧ ಕೇಂದ್ರ ಸರ್ಕಾರದ ವಿರುದ್ಧ ಒತ್ತಡ ಹಾಕಿದ್ದೇವೆ. ಹೀಗಾಗಿ ಕೇಂದ್ರ ಸಚಿವರು ಕರ್ನಾಟಕ, ಆಂಧ್ರ, ತೆಲಂಗಾಣ, ಮಹಾರಾಷ್ಟ್ರ ರಾಜ್ಯಗಳ ಸಚಿವರ ಕರೆದಿದ್ದು, ಈ ಸಭೆಯಲ್ಲಿ ರಾಜ್ಯದ ನಿಲುವನ್ನು ಮಂಡಿಸುವ ಮುನ್ನ ಇಂದು ಪೂರ್ವಭಾವಿ ಸಭೆ ನಡೆಸಿದ್ದೇವೆ ಎಂದರು. ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಇಂದಿನ ಸಭೆಯಲ್ಲಿ ಕಾನೂನು ಸಚಿವರು, ಸಂಬಂಧ ಪಟ್ಟ ಎಲ್ಲಾ ಜಿಲ್ಲಾ ಸಚಿವರಾದ ಆರ್.ಬಿ. ತಿಮ್ಮಾಪುರ, ಎಂ.ಬಿ.ಪಾಟೀಲ್, ಶಿವಾನಂದ ಪಾಟೀಲ್, ದರ್ಶನಾಪುರ ಅವರ ಜತೆ ಚರ್ಚೆ ಮಾಡಿದ್ದೇವೆ. ಸಚಿವರು ಅನೇಕ ಸಲಹೆಗಳನ್ನು ನೀಡಿದ್ದಾರೆ. ಈ ಮಧ್ಯೆ ದೆಹಲಿ ವಕೀಲರ ತಂಡ ಕೂಡ ಸಭೆಯಲ್ಲಿ ಇದ್ದರು. ಮೇ 7ರ ಸಭೆಯಲ್ಲಿ ನಮ್ಮ ನಿಲುವು ಏನು, ನಮ್ಮ ತಂತ್ರಗಾರಿಕೆ ಏನು ಎಂದು ಚರ್ಚೆ ಮಾಡಲಾಗಿದೆ. ಕೇಂದ್ರದ ಸಭೆಯಲ್ಲಿ ಇಡೀ ತಂಡ ರಾಜ್ಯವನ್ನು ಪ್ರತಿನಿಧಿಸಿ ರಾಜ್ಯದ ನಿಲುವು ಮಂಡಿಸುತ್ತೇವೆ ಎಂದು ತಿಳಿಸಿದರು.ಈ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆ ಮುಂದುವರಿಸಲು ಬೆಳಗಾವಿ ಅಧಿವೇಶನದಲ್ಲೇ ತೀರ್ಮಾನ ಮಾಡಿದ್ದೇವೆ. 2010ರಲ್ಲಿ ನ್ಯಾಯಾಧಿಕರಣದ ತೀರ್ಪು ಬಂದಿದ್ದು, ಈವರೆಗೂ ಕೇಂದ್ರ ಸರ್ಕಾರ ಗೆಜೆಟ್ ನೋಟಿಫಿಕೇಶನ್ ಹೊರಡಿಸಿಲ್ಲ. ಕಳೆದ 15 ವರ್ಷಗಳಲ್ಲಿ ನಮ್ಮ ರಾಜ್ಯಕ್ಕೆ ಭಾರಿ ನಷ್ಟವಾಗಿದೆ. ಹೀಗಾಗಿ ಈ ವಿಚಾರವಾಗಿ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕುತ್ತಿದ್ದೇವೆ. ಪ್ರತಿ ವರ್ಷ ಯೋಜನಾ ವೆಚ್ಚದ ಪ್ರಮಾಣವೂ ಏರಿಕೆಯಾಗುತ್ತಿದೆ. ನೀರು ಅನಗತ್ಯವಾಗಿ ಪೋಲಾಗುತ್ತಿದ್ದು, ಇದನ್ನು ಬಳಸಿಕೊಳ್ಳಲು ಒತ್ತಡ ಹಾಕುತ್ತಿದ್ದೇವೆ. ಕೇಂದ್ರ ಸರ್ಕಾರ ನಮ್ಮ ಪರಿಸ್ಥಿತಿ ಅರಿತಿದ್ದು ಸಭೆ ಕರೆದಿರುವುದು ಸ್ವಾಗತಾರ್ಹ ಎಂದರು.


ಆಲಮಟ್ಟಿ ಅಣೆಕಟ್ಟೆಯ ಎತ್ತರವನ್ನು 519 ಮೀಟರನಿಂದ 524.256 ವರೆಗೆ ಎತ್ತರಿಸಲು ಕಾನೂನಾತ್ಮಕವಾಗಿ ಯಾವುದೇ ತೊಡಕುಗಳು ಇಲ್ಲದೇ ಇರುವುದರಿಂದ ಅಣೆಕಟ್ಟೆಯ ಎತ್ತರವನ್ನು ಹೆಚ್ಚಳ ಮಾಡಬೇಕೆಂದು ಉತ್ತರ ಕರ್ನಾಟಕದ ಸಚಿವರು ಇಂದಿನ ಸಭೆಯಲ್ಲಿ ಮುಖ್ಯಮಂತ್ರಿಯವರನ್ನು ಒತ್ತಾಯಿಸಿರುವುದಾಗಿ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರಾದ ಎಚ್. ಕೆ ಪಾಟೀಲ ಅವರು ಶನಿವಾರ ಮಾಧ್ಯಮ ಪ್ರತಿನಿಧಿಗಳಿಗೆ ತಿಳಿಸಿದರು. ಈ ಸಭೆಯಲ್ಲಿ ಉತ್ತರ ಕರ್ನಾಟಕದ ಸಚಿವರಾದ ಎಂ.ಬಿ ಪಾಟೀಲ, ಶಿವಾನಂದ ಪಾಟೀಲ ಮತ್ತು ಆರ್.ಬಿ ತಿಮ್ಮಾಪೂರ ಹಾಗೂ ಶರಣಬಸಪ್ಪ ದರ್ಶನಾಪೂರ ಅವರು ಉಪಸ್ಥಿತರಿದ್ದು, ಸರ್ವಾನುಮತದಿಂದ ಉತ್ತರ ಕರ್ನಾಟಕದ ಹಿತರಕ್ಷಣೆಯ ಬಗ್ಗೆ ಮಾತನಾಡಿದರು ಎಂದು ಸಚಿವರು ತಿಳಿಸಿದರು.

# ವಿಮಾನ ಹಾರಾಟಕ್ಕೆ ಪಾಕ್ ವಾಯು ಪ್ರದೇಶ ಬಳಸದಿರಲು ಯುರೋಪಿಯನ್ ಒಕ್ಕೂಟ ಸಂಸ್ಥೆಗಳ ನಿರ್ಧಾರ

ನವದೆಹಲಿ, ಮೇ 3: ಪೆಹಲ್ಗಾಮ್ ಭಯೋತ್ಪಾದಕ ದಾಳಿ ಬಳಿಕ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬೆನ್ನಲೆ ಯುರೋಪಿಯನ್ ಒಕ್ಕೂಟದ ದೇಶಗಳ ವಾಯುಯಾನ ಸಂಸ್ಥೆಗಳು ಪಾಕಿಸ್ತಾನಕ್ಕೆ ಆಘಾತ ಮೂಡಿಸಿದ್ದು ತಮ್ಮ ದೇಶಗಳ ವಿಮಾನಗಳ ಹಾರಾಟಕ್ಕೆ ಪಾಕಿಸ್ತಾನದ ವಾಯು ಪ್ರದೇಶ ಬಳಕೆ ಮಾಡಿಕೊಳ್ಳದಿರಲು ತಿರ್ಮಾನಿಸಿವೆ.

ಲುಫ್ತ್‌ನ್ಸ, ಏರ್ ಫ್ರಾನ್ಸ್, ಮತ್ತು ಕೆಎಲ್‌ಎಂ, ಬ್ರಿಟಿಷ್ ಏರ್‌ಲೈನ್ಸ್ ಸೇರಿದಂತೆ ಪ್ರಮುಖ ಯುರೋಪಿಯನ್ ವಿಮಾನಯಾನ ಸಂಸ್ಥೆಗಳು, ಭಾರತ–ಪಾಕಿಸ್ತಾನದ ನಡುವಿನ ಉದ್ವಿಗ್ನತೆಯಿಂದಾಗಿ ತಮ್ಮ ವಿಮಾನಗಳ ಮಾರ್ಗವನ್ನು ಬದಲಾಯಿಸಿವೆ. ಈ ಸಂಸ್ಥೆಗಳು ಏಷ್ಯಾಕ್ಕೆ ಸಂಪರ್ಕಿಸಲು ಪಾಕಿಸ್ತಾನದ ವಾಯುಪ್ರದೇಶದ ಬದಲಿಗೆ ಇರಾನ್, ಒಮನ್, ಅಥವಾ ಇತರ ಪಕ್ಕದ ರಾಷ್ಟ್ರಗಳ ವಾಯುಪ್ರದೇಶದ ಮೂಲಕ ಕಾರ್ಯಾಚರಿಸುತ್ತಿವೆ.

ಈ ಬದಲಾವಣೆಯಿಂದ ವಿಮಾನದ ಸಮಯ ಮತ್ತು ಇಂಧನ ವೆಚ್ಚದಲ್ಲಿ




ಹೆಚ್ಚಳವಾಗಿದೆ, ಆದರೆ ಭದ್ರತೆಯ ದೃಷ್ಟಿಯಿಂದ ಇದನ್ನು ಅಗತ್ಯ ಕ್ರಮವೆಂದು ವಿಮಾನಯಾನ ಸಂಸ್ಥೆಗಳು ಪರಿಗಣಿಸಿವೆ.

ಎಲ್ಲಾ ದೇಶಗಳು ಯಾವುದೇ ಪ್ರದೇಶದ ಮೇಲೆ ಹಾರಾಟ ನಡೆಸುವಾಗ ತಮ್ಮದೇ ಆದ ಅಪಾಯದ ಮೌಲ್ಯಮಾಪನಗಳನ್ನು ಮಾಡುತ್ತವೆ. ಅವರು ಹಾರಾಟಕ್ಕೆ ಅಸುರಕ್ಷಿತ ಸ್ಥಳವೆಂದು ಪರಿಗಣಿಸಿದರೆ, ನೋಟಾಮ್ ನೀಡದಿದ್ದರೂ ಸಹ, ಅವರು ವಾಯುಪ್ರದೇಶವನ್ನು ಬಳಸುವುದನ್ನು ತಪ್ಪಿಸಬಹುದಾಗಿದೆ.

ಪಾಕಿಸ್ತಾನವು ಭಾರತೀಯ ವಿಮಾನಗಳಿಗೆ ತನ್ನ ವಾಯುಪ್ರದೇಶವನ್ನು ಮುಚ್ಚಿದ ನಂತರ, ಭಾರತವೂ ಪ್ರತಿಗಳಿಕೆಯಾಗಿ ಪಾಕಿಸ್ತಾನದ ವಿಮಾನಗಳಿಗೆ ತನ್ನ ವಾಯುಪ್ರದೇಶವನ್ನು ಮುಚ್ಚಿದೆ. ಇದರ ಪರಿಣಾಮವಾಗಿ, ಉಭಯ ರಾಷ್ಟ್ರಗಳ ವಿಮಾನಯಾನ ಕಾರ್ಯಾಚರಣೆಗಳು ತೀವ್ರವಾಗಿ ಪರಿಣಾಮ ಬೀರಿವೆ. ಪಾಕಿಸ್ತಾನವು ತನ್ನ ಗಿಲ್ಗಿಟ್–ಬಾಲ್ಟಿಸ್ತಾನ್ ಪ್ರದೇಶಕ್ಕೆ ಸ್ವಂತ ವಿಮಾನ ಸೇವೆಯನ್ನೂ ರದ್ದುಗೊಳಿಸಿದೆ ಇದು ಭಾರತದಿಂದ ಸಂಭವನೀಯ ವಾಯು ದಾಳಿ ಭೀತಿಯನ್ನು ಸೂಚಿಸುತ್ತದೆ.

## ನಿತ್ಯ ಪಂಚಾಂಗ 4.05.2025 ಭಾನುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ವೈಶಾಖ ಶುದ್ಧ

ಸಪ್ತಮಿ, ಪುಷ್ಯ ನಕ್ಷತ್ರ, ಅನಧ್ಯಯನ ದ್ವಯ, ಗಂಗಾಸಪ್ತಮಿ, ಭಾಗೀರಥ ಜಯಂತಿ, ಅಗ್ನಿನಕ್ಷತ್ರ ದೋಷಾರಂಭ, ಭಾಗಮಂಡಲ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ರಾಜ್ಯದಿಂದ ಅದೆಷ್ಟು ಜನರನ್ನು ಪಾಕ್‌ಗೆ ವಾಪಸ್ ಕಳಿಸಿದ್ದೀರಿ ಉತ್ತರ ಕೊಡಿ: ಪ್ರಲ್ಹಾದ್ ಜೋಶಿ



**ಹುಬ್ಬಳ್ಳಿ, ಮೇ 3:** ಭಯೋತ್ಪದನೆ ವಿಷಯದಲ್ಲಿ ಕೆಲ ಕಾಂಗ್ರೆಸ್ ನಾಯಕರು ಪಾಕಿಸ್ತಾನದಲ್ಲಿ ಹೀರೋಗಳಾಗಿದ್ದಾರೆ. ಕಾಶ್ಮೀರದ ಕೃತ್ಯವನ್ನು ಹಿಂದೂ ಟೆರರ್ ಎಂದು ಮತ್ತು ಮುಂಬಯಿ ದಾಳಿಯನ್ನು 'ಆರ್‌ಎಸ್‌ಎಸ್' ಮಾಡಿಸಿದ್ದು ಎನ್ನುತ್ತಾ 'ಗಯಾಬ್' ಪೋಸ್ಟರ್ ಹಾಕುತ್ತ ಪಾಕಿಸ್ತಾನದ ಸಂಭ್ರಮಕ್ಕೆ ಹಾಲೆರೆದಿದ್ದಾರೆ. ಇದು ದೇಶದ್ರೋಹವಲ್ಲವೇ ಕೇಂದ್ರ ಸರ್ಕಾರದ ಸೂಚನೆಯ ಮೇರೆಗೆ ಕರ್ನಾಟಕದಿಂದ ಅದೆಷ್ಟು ಜನರಿಗೆ ಪಾಕಿಸ್ತಾನಕ್ಕೆ ವಾಪಸು ಕಳಿಸಿದ್ದೀರಿ ಅಥವಾ ಅವರ ಮೇಲಿನ ಪ್ರೀತಿಯಿಂದ ಇಟ್ಟುಕೊಂಡಿದ್ದೀರಾ ತಿಳಿಸಿ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ವ್ಯಂಗ್ಯವಾಡಿದರು. ಹುಬ್ಬಳ್ಳಿಯಲ್ಲಿಂದು ಮಧ್ಯಮಗಳೊಂದಿಗೆ ಮಾತನಾಡಿದ ಅವರು, ಒಂದು ಕಡೆ ಭಯೋತ್ಪದನೆ ವಿರುದ್ಧ ಹೋರಾಟಕ್ಕೆ ಕೇಂದ್ರ ಸರ್ಕಾರ ಕೈಕೊಳ್ಳುವ ಯಾವುದೇ ಕ್ರಮಕ್ಕೆ ಬೆಂಬಲಿಸುತ್ತೇವೆ ಎನ್ನುತ್ತಾರೆ. ಮತ್ತೊಂದು ಕಡೆ ಪಾಕಿಸ್ತಾನದ ವರಸೆಯಲ್ಲಿ ಮಾತನಾಡುತ್ತಾರೆ. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರ ಮಾತನ್ನೂ ಮೀರಿ ನಡೆದುಕೊಳ್ಳುತ್ತಲಿದ್ದಾರೆ ಎಂದು ಆರೋಪಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ರಾಜ್ಯ ಸರ್ಕಾರದ ಮೂವರು ಮಂತ್ರಿಗಳು ಈಗ ಪಾಕ್ ಹೀರೋಗಳಾಗಿ ಬಿಟ್ಟಿದ್ದಾರೆ. ರಾಬರ್ಟ್ ವಾದ್ರಾ ಮತ್ತವರ ಹೇಳಿಕೆಗೆ ಪಾಕಿಸ್ತಾನಿಗಳು ಸಂಭ್ರಮಿಸುತ್ತಿದ್ದಾರೆ.

'ಕಾಶ್ಮೀರ ಭಯೋತ್ಪಾದನಾ ದಾಳಿ ತಾನು ಮಾಡಿಲ್ಲ' ಎನ್ನಲು ಪಾಕ್‌ಗೆ ಆಸ್ಪದ ನೀಡುತ್ತಿದ್ದಾರೆ. ಪಾಕಿಸ್ತಾನ್ ಜಿಂದಾಬಾದ್ ಎನ್ನಲು ನೂರಾರು ಕಾರಣಗಳಿವೆ ಎನ್ನುತ್ತಾರೆ. ನಾಚಿಕೆ ಆಗುವುದಿಲ್ಲವೇ ಕಿಂಚಿತ್ತಾದರೂ ದೇಶಾಭಿಮಾನ ಬೇಡವೇ? ಎಂದು ಕಿಡಿಕಾರಿದರು.

**ಗಯಾಬ್ ಪೊಸ್ಟರ್ ಹಾಕಿ ತೆಗೆದದ್ದೇಕೆ:** ಕಾಂಗ್ರೆಸ್ ನಾಯಕರೊಬ್ಬರು ಪಹಲ್ಗಾಮ್ ದಾಳಿ ಸಂಬಂಧಪಟ್ಟಂತೆ ಸಾಮಾಜಿಕ ಜಾಲತಾಣದಲ್ಲಿ 'ಗಾಯಬ್' ಪೋಸ್ಟರ್ ಹಾಕಿ ಪಾಕ್ ಹೀರೋಗಳಾದರು. ನಂತರ ಟ್ವೀಟ್‌ನಿಂದ ಅದನ್ನು ತೆಗೆದರು. ನೀವು ಅಷ್ಟು ಸಾಚಾ ಆಗಿದ್ದಿದ್ದರೆ ಅದನ್ನೇಕೆ ತೆಗೆದಿರಿ, ಇದು ದೇಶದ್ರೋಹ ಅಲ್ಲವೇ, ಎಂದರು.

**ಇಂಟೆಲಿಜೆನ್ಸ್ ಮಾಹಿತಿ ಇರಲಿಲ್ಲವೇ:** ಪಹಲ್ಗಾಮ್ ದಾಳಿ ಬಗ್ಗೆ ಭದ್ರತಾ ವೈಫಲ್ಯ, ಇಂಟೆಲಿಜೆನ್ಸ್ ಮಾಹಿತಿ ಇರಲಿಲ್ಲವೇ, ಎಂದು ಪ್ರಶ್ನಿಸುತ್ತಿದ್ದಾರೆ. ಗಯಾಬ್ ಪೋಸ್ಟರ್ ವಾರ್ ವಿರೋಧಿಸಿ ಐದಾರು ಮಹಿಳೆಯರು ಬೆಳಗಾವಿಯಲ್ಲಿ ಪ್ರತಿಭಟಿಸಲು ಬರುತ್ತಿದ್ದಾರೆ ಎಂಬ ಇಂಟೆಲಿಜೆನ್ಸ್ ಮಾಹಿತಿ ನಿಮಗಿತ್ತೇ, ಯುಪಿಎ ಅವಧಿಯಲ್ಲಿ ಮುಂಬಯಿ ದಾಳಿ ಅರಿವು ನಿಮಗಿರಲಿಲ್ಲವೇ ಇಂಟೆಲಿಜೆನ್ಸ್ ಮಾಹಿತಿ ಎಂದು ತಿರುಗೇಟು ನೀಡಿದ ಜೋಶಿ, ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆ, ವಿರೋಧ-ಪ್ರತಿರೋಧಗಳು ಸಾಮಾನ್ಯ. ನಾವು ಸಾರ್ವಜನಿಕ ಜೀವನದಲ್ಲಿರುವಾಗ ಅದನ್ನೆಲ್ಲ ಎದುರಿಸಲು ಸಿದ್ಧರಿರಬೇಕಾಗುತ್ತದೆ ಎಂದು ಚಾಟಿ ಬೀಸಿದರು.

## ಕರ್ನಾಟಕದಿಂದ ಎಷ್ಟು ಜನ ಪಾಕ್ ಪ್ರಜೆಗಳನ್ನು ವಾಪಸ್ ಕಳುಹಿಸಿದ್ದೀರಿ?

ಎಷ್ಟು ಜನರನ್ನು ಪಾಕ್‌ಗೆ ಕಳಿಸಿದ್ದೀರಿ: ಪಹಲ್ಗಾಮ್ ಭಯೋತ್ಪಾದನಾ ದಾಳಿ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಭಾರತದಲ್ಲಿರುವ ಪಾಕ್ ಪ್ರಜೆಗಳನ್ನು ವಾಪಸ್ ಕಳಿಸಲು ಆದೇಶಿಸಿತು. ಎಲ್ಲಾ ರಾಜ್ಯಗಳು ವಾಪಸ್ ಕಳಿಸುತ್ತಿವೆ. ಕರ್ನಾಟಕದಿಂದ ಎಷ್ಟು ಜನರನ್ನು ಮರಳಿ ಕಳಿಸಿದ್ದೀರಿ ಉತ್ತರ ಕೊಡಿ. ಬಾಯಿಗೆ ಬಂದಂತೆ ಮಾತನಾಡಬೇಡಿ ಎಂದು ವಾಗ್ದಾಳಿ ನಡೆಸಿದರು. ಪಹಲ್ಗಾಮ್ ಅಷ್ಟೇ ಅಲ್ಲ, ದೇಶದಲ್ಲಿ ಎಲ್ಲೇ ಆಗಲಿ ಭಯೋತ್ಪಾದನೆ ಮಾಡುವವರನ್ನು ಮತ್ತು ಅದಕ್ಕೆ ಬೆಂಬಲ ನೀಡುವವರ ಮನೆಗೆ ಹೊಕ್ಕು ಹೊಡೆಯುತ್ತೇವೆ ಎಂದು ಸ್ವತಃ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಆಗಲೇ ಹೇಳಿದ್ದಾರೆ.

ಅದಕ್ಕೆ ತಮ್ಮ ಸರ್ಕಾರ ಬದ್ಧವಾಗಿದೆ. ಭಯೋತ್ಪಾದಕರು, ಸಂರಕ್ಷಕರನ್ನು ಸುಮ್ಮನೇ ಬಿಡುವ ಮಾತೇ ಇಲ್ಲ. ಎಲ್ಲೇ ಇದ್ದರೂ ಹುಡುಕಿ ಹುಡುಕಿ ಹೊಡೆಯಲಾಗುತ್ತದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟಪಡಿಸಿದರು. ದೇಶದಲ್ಲಿ ಯುಪಿಎ ಅವಧಿಯಲ್ಲಿ ಇದ್ದ ಹಾಗೆ ಭಯೋತ್ಪಾದನೆ ಚಟುವಟಿಕೆ ಈಗಿಲ್ಲ. ಜಮ್ಮು-ಕಾಶ್ಮೀರ ಸೇರಿದಂತೆ ಎಲ್ಲೆಡೆಯೂ ಶೇ.80ರಷ್ಟು ನಿಗ್ರಹವಾಗಿದೆ. ಮುಂಬೈ ದಾಳಿ ನಡೆದಾಗ ಅಡ್ವಾಣಿ ಅವರು ಭಯೋತ್ಪಾದನೆ ಹತ್ತಿಕ್ಕುವ ಕೇಂದ್ರ ಸರ್ಕಾರದ ಯಾವುದೇ ನಿಲುವಿಗೆ ನಾವು ಬದ್ಧ, ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಿ ಎಂದರು. ಅದರಂತೆ ನಡೆದುಕೊಂಡರು ಕೂಡ. ಆದರೆ, ಇಂದು ಕಾಂಗ್ರೆಸ್ ಹೇಳುವುದೇ ಬೇರೆ, ನಡೆದುಕೊಳ್ಳುವುದೇ ಬೇರೆಯಾಗಿದೆ. ಇದು ದೇಶದ ದುರ್ದೈವ ಎಂದರು. ಸಿದ್ದರಾಮಯ್ಯ ಶಿಷ್ಯಂದಿರು ತಾವೇ ರಕ್ಷಣಾ ತಜ್ಞರ ರೀತಿ ಬಾಯಿಗೆ ಬಂದಂತೆ ಬಾಲಿಶವಾಗಿ ಮಾತನಾಡುತ್ತಿದ್ದಾರೆ. ಯಾರ ಅವಧಿಯಲ್ಲೇ ಆಗಲಿ ಯಾರೂ ಭಯೋತ್ಪಾದನೆಯನ್ನು ಸಮರ್ಥಿಸಿಕೊಳ್ಳುವ ರೀತಿ ವರ್ತಿಸುವುದು ಸರಿಯಲ್ಲ. ಪಾಕಿಸ್ತಾನ್ ಜಿಂದಾಬಾದ್ ಎನ್ನುವುದು, ಪಾಕ್ ಪರ ನಿಂತವರಂತೆ ಬಿಂಬಿಸಿಕೊಳ್ಳುವುದು ದೇಶದ್ರೋಹ ಎಸಗಿದಂತೆ ಎಂದು ಹೇಳಿದರು.

ಜಮ್ಮು-ಕಾಶ್ಮೀರದಲ್ಲಿ ಅಭಿವೃದ್ಧಿ ನಾಶಗೊಳಿಸಬೇಕು, ಟೂರಿಸಂ ನಾಶಪಡಿಸಬೇಕು. ದೇಶದಲ್ಲಿ ಅಭದ್ರತೆ ಸೃಷ್ಟಿಸಬೇಕೆಂದು ಪಾಕ್ ಭಯೋತ್ಪಾದಕರು ಮೋಸದಿಂದ ಪಹಲ್ಗಾಮ್ ದಾಳಿ ನಡೆಸಿದ್ದಾರೆ. ಆದರೆ, ಭಾರತ ದುರ್ಬಲ ರಾಷ್ಟ್ರವಲ್ಲ. ಆಗಲೇ ಇದರ ವಿರುದ್ಧ ಕ್ರಮಕ್ಕಿಳಿದಿದೆ. ಭಯೋತ್ಪಾದಕರಿಗೆ ಶಿಕ್ಷೆ ಕೊಟ್ಟೇ ಕೊಡುತ್ತದೆ. ಜಾಗತಿಕ ಮಟ್ಟದಲ್ಲೂ ನಾವು ಇದಕ್ಕೆ ಸಿದ್ಧತೆ ನಡೆಸಿದ್ದೇವೆ ಎಂದು ಹೇಳಿದರು. ದೇಶಾದ್ಯಂತ ನಕ್ಸಲಿಸಂಗೆ ಅಂತ್ಯ ಕಾಣಿಸಲಾಗುತ್ತಿದೆ. ಎಲ್ಲೋ ಅಲ್ಲಲ್ಲಿ ಶೇ.10ರಷ್ಟು ಇದೆ. 2026ರ ವೇಳೆಗೆ ಅದನ್ನೂ ನಿರ್ಮೂಲನಗೊಳಿಸಿ ಭಾರತವನ್ನು ನಕ್ಸಲಿಸಂ ಫ್ರೀ ದೇಶವನ್ನಾಗಿ ಮಾಡಲಾಗುತ್ತದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು.

# ಸೆ.9ಕ್ಕೆ ಅಖಿಲ ಭಾರತೀಯ ಸಭಾಧ್ಯಕ್ಷರ ಸಮ್ಮೇಳನ ಸ್ಪೀಕರ್ ಯು.ಟಿ.ಖಾದರ್



**ಬೆಂಗಳೂರು, ಮೇ 3:** ರಾಜ್ಯದಲ್ಲಿ 23 ವರ್ಷಗಳ ಬಳಿಕ ಅಖಿಲ ಭಾರತೀಯ ಸಭಾಧ್ಯಕ್ಷರ ಸಮ್ಮೇಳನವನ್ನು ಸೆ.9 ಮತ್ತು 10ರಂದು ನಡೆಸಲಾಗುವುದು ಎಂದು ವಿಧಾನಸಭೆಯ ಸ್ಪೀಕರ್ ಯು.ಟಿ.ಖಾದರ್ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸಮ್ಮೇಳನ ಆಯೋಜಿಸುವಂತೆ ಕೋರಿ ಲೋಕಸಭಾ ಸಭಾಧ್ಯಕ್ಷರಿಗೆ ಪತ್ರ ಬರೆಯಲಾಗಿತ್ತು. ಅವರು ಒಪ್ಪಿಗೆ ಸೂಚಿಸಿರುವ ಹಿನ್ನೆಲೆಯಲ್ಲಿ ಬೆಂಗಳೂರಲ್ಲಿ ಅಖಿಲ ಭಾರತೀಯ ಸಭಾಧ್ಯಕ್ಷರ ಸಮ್ಮೇಳನ ಆಯೋಜಿಸಲಾಗುವುದು. 23 ವರ್ಷಗಳ ಬಳಿಕ ರಾಜ್ಯದಲ್ಲಿ ಸಮ್ಮೇಳನ ನಡೆಸಲಾಗುತ್ತಿದೆ ಎಂದು ಹೇಳಿದರು.ಸೆ.8ರಂದು ಸಂಜೆ ವಿಧಾನಸೌಧ ಭವ್ಯಮೆಟ್ಟಿಲುಗಳ ಮೇಲೆ ಸಮ್ಮೇಳನದ ಉದ್ಘಾಟನಾ ಸಮಾರಂಭವನ್ನು ಆಯೋಜಿಸುವ ಉದ್ದೇಶವನ್ನು ಹೊಂದಲಾಗಿದೆ. 9 ಮತ್ತು 10ರಂದು ಎರಡು ದಿನಗಳು ನಡೆಯುವ ಸಮ್ಮೇಳನದಲ್ಲಿ ಎಲ್ಲಾ ರಾಜ್ಯಗಳ ಸಭಾಧ್ಯಕ್ಷರು, ಉಪಸಭಾಧ್ಯಕ್ಷರು, ಸಭಾಪತಿಗಳು, ಉಪಸಭಾಪತಿಗಳು, ಅಧಿಕಾರಿಗಳು ಸೇರಿದಂತೆ 500ಕ್ಕೂ ಹೆಚ್ಚು ಮಂದಿ ಭಾಗಿಯಾಗಿಯಾಗುವ ನಿರೀಕ್ಷೆ ಇದೆ. 11ರಂದು ಪ್ರತಿನಿಧಿಗಳನ್ನು ರಾಜ್ಯದ ಐತಿಹಾಸಿಕ ಪ್ರೇಕ್ಷಣೀಯ ಸ್ಥಳಗಳನ್ನು ವೀಕ್ಷಿಸಲು ಅವಕಾಶ ಮಾಡಿಕೊಡಲಾಗುವುದು ಎಂದು ಹೇಳಿದರು., ಬಿಜೆಪಿಯ 18 ಶಾಸಕರ ಅಮಾನತು ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರ ಪತ್ರಕ್ಕೆ ಶೀಘ್ರವೇ ಉತ್ತರಿಸಲಾಗುವುದು. ಈ ಬಗ್ಗೆ ದೂರವಾಣಿ ಮೂಲಕ ಮಾತನಾಡಿದ್ದೇನೆ. ಅಧಿಕೃತವಾಗಿ ಪತ್ರ ಬರೆಯಲಾಗುವುದು ಎಂದು ತಿಳಿಸಿದರು.

# ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ ದಲಿತ ಸ್ವಾಮೀಜಿಗಳ ನಿಯೋಗ



**ಬೆಂಗಳೂರು, ಮೇ 3:** ಹಿಂದುಳಿದ ದಲಿತ ಮಠಾಧೀಶರ ಒಕ್ಕೂಟದ ಸ್ವಾಮೀಜಿಗಳ ನಿಯೋಗ ಇಂದು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ತಮ್ಮ ಬೇಡಿಕೆಗಳನ್ನು ಮುಂದಿಟ್ಟು ಚರ್ಚಿಸಿದರು.

ಸ್ವಾಮೀಜಿಗಳ ಬೇಡಿಕೆಗೆ ಎಲ್ಲಾ ದಲಿತ ಮತ್ತು ಹಿಂದುಳಿದ ಮಠಗಳಿಗೆ ಅನುದಾನ ನೀಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದರು.

ಹಿಂದುಳಿದ ಮತ್ತು ದಲಿತ ಅರ್ಚಕರನ್ನು ರೂಪಿಸಲು ಅನುಕೂಲ ಆಗುವ ರೀತಿ ಗುರುಕುಲ ಆರಂಭಿಸಲು ಚಿತ್ರದುರ್ಗ ಜಿಲ್ಲೆಯಲ್ಲಿ ಜಾಗ ನೀಡುವಂತೆ ನಿಯೋಗ ಮನವಿ ಮಾಡಿತು. ಮನವಿ ಸ್ವೀಕರಿಸಿದ ಮುಖ್ಯಮಂತ್ರಿಗಳು ಜಾಗ ಗುರುತಿಸಿ ವರದಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಎಲ್ಲಾ ಹಿಂದುಳಿದ ಮತ್ತು ದಲಿತ ಮಠಗಳಿಗೆ ಬೆಂಗಳೂರಿನಲ್ಲಿ ನಿವೇಶನ ಒದಗಿಸುವಂತೆ ಮಾಡಿದ ಮನವಿಗೆ ಸ್ಪಂದಿಸಿದ ಮುಖ್ಯಮಂತ್ರಿಗಳು ಈ ಬಗ್ಗೆ ಪರಿಶೀಲನೆ ಮಾಡುವ ಭರವಸೆ ನೀಡಿದರು.

# ಜಾತಿ-ಜನಗಣತಿ ಹೆಸರಲ್ಲಿ ಪ್ರಧಾನಿ ಮೋದಿ ಮಾಸ್ಟರ್ ಸ್ಟ್ರೋಕ್ ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಮೇ 3:** ಪ್ರಧಾನಿ ನರೇಂದ್ರ ಮೋದಿ ಅವರ ಜಾತಿಗಣತಿ ನಡೆಸುವ ಘೋಷಣೆಯನ್ನು ಬಿಜೆಪಿಗರು ಮಾಸ್ಟರ್ ಸ್ಟ್ರೋಕ್ ಎಂದು ಬಣ್ಣಿಸಲು ಆರಂಭಿಸಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಈ ಬಗ್ಗೆ ಮಾತನಾಡಿರುವ ಸಚಿವರು ಮೋದಿ ಅವರ ಜಾತಿಗಣತಿ ನಡೆಸುವ ಘೋಷಣೆಯನ್ನು ಬಿಜೆಪಿಗರು ಮಾಸ್ಟರ್ ಸ್ಟ್ರೋಕ್ ಎಂದು ಬಣ್ಣಿಸಲು ಆರಂಭಿಸಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ವಿಪರ್ಯಾಸವೆಂದರೆ ಇದೇ ಬಿಜೆಪಿ ನಾಯಕರು ಈವರೆಗೂ ಕಾಂಗ್ರೆಸ್ ಪ್ರತಿಪಾದಿಸುತ್ತಾ ಬಂದಿರುವ ಜಾತಿಗಣತಿ ವಿರುದ್ಧ ಟೀಕೆಗಳನ್ನು ಮಾಡುತ್ತಿದ್ದರು. ಈಗ ಅವರು ತಮ್ಮ ವರಸೆಯನ್ನು ಬದಲಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ. ಪಹಲ್ಗಾಮ್ ದಾಳಿ ಬಳಿಕ ಮೋದಿ ಅವರನ್ನು ಜನಸಾಮಾನ್ಯರು ಪ್ರಶ್ನಿಸುತ್ತಿದ್ದಾರೆ. ಇವುಗಳಿಗೆ ಉತ್ತರ ನೀಡುವ ಸಾಮರ್ಥ್ಯ ಅವರಿಗೆ ಇಲ್ಲ. ಹೀಗಾಗಿ ಜನರು ಮತ್ತು ಮಾಧ್ಯಮದ ಗಮನವನ್ನು ಬೇರೆಡೆಗೆ ತಿರುಗಿಸಲು ಜಾತಿಗಣತಿ ಅಸ್ತ್ರ ಪ್ರಯೋಗಿಸಿದ್ದಾರೆ. ಭಯೋತ್ಪಾದನೆ ದಾಳಿಗೆ ಪ್ರತಿಕ್ರಿಯೆಯಾಗಿ ಸರ್ಜಿಕಲ್ ಸ್ಟ್ರೈಕ್ ಮಾಡುತ್ತಾರೆ ಎಂದು ನಿರೀಕ್ಷಿಸಿದ್ದರೆ, ಇವರು ಪಾಕಿಸ್ತಾನದ ಯೂಟ್ಯೂಬ್ ಚಾನೆಲ್‌ಗಳನ್ನು ಬ್ಯಾನ್ ಮಾಡಿದ್ದಾರೆ. ಪ್ರಧಾನಿ ಮೋದಿ ಅವರ ವರ್ತನೆ ಜನರಲ್ಲಿ ಬೇಸರ ಮೂಡಿಸಿದೆ ಎಂದರು.

# ಜೂ.10ರ ಒಳಗೆ ಒಳಮೀಸಲಾತಿ ಘೋಷಿಸಿ: ಕಾರಜೋಳ ಒತ್ತಾಯ

**ಬೆಂಗಳೂರು, ಮೇ 3:** ರಾಜ್ಯದಲ್ಲಿ ಒಳಮೀಸಲಾತಿ ವಿಚಾರ ಮತ್ತೆ ಮತ್ತೆ ಸದ್ದು ಮಾಡುತ್ತಲೇ ಇದೆ ಇದರ ನಡುವೆಯೇ ಮಾಜಿ ಡಿಸಿಎಂ, ಸಂಸದ ಗೋವಿಂದ ಕಾರಜೋಳ ಪ್ರಕ್ತಿಯಿಸಿದ್ದು, ಜೂ. 10ರ ಒಳಗೆ ಒಳಮೀಸಲಾತಿ ಘೋಷಣೆ ಮಾಡಬೇಕು ಎಂದು ಕಿಡಿಕಾರಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಒಳಮೀಸಲಾತಿ ನೀಡುವಂತೆ ಸುಪ್ರೀಂ ಕೋರ್ಟ್ 9 ತಿಂಗಳ ಹಿಂದೆಯೇ ಆದೇಶ ಮಾಡಿದ್ದರೂ ಕೂಡ ರಾಜ್ಯ ಸರ್ಕಾರ ಇನ್ನೂ ಕೂಡ ಒಳಮೀಸಲಾತಿ ಬಗ್ಗೆ ಯಾವುದೇ ನಿರ್ಧಾರ ಮಾಡಿಲ್ಲ, ಮೇ 5ರಿಂದ ಒಳಮೀಸಲಾತಿ ಗಣತಿ ಪ್ರಾರಂಭ ಮಾಡಬೇಕು ಆಗ್ರಹಿಸಿದ್ದಾರೆ.ಸುಪ್ರೀಂ ಆದೇಶವಿದ್ದರು ಕೂಡ ಸಿಎಂ ಸಿದ್ದರಾಮಯ್ಯ ಅವರು ಮಾತ್ರ ಒಳಮೀಸಲಾತಿ ಕೊಡದೇ ಕುಂಟು ನೆಪ ಹೇಳುತ್ತಿದ್ದಾರೆ. ಈಗ ನಾಗಮೋಹನ್ ದಾಸ್ ಅವರಿಂದ ಗಣತಿ ಮಾಡಿಸೋದಾಗಿ ಹೇಳುತ್ತಿದೆ. ಸರ್ಕಾರದ ಬಳಿಕ ಕಾಂತರಾಜು ವರದಿ ಅಂಕಿಅಂಶಗಳು ಇವೆ. ಅದರ ಆಧಾರದಲ್ಲಿ ಒಳಮೀಸಲಾತಿ ಕೊಡಬೇಕು ಎಂದು ಕಾರಜೋಳ ಕಿಡಿಕಾರಿದರು.

# ಶೀಘ್ರವೇ 19 ಸಾವಿರ ಶಿಕ್ಷಕರ ನೇಮಕಾತಿ ಆರಂಭ: ಸಚಿವ ಮಧುಬಂಗಾರಪ್ಪ



**ಬೆಂಗಳೂರು, ಮೇ 03:** ಸರ್ಕಾರಿ ಶಾಲೆಗಳಲ್ಲಿ ಕೆಲ ಮೂಲಭೂತ ಸೌಕರ್ಯಗಳ ಅಭಾವಿರುವುದು ನಿಜ, ಅದನ್ನು ಹಂತ-ಹಂತವಾಗಿ ಬಗೆಹರಿಸಲಾಗುವುದು. ರಾಜ್ಯದ ಸರ್ಕಾರ ಶಾಲೆಗಳಲ್ಲಿ ಶಿಕ್ಷಕರ ಅಭಾವವಿದ್ದು ಶೀಘ್ರವೇ ರಾಜ್ಯದಲ್ಲಿ 19,000 ಶಿಕ್ಷಕರ ನೇಮಕಾತಿ ಮಾಡಲಾಗುವುದು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ ಒಳ ಮೀಸಲಾತಿ ಸಂಬಂಧ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಸಮಿತಿಯು ವರದಿ ನೀಡಿದ ಬಳಿಕ 19 ಸಾವಿರ ಶಿಕ್ಷಕರ ನೇಮಕಾತಿ ಮಾಡಲಾಗುವುದು ಎಂದರು. ರಾಜ್ಯದ ಕಲ್ಯಾಣ ಕರ್ನಾಟಕ ಭಾಗದ ಶಾಲೆಗಳಿಗೆ 5000 ಶಿಕ್ಷಕರು, ಉಳಿದ ಭಾಗದಲ್ಲಿ 5000 ಸೇರಿ ಒಟ್ಟು 10 ಸಾವಿರ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವುದಾಗಿ ಈಗಾಗಲೇ ಬಜೆಟ್ನಲ್ಲಿ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಇದರ ಜೊತೆಗೆ ಇನ್ನೂ ಒಂಬತ್ತು ಹುದ್ದೆಗಳು ಸೇರಿ 19 ಸಾವಿರ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಉದ್ದೇಶವಿದೆ ಎಂದು ಹೇಳಿದ್ದಾರೆ. ಇನ್ನೂ ಕಾಂಗ್ರೆಸ್ ಒತ್ತಾಯ ಜೋರಾದ ಬಳಿಕ ಈಗ ಕೇಂದ್ರ ಸರ್ಕಾರವು ಎಚ್ಚೆತ್ತು ಜನ ಗಣತಿಯ ಜೊತೆ ಜಾತಿ ಗಣತಿಯನ್ನು ಮಾಡುವುದಾಗಿ ಘೋಷಿಸಿರುವುದು ಸ್ವಾಗತಾರ್ಹ. ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಮತ್ತು ನಮ್ಮ ರಾಷ್ಟ್ರದಾದ್ಯಂತ ಲಕ್ಷಾಂತರ ಸಮುದಾಯಗಳಿಗೆ ಇದೊಂದು ಗೆಲುವಿನ ಸಂಕೇತವಾಗಿದೆ. ನಮ್ಮ ನಾಯಕರಾದ ರಾಹುಲ್ ಗಾಂಧಿಯವರು, ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಎಲ್ಲಾ ಹಿರಿಯ ಕಾಂಗ್ರೆಸ್ ನಾಯಕರ ಅವಿರತ ಪ್ರತಿಪಾದನೆಯಿಂದಾಗಿ ಅಂತಿಮವಾಗಿ 11ವರ್ಷಗಳ ಬಳಿಕ ಈ ನಿರ್ಣಾಯಕ ವಿಷಯ ಮುನ್ನೆಲೆಗೆ ಬಂದಿದೆ. ಈ ಗಣತಿಯು ದುರ್ಬಲ ವರ್ಗಗಳ ಸಬಲೀಕರಣ ಹಾಗೂ ವಿವಿಧ ಜಾತಿಗಳು ಎದುರಿಸುತ್ತಿರುವ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಅಸಮಾನತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಪಾರದರ್ಶಕವಾಗಿ ಪರಿಶೀಲಿಸಿ, ವ್ಯವಸ್ಥಿತವಾಗಿ ಅಸಮಾನತೆಗಳನ್ನು ಪರಿಹರಿಸಲು ಜಾತಿ ಜನಗಣತಿ ಮುಖ್ಯ ಎಂದು ಹೇಳಿದ್ದಾರೆ.

ಇನ್ನೂ ಈ ವೇಳೆ ಕೆಪಿಸಿಸಿ ಮಾಧ್ಯಮ ವಿಭಾಗದ ಅಧ್ಯಕ್ಷ ರಮೇಶ್ ಬಾಬು, ಕೆಪಿಸಿಸಿ ಪದವೀಧರ ವಿಭಾಗದ ಅಧ್ಯಕ್ಷ ಎ.ಎನ್ ನಟರಾಜಗೌಡ, ಕೆಪಿಸಿಸಿ ಕಾರ್ಮಿಕರ ವಿಭಾಗದ ಅಧ್ಯಕ್ಷ ಪುಟ್ಟಸ್ವಾಮಿ ಗೌಡ, ಅಧ್ಯಕ್ಷ ಲಕ್ಷ್ಮೀ ವೆಂಕಟೇಶ್, ಕೆಪಿಸಿಸಿ ಪರಿಶಿಷ್ಟ ಜಾತಿ (ಎಸ್.ಸಿ) ಘಟಕದ ಅಧ್ಯಕ್ಷ ಧರ್ಮಸೇನ, ಕೆಪಿಸಿಸಿ ಪರಿಶಿಷ್ಟ ವಿಭಾಗದ ಅಧ್ಯಕ್ಷ ಎಂ.ವಿಜಯನಾಯಕ್, ಕೆಪಿಸಿಸಿ ಮಾಜಿ ಸೈನಿಕರ ವಿಭಾಗದ ಅಧ್ಯಕ್ಷ ಮಂಜುನಾಥ್ ಸೇರಿದಂತೆ ಅನೇಕ ಮುಖಂಡರು ಹಾಜರಿದ್ದರು.

# ಧರ್ಮದ ಹೆಸರಿನಲ್ಲಿ ಹಿಂಸೆ ಮಾಡುವ ಶಕ್ತಿಗಳು ಹುಟ್ಟಿಕೊಂಡಿವೆ: ಸಂಸದ ಬೊಮ್ಮಾಯಿ ಆತಂಕ

## ಬಸವಣ್ಣನ ತತ್ವ ಪಾಲಿಸಿದರೆ ನಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ: ಬಸವರಾಜ ಬೊಮ್ಮಾಯಿ



**ಬೆಂಗಳೂರು, ಮೇ 3:** ಬಸವಣ್ಣನವರು ದಯವೇ ಧರ್ಮದ ಮೂಲವಯ್ಯ ಅಂತ ಒಂದೇ ಪದದಲ್ಲಿ ಹೇಳಿದ್ದಾರೆ. ಆದರೆ, ಧರ್ಮದ ಹೆಸರಿನಲ್ಲಿ ಹಿಂಸೆ ಮಾಡುವ ಶಕ್ತಿಗಳು ಹುಟ್ಟಿಕೊಂಡಿವೆ. ಬಸವಣ್ಣನ ತತ್ವ ಪಾಲಿಸಿದರೆ ನಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ರವೀಂದ್ರ ಕಲಾಕ್ಷೇತ್ರದಲ್ಲಿ ಬಸವ ವೇದಿಕೆ ಬೆಂಗಳೂರು ಏರ್ಪಡಿಸಿದ್ದ ಬಸವ ಜಯಂತಿ ಹಾಗೂ ಬಸವಶ್ರೀ ಮತ್ತು ವಚನ ಸಾಹಿತ್ಯಶ್ರೀ ಪ್ರಶಸ್ತಿ ಪ್ರದಾನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಸವಣ್ಣ ಒಬ್ಬ ವಿಸ್ಮಯ ವ್ಯಕ್ತಿ. ಯಾರಾದರು ಬಸವಣ್ಣನನ್ನು ಪರಿಪೂರ್ಣವಾಗಿ ಅರ್ಥ ಮಾಡಿಕೊಂಡಿದ್ದೇನೆ ಎಂದರೆ ಆ ವ್ಯಕ್ತಿಗೆ ಇನ್ನೂ ಪರಿಪೂರ್ಣತೆ ಬಂದಿಲ್ಲ ಎಂದರ್ಥ. ಬಸವಣ್ಣ ಅಂದಿಗೂ ಪ್ರಸ್ತುತ ಇಂದಿಗೂ ಪ್ರಸ್ತುತ. ಒಂದು ಆಯಾಮದಲ್ಲಿ ಅವನು ಆಗಿನ ವಾಸ್ತವದ ಬಗ್ಗೆ ಮಾತನಾಡಿದ್ದರು. ಇನ್ನೊಂದು ಆಯಾಮದಲ್ಲಿ ಬಸವಣ್ಣ ಅಸಮಾನತೆ, ತಾರತಮ್ಯದ ವಿರುದ್ಧ ಮಾತನಾಡಿದ್ದರು. ಅವು ಇಂದಿಗೂ ಜೀವಂತವಾಗಿವೆ ಎಂದರೆ ಸಂತೋಷ ಪಡುವ ವಿಷಯವಲ್ಲ. ಇವತ್ತು ನಮ್ಮ ಸಮಾಜದಲ್ಲಿ ನಡೆಯುತ್ತಿರುವದನ್ನು ನೋಡಿದಾಗ ಬಸವಣ್ಣನವರ ಚಿಂತನೆಗೆ ನಾವು ಎಷ್ಟು ಗೌರವ ಕೊಟ್ಟಿದ್ದೇವೆ ಎನ್ನುವುದು ಅರಿವಿಗೆ ಬರುತ್ತದೆ ಎಂದರು. ಸಮಾಜದಲ್ಲಿ ಮೂರು ಥರದ ವ್ಯಕ್ತಿಗಳು ಇರುತ್ತಾರೆ. ಕೆಲವರು ಭೂತಕಾಲದ ಬಗ್ಗೆ ಮಾತನಾಡುತ್ತಾರೆ. ಅವರು ವಾಸ್ತವದ ಬಗ್ಗೆ ಮಾತನಾಡುವುದೇ ಇಲ್ಲ. ಎರಡನೇಯವರು ಕ್ರಾಂತಿಕಾರಿಗಳಾಗಿರುತ್ತಾರೆ. ಶರಣರ ಕ್ರಾಂತಿ, ಸ್ವಾತಂತ್ರ್ಯ ಹೋರಾಟ, ರಷ್ಯನ್ಕ್ರಾಂತಿ ಯಾಕೆ ಬಹಳ ದಿನ ಉಳಿಯಲಿಲ್ಲ. ಆ ವ್ಯವಸ್ಥೆಯನ್ನು ಮುಂದುವರೆಸಿಕೊಂಡು ಹೋಗಲು ನಾವು ವಿಫಲರಾಗಿದ್ದೇವೆ. ಬಸವಣ್ಣ ಕ್ರಾಂತಿ ಕಾರಿ ಅಂತ ಹೇಳುತ್ತೇವೆ. ಆದರೆ, ಆತ ಮಾಡಿದ ಕ್ರಾಂತಿ ಏನಾಯಿತು ಎಂದು ನೋಡಬೇಕು ಎಂದರು. ಇನ್ನೊಬ್ಬರು ರಿಫಾರ್ಮರ್ಸ್ ಇದರಲ್ಲಿ ಬುದ್ದ, ಬಸವ, ಮಹಾವೀರ ಅವರು ಕಾಲ ಮೀರಿ ಬದುಕುತ್ತಾರೆ. ಅಂತಹ ಶ್ರೇಷ್ಠ ವ್ಯಕ್ತತ್ವ ಹೊಂದಿರುವ ಇತಿಹಾಸಕ್ಕೆ ನಾವು ಸೇರಿದ್ದೇವೆ. ಅದರ ಅರಿವಿಲ್ಲದೆ ನಾವು ತಾತ್ಕಾಲಿಕ ಲೋಕದಲ್ಲಿದ್ದರೆ ನಮಗೆ ಮೂಲ ಆಳದ ಬಗ್ಗೆ ಅರಿವು ಇರುವುದಿಲ್ಲ ಎಂದರು. ಒಂದು ಬಾವಿ ಪಕ್ಕದಲ್ಲಿ ಹಳ್ಳ ಇತ್ತು. ಅದು ಬಾವಿಗೆ ನೀನು ನಿಂತಲ್ಲೆ ನಿಂತಿದ್ದೀಯಾ, ನಾನು ಹರಿದು ಎಲ್ಲರಿಗೂ ನೀರು ಕೊಡುತ್ತೇನೆ ನಾನೇ ಶ್ರೇಷ್ಠ ಎಂದು ಹೆಳುತ್ತದೆ.

ಅದಕ್ಕೆ ಬಾವಿ ನಾನು ಆಳವಾಗಿ ಒಂದೇ ಕಡೆ ಇದ್ದು ಜನರ ಸಂಕಷ್ಟಕ್ಕೆ ಆಗುತ್ತೇನೆ ಎಂದು ಹೇಳುತ್ತದೆ. ಅದೆ ರೀತಿ ವಚನ ಸಾಹಿತ್ಯ, ಯಾವುದೇ ವೇದ ಪುರಾಣಕ್ಕೂ ಕಡಿಮೆ ಇಲ್ಲದ ಸಾಮಾನ್ಯ ಜನರಿಗೂ ಅರ್ಥವಾಗುವ ರೀತಿಯಲ್ಲಿ ಇದೆ ಎಂದರು.

ಬಸವಣ್ಣನವರು ದಯವೇ ಧರ್ಮದ ಮೂಲವಯ್ಯ ಅಂತ ಒಂದೇ ಪದದಲ್ಲಿ ಹೇಳಿದ್ದಾರೆ. ಆದರೆ, ಧರ್ಮದ ಹೆಸರಿನಲ್ಲಿ ಹಿಂಸೆ ಮಾಡುವ ಶಕ್ತಿಗಳು ಹುಟ್ಟಿಕೊಂಡಿವೆ. ಇಷ್ಟೆಲ್ಲ ನಮ್ಮ ಸುತ್ತಲೂ ನಡೆಯುತ್ತಿದ್ದರೂ ನಾವು ಏನೂ ಮಾಡಲು ಆಗುತ್ತಿಲ್ಲ ಎಂದು ಅಸಹಾಯಕತೆ ಮೂಡುತ್ತಿದೆ. ಅದು ಮೂಡಬಾರದು. ಬಸವ ಸಾಹಿತ್ಯ ಓದಬೇಕು, ಅದನ್ನು ಪ್ರಚಾರ ಮಾಡುವ ಮೂಲಕ ಶಾಂತಿ ಸ್ಥಾಪಿಸಬೇಕು. ರೇಣುಕಾಚಾರ್ಯ ಮಾನವ ದರ್ಮಕ್ಕೆ ಜಯವಾಗಲಿ ಎಂದರು. ನಾವು ಮೂಲ ಮರೆತಿದ್ದೇವೆ. ಬಸವಣ್ಣನನ್ನು ಹಿಡಿದುಕೊಂಡರೆ ನಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ ಎಂದು ಹೇಳಿದರು. ಯಾವಾಗ ಬಸವ ಜಯಂತಿ ನಾಡಿನ ಪ್ರತಿಯೊಂದು ಹರಿಜನಕೇರಿಯಲ್ಲಿ ಆಗುತ್ತದೊ ಆಗ ರಾಜ್ಯ ಉದ್ದಾರವಾಗುತ್ತದೆ. ಈ ಜಗತ್ತಿನ ಮೂಲಭೂತ ಬದಲಾವಣೆ ಮಾಡಿರುವುದು ಸರ್ಕಾರಗಳು, ದೊಡ್ಡ ಶಕ್ತಿಗಳಲ್ಲಾ, ವ್ಯಕ್ತಿಗಳು, ಐನ್ ಸ್ಟಿನ್, ಬುದ್ದ, ಮಹಮದ್ ಪೈಗಂಬರ್, ಬಸವಣ್ಣ. ಎಲ್ಲರೂ ದೊಡ್ಡ ವ್ಯಕ್ತಿಗಳು. ಬದುಕಿನಲ್ಲಿ ಕೇವಲ ತ್ಯಾಗಮಾಡಿದರೆ ಸಾಲದು ನಿಮ್ಮ ಮನದಾಳದ ಮಾತು ಹಂಚಿಕೊಂಡಾಗ ಮಾತ್ರ ಸಾಕ್ಷಾತ್ಕಾರ ಬರುತ್ತದೆ. ಸ್ವಾಮಿ ವಿವೇಕಾನಂದರು ತಮಗೆ ಜ್ಞಾನೋದಯ ಆಗಿದೆ ಎಂದು ಹೇಳಿದಾಗ ಅವರಿಗೆ ರಾಮಕೃಷ್ಣ ಪರಮಹಂಸರು ನಿನ್ನ ಜ್ಞಾನ ಜಗತ್ತಿಗೆ ತಿಳಿದಾಗ ನಿನಗೆ ಜ್ಞಾನೋದಯ ಆಗುತ್ತದೆ ಎಂದು ಹೇಳಿದ್ದರು. ಅವರ ಮಾತಿನಂತೆ ವಿವೇಕಾನಂದರು ನಡೆದುಕೊಂಡು ಜ್ಞಾನ ಹಂಚಿದರು ಎಂದು ಹೇಳಿದರು. ನಾಡೋಜ ಗೋ.ರು.ಚನ್ನಬಸಪ್ಪ ಅವರ ಸಾಹಿತ್ಯ ದೊಡ್ಡ ಆಸ್ತಿ, ಅವರ ಜ್ಞಾನ, ಶಕ್ತಿಯನ್ನು ಬಳಸಿಕೊಳ್ಳಬೇಕು ಎಂದರು.

## ವಚನ ಸಾಹಿತ್ಯದಲ್ಲಿ ಫ.ಗು.ಹಳಕಟ್ಟಿ ಸಾಧನೆ ಅಜರಾಮರ: ಎಂ.ಬಿ.ಪಾಟೀಲ

ಕಾಲಗರ್ಭದಲ್ಲಿ ಮಾಯವಾಗಿ ಹೋಗುತ್ತಿದ್ದ ವಚನ ಸಾಹಿತ್ಯವನ್ನು ಮತ್ತು ನೂರಾರು ಸಮುದಾಯಗಳಿಂದ ಬಂದ ವಚನಕಾರರನ್ನು ಬೆಳಕಿಗೆ ತಂದ ಕೀರ್ತಿ ಫ. ಗು. ಹಳಕಟ್ಟಿ ಅವರಿಗೆ ಸಲ್ಲುತ್ತದೆ. ವಚನ ಸಾಹಿತ್ಯ ಸಂಶೋಧನೆಗೆ ಸಂಬಂಧಿಸಿದಂತೆ ಅವರು ಶ್ರೇಷ್ಠವಾದ ಕೆಲಸವನ್ನು ಮಾಡಿ ಹೋಗಿದ್ದಾರೆ ಎಂದು ಸಚಿವ ಮತ್ತು ವಿಜಯಪುರದ ಬಿಎಲ್‌ಡಿಇ ಶಿಕ್ಷಣ ಸಂಸ್ಥೆಯ ಭಾಗವಾಗಿರುವ ಡಾ. ಫ. ಗು.ಹಳಕಟ್ಟಿ ಸಂಶೋಧನಾ ಕೇಂದ್ರದ ಅಧ್ಯಕ್ಷರೂ ಆಗಿರುವ ಎಂ ಬಿ ಪಾಟೀಲ ಸ್ಮರಿಸಿದ್ದಾರೆ. ಇದೇ ಸಂದರ್ಭದಲ್ಲಿ ಅವರ ಹೆಸರಿನಲ್ಲಿರುವ ಸಂಶೋಧನಾ ಕೇಂದ್ರವು ಆ ಪರಂಪರೆಯನ್ನು ಮುಂದುವರಿಸಿದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ. ತಮ್ಮ ಕೆಲಸದ ಪ್ರಕಟಣೆಗಳಿಗೆ ಅವರು ಸ್ವಂತ ಮನೆಯನ್ನೂ ಮಾರಾಟ ಮಾಡಿ, ಮುದ್ರಣಾಲಯ ಸ್ಥಾಪಿಸಿದರು. ಈಗ ಸಂಶೋಧನಾ ಕೇಂದ್ರವು ವಿದ್ವಾಂಸ ಕೃಷ್ಣ ಕೊಲ್ಹಾರ ಕುಲಕರ್ಣಿ ಅವರ ಸಂಪಾದಕತ್ವದಲ್ಲಿ ಆದಿಲಶಾಹಿ ಸಾಹಿತ್ಯ, ದಾಸ ಸಾಹಿತ್ಯ ಮತ್ತು ಎಂ.ಎಂ.ಕಲ್ಬುರ್ಗಿ ಅವರ 45 ಸಂಪುಟಗಳನ್ನು ಪ್ರಕಟಿಸುತ್ತಿದೆ ಎಂದು ಪಾಟೀಲ ನುಡಿದಿದ್ದಾರೆ.




ಸಚಿವರು ಬಸವ ಜ್ಯೋತಿ ಸಂಚಿಕೆಯನ್ನು ಬಿಡುಗಡೆ ಮಾಡಿದರು. ಫ.ಗು.ಹಳಕಟ್ಟಿಯವರು ವಚನ ಸಾಹಿತ್ಯ, ರಾಜಕಾರಣ, ಸಮಾಜಸೇವೆ, ವಾಣಿಜ್ಯ ಸಾಹಸ ಮುಂತಾದವುಗಳನ್ನು ಕೈಗೊಂಡ ಬಹುಮುಖ ವ್ಯಕ್ತಿತ್ವದ ಧೀಮಂತರಾಗಿದ್ದರು. ಅವರ ಪರಿಶ್ರಮದಿಂದಾಗಿ 250ಕ್ಕೂ ಹೆಚ್ಚು ವಚನಕಾರರು ಮತ್ತು ಸಾವಿರಾರು ವಚನಗಳು ಬೆಳಕಿಗೆ ಬಂದವು. ಮೂಲತಃ ಧಾರವಾಡದವರಾದರೂ ವಿಜಯಪುರದಲ್ಲಿ ನೆಲೆ ನಿಂತು, ವಚನ ಸಾಹಿತ್ಯ ಅಧ್ಯಯನ ಮತ್ತು ಸಂಶೋಧನೆಗೆ ತಮ್ಮನ್ನು ಸಮರ್ಪಿಸಿಕೊಂಡ ಮಹಾವ್ಯಕ್ತಿ ಅವರಾಗಿದ್ದಾರೆ.

ಹಿರಿಯ ಸಾಹಿತಿ ಗೊ.ರು.ಚನ್ನಬಸಪ್ಪ ಅವರಿಗೆ ಬಸವಶ್ರೀ ಹಾಗೂ ಗಾಯಕಿ ಎಂ ಡಿ ಪಲ್ಲವಿ ಅವರಿಗೆ ವಚನ ಸಾಹಿತ್ಯಶ್ರೀ ಪ್ರಶಸ್ತಿ ನೀಡಿ ಇದೇ ಸಂದರ್ಭದಲ್ಲಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಸಂಸದ ಬಸವರಾಜ ಬೊಮ್ಮಾಯಿ, ಬಸವ ವೇದಿಕೆ ಅಧ್ಯಕ್ಷ ಸಿ.ಸೋಮಶೇಖರ್, ರಂಗಕರ್ಮಿ ನಾಗರಾಜಮೂರ್ತಿ, ಮುಂತಾದವರು ಉಪಸ್ಥಿತರಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪಹಲ್ಗಾಮ್ ದಾಳಿ ಚರ್ಚೆ ವೇಳೆ ಜನಗಣತಿ ಘೋಷಣೆ ಅನುಮಾನಾಸ್ಪದ: ರಾಹುಲ್ ಗಾಂಧಿ

**ನವದೆಹಲಿ, ಮೇ 3:** ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಶುಕ್ರವಾರ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಕೇಂದ್ರ ಸರ್ಕಾರ ಮುಂದಿನ ಜನಗಣತಿಯೊಂದಿಗೆ ಜಾತಿ ಎಣಿಕೆಯನ್ನು ಘೋಷಿಸುವ ಸಮಯ ಅನುಮಾನಾಸ್ಪದವಾಗಿದೆ ಎಂದು ಹೇಳಿದರು, ಆದರೂ ಅವರು ಇದನ್ನು ದೇಶದಲ್ಲಿ ಸಾಮಾಜಿಕ ನ್ಯಾಯದತ್ತ ಮೊದಲ ಹೆಜ್ಜೆ ಎಂದು ಕರೆದರು.

ಸಭೆಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸಂಚುಕೋರರ ವಿರುದ್ಧ ಸ್ಪಷ್ಟ ಕ್ರಮವನ್ನು ಒತ್ತಾಯಿಸಿ ಕಾಂಗ್ರೆಸ್ ಕೇಂದ್ರದ ಮೇಲೆ ಚಾಟಿ ಬೀಸಲು ನಿರ್ಧರಿಸಿದೆ. ಈ ದಾಳಿಯ ಸಂಬಂಧ ಸಶಸ್ತ್ರ ಪಡೆಗಳಿಗೆ ಪ್ರತಿಕ್ರಿಯಿಸಲು ಸಂಪೂರ್ಣ ಸ್ವಾತಂತ್ರ್ಯವನ್ನು ನೀಡಲಾಗಿದೆ ಎಂಬ ಕೇಂದ್ರದ ಹೇಳಿಕೆಯು ಕಣ್ಣು ಹೊರೆಸುವ ತಂತ್ರ ಎಂದು ಪಕ್ಷದ ನಾಯಕರು ಹೇಳಿದ್ದಾರೆ.

ಪ್ರಸ್ತಾವಿತ ಜನಗಣತಿಯ ಕುರಿತು ಸರ್ಕಾರ ಯಾವುದೇ ವಿವರಗಳನ್ನು ಹಂಚಿಕೊಂಡಿಲ್ಲ ಮತ್ತು ಜನಗಣತಿ ನಡೆಸುವುದಕ್ಕೆ ಹಣವನ್ನು ಹಂಚಿಕೆ ಮಾಡಿಲ್ಲ ಎಂಬ ಅಂಶದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಅಗತ್ಯವನ್ನು ರಾಹುಲ್ ಒತ್ತಿ ಹೇಳಿದರು ಎಂದು ಮೂಲಗಳು ತಿಳಿಸಿವೆ. ಇಡೀ ದೇಶವು ಪಹಲ್ಗಾಮ್ ದಾಳಿಯ ಬಲಿಪಶುಗಳಿಗಾಗಿ ಈಗ ಶೋಕದಲ್ಲಿರುವುದರಿಂದ ಈ ಘೋಷಣೆಯ ಸಮಯ ಅನುಮಾನಾಸ್ಪದವಾಗಿದೆ ಎಂದು ರಾಹುಲ್ ಗಾಂಧಿ ಹೇಳಿದರು ಎಂದು ಸಭೆಯಲ್ಲಿ ಭಾಗವಹಿಸಿದ್ದ ನಾಯಕರೊಬ್ಬರು ತಿಳಿಸಿದರೆಂದು ವರದಿ ಮಾಡಿದೆ.

ಮುಂದಿನ ಜನಗಣತಿಯ ಜೊತೆಗೆ ಜಾತಿಗಣತಿಯನ್ನು ನಡೆಸಲಾಗುವುದು ಎಂದು ಸರ್ಕಾರ ಬುಧವಾರ ಘೋಷಿಸಿದೆ. ರಾಷ್ಟ್ರವ್ಯಾಪಿ ಜಾತಿಗಣತಿಯನ್ನು ಒತ್ತಾಯಿಸುವುದಕ್ಕೆ ಪ್ರಬಲ ಮತ್ತು ಗಟ್ಟಿ ಧ್ವನಿಯಾಗಬೇಕು ಎಂದು ಸಭೆಯು ತನ್ನ ಅಂಗೀಕರಿಸಿದ ನಿರ್ಣಯದಲ್ಲಿ ಬಣ್ಣಿಸಿರುವ ರಾಹುಲ್, ಕಾಂಗ್ರೆಸ್ ಈಗ ಅನುಸರಿಸಲಿರುವ ಮಾರ್ಗಸೂಚಿಯನ್ನು ಸಹ ವಿವರಿಸಿದ್ದಾರೆ, ರಾಷ್ಟ್ರವ್ಯಾಪಿ ಜಾತಿಗಣತಿಯ ಬೇಡಿಕೆಯನ್ನು ಈಗ ಕಾಗದದ ಮೇಲೆ ಈಡೇರಿಸಲಾಗಿದೆ ಎಂದಿದ್ದಾರೆ.

ಸುಪ್ರೀಂ ಕೋರ್ಟ್ ವಿಧಿಸಿರುವ ಶೇ.50ಕ್ಕಿಂತ ಹೆಚ್ಚಿನ ಮೀಸಲಾತಿಯನ್ನು ಸಕ್ರಿಯಗೊಳಿಸಲು ಸಾಂವಿಧಾನಿಕ ತಿದ್ದುಪಡಿಗಾಗಿ ಪಕ್ಷವು ಈಗ ಒತ್ತಾಯಿಸುತ್ತದೆ ಎಂದು ಅವರು ಹೇಳಿದರು. ಅಲ್ಲದೆ, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಮೀಸಲಾತಿಯನ್ನು ಜಾರಿಗೆ ತರಲು 15(5)ನೇ ವಿಧಿಯನ್ನು ಜಾರಿಗೆ ತರಲು ಕಾಂಗ್ರೆಸ್ ಸರ್ಕಾರದ ಮೇಲೆ ಒತ್ತಡ ಹೇರುತ್ತದೆ ಎಂದು ಮೂಲಗಳು ತಿಳಿಸಿವೆ. ಜಾತಿ ಜನಗಣತಿಯ ಕುರಿತಾದ ಅಥವಾ ನಿರ್ಣಯವು 15(5)ನೇ ವಿಧಿಯ ಅನುಷ್ಠಾನದ ಅಗತ್ಯವನ್ನು ಒತ್ತಿಹೇಳಿದೆ. 2005ರಲ್ಲಿ ಕಾಂಗ್ರೆಸ್ ನೇತೃತ್ವದ ಯುಪಿಎ I ಸರ್ಕಾರದ ಅಡಿಯಲ್ಲಿ 93ನೇ ಸಾಂವಿಧಾನಿಕ ತಿದ್ದುಪಡಿಯ ಮೂಲಕ ಸೇರಿಸಲಾದ ನಿಬಂಧನೆಯನ್ನು ಸಕ್ರಿಯಗೊಳಿಸುವುದು ತಡವಾಯಿತು ಎಂದು ಅವರು ಹೇಳಿದರು.

ಖಾಸಗಿ ಸಂಸ್ಥೆಗಳು, ಉನ್ನತ ಶಿಕ್ಷಣದಲ್ಲಿ ಹೆಚ್ಚು ಪ್ರಬಲ ಪಾತ್ರ ವಹಿಸುವ ಯುಗದಲ್ಲಿ ಅಂಚಿನಲ್ಲಿರುವ ಸಮುದಾಯಗಳನ್ನು ಇಲ್ಲಿಂದ ಹೊರಗಿಡುವುದು ಅಸಮಾನತೆಯನ್ನು ಇನ್ನಷ್ಟು ಹದಗೆಡಿಸುತ್ತದೆ. 15(5)ನೇ ವಿಧಿಯು ಕೇವಲ ಸಾಂವಿಧಾನಿಕ ನಿಬಂಧನೆಯಲ್ಲ, ಇದು ಸಾಮಾಜಿಕ ನ್ಯಾಯದ ಕಡ್ಡಾಯವಾಗಿದೆ. ಇದರಿಂದ ಸರಕಾರಿ ಮತ್ತು ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಒಬಿಸಿಗಳು,



ಇಬಿಸಿಗಳು, ದಲಿತರು ಮತ್ತು ಆದಿವಾಸಿಗಳಿಗೆ ಗುಣಮಟ್ಟದ ಶಿಕ್ಷಣಕ್ಕೆ ಅವಕಾಶ ದೊರಕುತ್ತದೆ ಎಂದು ಕಾಂಗ್ರೆಸ್ ದೃಢವಾಗಿ ನಂಬುತ್ತದೆ ಎಂದು ನಿರ್ಣಯವು ಹೇಳಿದೆ. ಕೇಂದ್ರವು ಜಾತಿಗಣತಿಯನ್ನು ಪ್ರಾಮಾಣಿಕವಾಗಿ ನಡೆಸಲು ಸಿದ್ಧರಿದ್ದರೆ, ಕಾಂಗ್ರೆಸ್ ನೇತೃತ್ವದ ತೆಲಂಗಾಣ ರಾಜ್ಯ ಸರ್ಕಾರ ನಡೆಸಿದ ಸಾಮಾಜಿಕ ಆರ್ಥಿಕ, ಶೈಕ್ಷಣಿಕ, ಉದ್ಯೋಗ, ರಾಜಕೀಯ ಮತ್ತು ಜಾತಿಸಮೀಕ್ಷೆಯನ್ನು ಉಲ್ಲೇಖಿಸಿ ತೆಲಂಗಾಣ ಮಾದರಿಯನ್ನು ಅಳವಡಿಸಿಕೊಳ್ಳಬೇಕಾಗುತ್ತದೆ ಎಂದು ರಾಹುಲ್ ಹೇಳಿದರು.

ಈ ಪ್ರಕ್ರಿಯೆಯನ್ನು ವಿಳಂಬ ಮಾಡಬಾರದು. ಎಲ್ಲಾ ರಾಜಕೀಯ ಪಕ್ಷಗಳನ್ನು ಪೂರ್ಣ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ಈ ವಿಷಯದ ಬಗ್ಗೆ ಸಂಸತ್ತು ತಕ್ಷಣವೇ ಚರ್ಚೆ ನಡೆಸಬೇಕು. ಪ್ರಶ್ನಾವಳಿ ಮತ್ತು ವಿಧಾನದ ತಯಾರಿಕೆಯಿಂದ ಹಿಡಿದು ಎಣಿಕೆ, ವರ್ಗೀಕರಣ ಮತ್ತು ಅಂತಿಮವಾಗಿ ದತ್ತಾಂಶದ ಪ್ರಕಟಣೆಯವರೆಗೆ ಜನಗಣತಿಯ ಪ್ರತಿಯೊಂದು ಹಂತಕ್ಕೂ ಸರ್ಕಾರವು ತಕ್ಷಣವೇ ಅಗತ್ಯ ಹಣವನ್ನು ಹಂಚಿಕೆ ಮಾಡಬೇಕು ಮತ್ತು ಸ್ಪಷ್ಟ ಸಮಯವನ್ನು ಘೋಷಿಸಬೇಕು ಎಂದು ರಾಹುಲ್ ಒತ್ತಾಯಿಸಿದರು. ಸಂಗ್ರಹಿಸಿದ ದತ್ತಾಂಶವು ವಿಶೇಷವಾಗಿ ಮೀಸಲಾತಿ, ಕಲ್ಯಾಣ ಯೋಜನೆಗಳು, ಶೈಕ್ಷಣಿಕ ಪ್ರವೇಶ ಮತ್ತು ಉದ್ಯೋಗಾವಕಾಶಗಳ ಕ್ಷೇತ್ರಗಳಲ್ಲಿ ಸಾರ್ವಜನಿಕ ನೀತಿಯ ವ್ಯಾಪಕ ವಿಮರ್ಶೆಗೆ ಆಧಾರವಾಗಿ ಕಾರ್ಯನಿರ್ವಹಿಸಬೇಕು. ಜಾತಿ ಜನಗಣತಿಯನ್ನು ಸರಿಯಾಗಿ ವಿನ್ಯಾಸಗೊಳಿಸಿ ಕಾರ್ಯಗತಗೊಳಿಸಿದರೆ ಅದು ಸಮಾಜದ ಎಲ್ಲಾ ವರ್ಗಗಳ ಪ್ರಯೋಜನಕ್ಕಾಗಿ ಕೆಲಸ ಮಾಡುತ್ತದೆ ಎಂದು ಸಭೆಯು ಒಪ್ಪುತ್ತದೆ ಎಂದು ಅಥವಾ ನಿರ್ಣಯವು ಸೇರಿಸಿದೆ.

ಏಪ್ರಿಲ್ 22ರಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಪಾಕಿಸ್ತಾನಕ್ಕೆ ಪಾಠ ಕಲಿಸುವ ಮತ್ತು ಭಯೋತ್ಪಾದನೆಯನ್ನು ನಿರ್ಣಾಯಕವಾಗಿ ನಿಗ್ರಹಿಸುವ ಅಗತ್ಯವನ್ನು ಒತ್ತಿಹೇಳುವ ನಿರ್ಣಯವನ್ನು ಅಥವಾ ಅಂಗೀಕರಿಸಿದೆ. ಇಡೀ ದೇಶವು ಈ ಘಟನೆಯ ಹೊಣೆಗಾರಿಕೆ ಯಾರದ್ದು, ಇದಕ್ಕೆ ಸಂಬಂಧಿಸಿದ ಉತ್ತರಗಳು ಮತ್ತು ನ್ಯಾಯಕ್ಕಾಗಿ ಕಾಯುತ್ತಿದೆ ಎಂದು ಅದು ಹೇಳಿದೆ. ದೇಶದ ಅತ್ಯಂತ ಬಿಗಿ ಭದ್ರತೆಯ ಪ್ರದೇಶಗಳಲ್ಲಿ ಒಂದಾದ ಭದ್ರತೆ ಮತ್ತು ಗುಪ್ತಚರದಲ್ಲಿ ಗಂಭೀರ ಲೋಪಗಳ ಹೊಣೆಗಾರಿಕೆಗಾಗಿ ಅಥವಾ ತನ್ನ ಹಿಂದಿನ ಬೇಡಿಕೆಯನ್ನು ಪುನರುಚ್ಚರಿಸುತ್ತದೆ. ಭಾರತದ ಜನರು ಘಟನೆಯ ಪಾರದರ್ಶಕತೆ ಮತ್ತು ಯಾರ ಹೊಣೆಗಾರಿಕೆ ಎಂದು ಪ್ರಶ್ನಿಸಲು ಅರ್ಹರು ಎಂದು ನಿರ್ಣಯದಲ್ಲಿ ಹೇಳಲಾಗಿದೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಿಡಬ್ಲ್ಯೂಸಿ ಸಭೆಯಲ್ಲಿ ತಮ್ಮ ಭಾಷಣದಲ್ಲಿ, ಈ ಘಟನೆ ನಡೆದು ಹಲವು ದಿನಗಳ ನಂತರವೂ ಸರ್ಕಾರದಿಂದ ಯಾವುದೇ ಸ್ಪಷ್ಟ ಕಾರ್ಯತಂತ್ರ ಹೊರಹೊಮ್ಮಿಲ್ಲ ಎಂದು ಹೇಳಿದರು.

ಸಭೆಯ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ನಾಯಕ ಭೂಪೇಶ್ ಬಘೇಲ್, ಲಾಲ್ ಆಂಖ್ (ಕೆಂಪು ಕಣ್ಣು) ಬಗ್ಗೆ ಮಾತನಾಡುತ್ತಿದ್ದ 56 ಇಂಚಿನ ಎದೆಯ ಪ್ರಧಾನಿ ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ ಅಲ್ಲದೆ, ಪಹಲ್ಗಾಮ್ ಪ್ರವಾಸಿ ತಾಣದಲ್ಲಿ ಯಾವುದೇ ಭದ್ರತೆ ಏಕೆ ಇರಲಿಲ್ಲ ಎಂದು ಪ್ರಶ್ನಿಸಿದರು. ಆದಾಗ್ಯೂ, ಕಾಂಗ್ರೆಸ್ ನಾಯಕತ್ವವು ಜವಾಬ್ದಾರಿಯುತ ವಿರೋಧ ಪಕ್ಷವಾಗಿ ತನ್ನನ್ನು ತಾನು ಬಿಂಬಿಸಿಕೊಳ್ಳುವ ಗುರಿಯನ್ನು ಹೊಂದಿರುವ ಪಕ್ಷಪಾತದ ಸಮಯ ಇದಲ್ಲ ಎಂದು ಪುನರುಚ್ಚರಿಸಲು ಎಚ್ಚರಿಕೆಯಿಂದಿತ್ತು. ನಾವು ಪಕ್ಷಪಾತದ ವಿಭಜನೆಗಳನ್ನು ಮೀರಿ ಎದ್ದು ನಿಂತು ಭಾರತದ ಒಗ್ಗಟ್ಟಿಗೆ ನಿಲ್ಲುತ್ತೇವೆ ಮತ್ತು ಒಡಕನ್ನುಂಟುಮಾಡುವುದಿಲ್ಲವೆಂಬ ಸ್ಪಷ್ಟ ಸಂದೇಶವನ್ನು ಕಳುಹಿಸಬೇಕು ಎಂದು ನಿರ್ಣಯವು ಹೇಳಿದೆ.

ಸಭೆಯಲ್ಲಿ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ನಿರ್ಣಯದಲ್ಲಿ ವಿಚಾರಣೆ ಎಂಬ ಪದವನ್ನು ಬಳಸದಂತೆ ಸಲಹೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಅವರ ಒತ್ತಾಯದ ಮೇರೆಗೆ ಅದನ್ನು ಜವಾಬ್ದಾರಿ ಎಂಬ ಪದಕಕ್ಕೆ ಬದಲಾಯಿಸಲಾಯಿತು. ಇಡೀ ದೇಶವು ಹೊಣೆಗಾರಿಕೆ, ಉತ್ತರಗಳು ಮತ್ತು ನ್ಯಾಯಕ್ಕಾಗಿ ಕಾಯುತ್ತಿದೆ ಎಂದು ನಿರ್ಣಯದಲ್ಲಿನ ಒಂದು ಸಾಲು ಹೇಳುತ್ತದೆ.

ಪಂಜಾಬ್ ಮಾಜಿ ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ನಾಯಕ ಚರಣ್‌ಜಿತ್ ಸಿಂಗ್ ಚನ್ನಿ ಮಾತನಾಡಿ ಯಾವುದೇ ವಿವಾದಕ್ಕೆ ಸಿಲುಕದಂತೆ ಕಾಂಗ್ರೆಸ್ ಪ್ರತಿಕ್ರಿಯೆ.

## ಕೇಂದ್ರಕ್ಕೆ 4.5 ಲಕ್ಷ ಕೋಟಿ ತೆರಿಗೆ ಕೊಟ್ಟರೆ ರಾಜ್ಯಕ್ಕೆ ವಾಪಾಸ್ ಬರುವುದು 60 ಸಾವಿರ ಕೋಟಿ: ಸಿ.ಎಂ

**ಬೆಂಗಳೂರು ಮೇ 3:** ಆರ್ಥಿಕ ಇಲಾಖೆಗೆ ವಾಹನ, ಸಿಬ್ಬಂದಿ ಅಗತ್ಯವಿದ್ದರೆ ಕೊಡ್ತೇವೆ. ಆದರೆ ತೆರಿಗೆ ಸಂಗ್ರಹದ ಗುರಿ ಮುಟ್ಟಲೇಬೇಕು. ಇದರಲ್ಲಿ ರಾಜಿ ಆಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.



ಬ್ಯಾಂಕ್ವೆಂಟ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರ್ಥಿಕ ಇಲಾಖೆ ವತಿಯಿಂದ ಹೊಸ ವಾಹನಗಳಿಗೆ ಚಾಲನೆ ನೀಡಿ, ಅನುಕಂಪ ಆಧಾರಿತ ನೇಮಕಾತಿ ಆದೇಶ ವಿತರಿಸಿ ಮಾತನಾಡಿದರು. ತೆರಿಗೆ ವಂಚಿಸುವವರನ್ನು ಪತ್ತೆ ಹಚ್ಚಲು, ತೆರಿಗೆ ಸೋರಿಕೆ ತಡೆಯಲು ಅಗತ್ಯವಾದ ಎಲ್ಲಾ ಅನುಕೂಲಗಳನ್ನು ಒದಗಿಸಿಕೊಡಲು ಸರ್ಕಾರ ಸಿದ್ದವಿದೆ. ಆದರೆ, ತೆರಿಗೆ ಸಂಗ್ರಹದ ಗುರಿ ಮುಟ್ಟಲೇಬೇಕು. ಇದರಲ್ಲಿ ರಾಜಿ ಆಗುವ ಪ್ರಶ್ನೆಯೇ ಇಲ್ಲ ಎಂದರು. ವೇತನ ಆಯೋಗ ಶಿಫಾರಸ್ಸು ಮಾಡಿದ ವೇತನದಲ್ಲಿ ನಯಾಪೈಸೆ ಚೌಕಾಸಿ ಮಾಡದೆ ಅಷ್ಟೂ ವೇತನ ನೀಡಿದ್ದೇವೆ. ಸರ್ಕಾರಿ ನೌಕರರಿಂದಲೂ ಇಷ್ಟೇ ಪ್ರಮಾಣದಲ್ಲಿ ಕರ್ತವ್ಯ ನಿರೀಕ್ಷಿಸುತ್ತೇನೆ. ತೆರಿಗೆ ಸಂಗ್ರಹದಲ್ಲಿ ಗುರಿ ತಲುಪಲೇಬೇಕು ಎಂದರು.

ಮೋದಿ ಅವರು ಮುಖ್ಯಮಂತ್ರಿ ಆಗಿದ್ದಾಗ ಶೇ50 ರಷ್ಟು ತೆರಿಗೆ ರಾಜ್ಯಗಳಿಗೆ ವಾಪಾಸ್ ಕೊಡಬೇಕು ಎಂದು ಕೇಂದ್ರದ ಮೇಲೆ ಒತ್ತಡ ಹೇರಿದ್ದರು. ಈಗ ಇವರೇ ಪ್ರಧಾನಿ ಆದಾಗ ರಾಜ್ಯಗಳಿಗೆ ದೊಡ್ಡ ಮಟ್ಟದ ಅನ್ಯಾಯ ಮಾಡುತ್ತಿದ್ದಾರೆ ಎಂದು ಸಿಎಂ ತಿಳಿಸಿದ್ದಾರೆ..

ನಮಗೆ 11495 ಕೋಟಿ ರೂಪಾಯಿ ಹದಿನೈದನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಅನ್ಯಾಯವಾಗಿದೆ. ಹಣಕಾಸು ಸಚಿವೆ ಘೋಷಣೆ ಮಾಡಿದ್ದ ಹಣದಲ್ಲಿ ನಯಾ ಪೈಸೆಯನ್ನೂ ರಾಜ್ಯಕ್ಕೆ ಕೊಡಲಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ನಾವು ಗ್ಯಾರಂಟಿಗಳಿಗೆ ಹಣ ತೆಗೆದಿಟ್ಟಿದ್ದೀವಿ. ಜೊತೆಗೆ 83 ಸಾವಿರ ಕೋಟಿಯನ್ನು ಬಂಡವಾಳ ವೆಚ್ಚಕ್ಕೆ ತೆಗೆದಿರಿಸಿದ್ದೀವಿ. ಕಳೆದ ವರ್ಷ ನಾವು 52 ಸಾವಿರ ಕೋಟಿ ಬಂಡವಾಳ ವೆಚ್ಚ ಮಾಡಿದ್ದೆವು. ಈ ವರ್ಷ 31 ಸಾವಿರ ಕೋಟಿ ಹೆಚ್ಚಿನ ಬಂಡವಾಳ ವೆಚ್ಚ ಕೊಟ್ಟಿದ್ದೀವಿ. ಆದರೂ, ಸರ್ಕಾರದ ಬೊಕ್ಕಸದಲ್ಲಿ ಹಣ ಇಲ್ಲ ಎಂದು ಬಿಜೆಪಿ ಆರೋಪಿಸುತ್ತಿದೆ ಎಂದು ಟೀಕಿಸಿದರು

## ಜನಗಣತಿ ವರದಿಯಲ್ಲಿ ಲೋಪವಿದ್ದರೆ ಪರಿಷ್ಕರಿಸಲು ಸರ್ಕಾರ ಸಿದ್ಧ: ತಂಗಡಗಿ

**ಬೆಂಗಳೂರು,ಮೇ 3:** ಹಿಂದುಳಿದ ವರ್ಗಗಳ ಆಯೋಗ ಸಲ್ಲಿಸಿದ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ದತ್ತಾಂಶ (ಜಾತಿ ಜನಗಣತಿ)ಗಳ ವರದಿಯಲ್ಲಿ ಲೋಪವಿದ್ದರೆ ಪರಿಷ್ಕರಿಸಲು ಸರ್ಕಾರ ಸಿದ್ಧವಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ ಹೇಳಿದರು.

ಆದರೂ ಬಿಜೆಪಿ ನಾಯಕರು ಸಾರಾಸಗಟು ತಿರಸ್ಕಾರ ಮಾಡುತ್ತಿರುವುದು ಎಷ್ಟು ಸರಿ ಎಂದು ಕೇಳಿದರು.ಜನ ಗಣತಿಯೊಂದಿಗೆ ಜಾತಿ ಗಣತಿಗೆ ಕೇಂದ್ರ ಸರ್ಕಾರ ನಿರ್ಧರಿಸಿದ್ದನ್ನು ಸ್ವಾಗತಿಸುತ್ತೇವೆ. ರಾಜ್ಯ ಬಿಜೆಪಿ ನಾಯಕರ ರೀತಿಯಲ್ಲಿ ವಿರೋಧಿಸುವುದಿಲ್ಲ. ಕಾಂತರಾಜು ವರದಿ ಬಗ್ಗೆ ಚರ್ಚೆ, ತಪ್ಪುಗಳು ಇದ್ದರೆ ಸರಿಪಡಿಸಲು ಅವಕಾಶವಿದೆ ಎಂದರು.ಕಾಂತರಾಜು ವರದಿಯಲ್ಲಿ ಏನಿದೆ ಎಂದು ತಿಳಿದುಕೊಳ್ಳದೆ ಬಿಜೆಪಿ ನಾಯಕರು ವಿರೋಧಿಸುತ್ತಿದ್ದಾರೆ. ಜಾತಿ, ಜಾತಿಗಳ ನಡುವೆ ಅವರೇ ವಿಷ ಬೀಜ ಬಿತ್ತುತ್ತಿದ್ದಾರೆ. ಆದರೆ ಸಾಮಾಜಿಕ ನ್ಯಾಯ ಬಯಸುವ ಸಿಎಂ ಸಿದ್ದರಾಮಯ್ಯ ಮೇಲೆ ಗೂಬೆ ಕೂರಿಸುತ್ತಿದ್ದಾರೆ ಎಂದು ಶಿವರಾಜ್ ತಂಗಡಗಿ ಟೀಕಿಸಿದರು.

ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಹಿಂದುಳಿದ ಸಮುದಾಯಗಳನ್ನು ಅಭಿವೃದ್ಧಿಯ ಮುಖ್ಯ ವಾಹಿನಿಗೆ ತರಬೇಕು ಎನ್ನುವುದು ರಾಜ್ಯ ಸರ್ಕಾರದ ಆಶಯವಾಗಿದೆ. ಪೂರಕವಾಗಿ ಕಾರ್ಯಕ್ರಮ ರೂಪಿಸಲು ಸ್ಥಿತಿಗತಿಯ ದತ್ತಾಂಶಗಳು ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ಕೆ.ಜಯಪ್ರಕಾಶ್ ಹೆಗ್ಡೆಯವರು ಸಲ್ಲಿಸಿದ ವರದಿಯನ್ನು ಸರ್ಕಾರ ಸ್ವೀಕರಿಸಿ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಆಯೋಗದ ಅಧ್ಯಕ್ಷರನ್ನಾಗಿ ಕೆ.ಜಯಪ್ರಕಾಶ್ ಹೆಗ್ಡೆಯವರನ್ನು ನೇಮಿಸಿದ್ದು, ನಾವು ಅಧಿಕಾರಕ್ಕೆ ಬಂದ ಮೇಲೆ ಬದಲಿಸಲಿಲ್ಲ ಎಂದರು.ಬಿಜೆಪಿ ಆಡಳಿತದಲ್ಲಿದ್ದಾಗ ಆಯೋಗದ ವರದಿಯನ್ನು ಸ್ವೀಕರಿಸಲಿಲ್ಲ. ಕೆಲವು ಸಮುದಾಯಗಳಿಗೆ 2ಸಿ, 2ಡಿ ಪ್ರವರ್ಗಕ್ಕೆ ಸೇರಿಸಿದ್ದಾಗ ಎಲ್ಲವೂ ಸರಿಯಿತ್ತೆ ಎಂದು ಪ್ರಶ್ನಿಸಿದ ಶಿವರಾಜ್ ತಂಗಡಗಿ, ಕೇಂದ್ರ ಸರ್ಕಾರ ಕೂಡ ಅಧಿಕಾರಿಗಳಿಂದಲೇ ಜಾತಿ ಗಣತಿ ಮಾಡಿಸುತ್ತದೆ ಎಂದು ಹೇಳಿದರು.

## ಸುಹಾಸ್ ಶೆಟ್ಟಿ ಮನೆಗೆ ಭೇಟಿ ನೀಡಿ ಪೋಷಕರಿಗೆ ಸಾಂತ್ವನ ಹೇಳಿದ ಸಂಸದ ಕ್ಯಾ.ಬ್ರಿಜೇಶ್ ಚೌಟ

**ಮಂಗಳೂರು,ಮೇ 3:** ದಕ್ಷಿಣ ಕನ್ನಡ ಸಂಸದ ಕ್ಯಾ.ಬ್ರಿಜೇಶ್ ಚೌಟ ಅವರು ಕುವೈಟ್ ಭೇಟಿ ಕಾರ್ಯಕ್ರಮವನ್ನು ಅರ್ಧಕ್ಕೆ ಮೊಟಕುಗೊಳಿಸಿ ಬಂದಿದ್ದು, ಶನಿವಾರ ಮಂಗಳೂರಿಗೆ ಆಗಮಿಸಿದ ಕೂಡಲೇ ದುಷ್ಕರ್ಮಿಗಳಿಂದ ಬಲಿಯಾದ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಅವರ ಕಾರಿಂಜದಲ್ಲಿರುವ ಮನೆಗೆ ಭೇಟಿ ನೀಡಿ ಮಗನನ್ನು ಕಳೆದುಕೊಂಡು ದುಃಖದಲ್ಲಿರುವ ಕುಟುಂಬಸ್ಥರಿಗೆ ಸಾಂತ್ವನ ಹೇಳುವ ಜತೆಗೆ ಧೈರ್ಯ ತುಂಬಿದ್ದಾರೆ.



ಹಿಂದೂಗಳ ಪರ ಹೋರಾಟ ಮಾಡುತ್ತಿದ್ದ ಸುಹಾಸ್ ಶೆಟ್ಟಿಯನ್ನು ಮತೀಯವಾದಿಗಳು ಬರ್ಬರವಾಗಿ ಹತ್ಯೆ ಮಾಡಿರುವುದಕ್ಕೆ ತೀವ್ರ ನೋವು ಹಾಗೂ ಆಕ್ರೋಶ ವ್ಯಕ್ತಪಡಿಸಿರುವ ಕ್ಯಾ. ಚೌಟ ಅವರು, ಸುಹಾಸ್ ಶೆಟ್ಟಿ ಅವರ ತಂದೆ–ತಾಯಿ ಹಾಗೂ ಕುಟುಂಬಸ್ಥರ ಜತೆಗೆ ಘಟನೆಗೆ ಸಂಬಂಧಿಸಿದಂತೆ ಮಾತನಾಡಿ ಮಾಹಿತಿ ಪಡೆದುಕೊಂಡರು. ಅಲ್ಲದೆ, ಘಟನೆ ನಡೆದ ಸಂದರ್ಭದಲ್ಲಿ ವಿದೇಶದಲ್ಲಿದ್ದ ಕಾರಣ ತುರ್ತಾಗಿ ದೌಡಾಯಿಸಿ ಕುಟುಂಬಸ್ಥರ ದುಃಖದಲ್ಲಿ ಭಾಗಿಯಾಗಿ ನೊಂದವರಿಗೆ ಧೈರ್ಯ ತುಂಬಲು ಹಾಗೂ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಸಾಧ್ಯವಾಗದಿರುವುದಕ್ಕೆ ಅತೀವ ವಿಷಾದ ವ್ಯಕ್ತಪಡಿಸಿದ್ದಾರೆ.

ಮಗನನ್ನು ಕಳೆದುಕೊಂಡು ತೀವ್ರ ನೋವಿನಲ್ಲಿರುವ ಸುಹಾಸ್ ಕುಟುಂಬಕ್ಕೆ ನ್ಯಾಯ ಕೊಡಿಸುವುದಕ್ಕೆ ಎಲ್ಲ ರೀತಿಯ ಸಹಾಯ, ಬೆಂಬಲ ನೀಡಲಾಗುವುದು. ಮನೆಗೆ ಆಧಾರಸ್ತಂಭವಾಗಿದ್ದ ಸುಹಾಸ್ ಸಾವಿನಿಂದ ಅವರ ಕುಟುಂಬ ದಿಕ್ಕು ತೋಚದ ಸ್ಥಿತಿಯಲ್ಲಿದೆ. ತಾಯಿ ಕೂಡ ಅನಾರೋಗಕ್ಕೆ ಒಳಗಾಗಿದ್ದು, ಸೂಕ್ತ ಆರ್ಥಿಕ ಬೆಂಬಲದ ಅಗತ್ಯವಿದೆ. ಹೀಗಿರುವಾಗ, ಸರ್ಕಾರವು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಪರಿಹಾರವನ್ನು ನೀಡಬೇಕು. ಅಲ್ಲದೆ, ಈ ಕೊಲೆ ಪ್ರಕರಣವನ್ನು ಎನ್‌ಐಎ ತನಿಖೆಗೆ ಒತ್ತಡ ಹೇರುವ ಮೂಲಕ ಸುಹಾಸ್ ಸಾವಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮಟ್ಟದಲ್ಲಿಯೂ ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡುವುದಾಗಿ ಸಂಸದರು ಇದೇ ಸಂದರ್ಭದಲ್ಲಿ ಭರವಸೆ ನೀಡಿದ್ದಾರೆ.

## ಕೋಮು ವಿರೋಧಿ ಕಾರ್ಯಪಡೆ ರಚಿಸಲಾಗುವುದು: ಸಚಿವ ಪರಮೇಶ್ವರ್

**ಬೆಂಗಳೂರು ,ಮೇ 3:** ಆಗಾಗ ಕೋಮುಗಲಭೆಗಳು ಉಂಟಾಗಿವ ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗೆ ಸೀಮಿತವಾಗಿ ಪ್ರತ್ಯೇಕ ಕೋಮು ವಿರೋಧಿ ಕಾರ್ಯಪಡೆ ರಚಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ತಿಳಿಸಿದ್ದಾರೆ. ಪ್ರಚೋದನಕಾರಿ ಭಾಷಣಗಳು ಅಥವಾ ಹೇಳಿಕೆಗಳನ್ನು ನೀಡುವ ಯಾರಾದರೂ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ನಾವು ಅಧಿಕಾರಿಗಳಿಗೆ ಸೂಚಿಸಿದ್ದೇವೆ ಎಂದರು.ಕರಾವಳಿ ಜಿಲ್ಲೆಗಳಾದ ಉಡುಪಿ, ದ.ಕ.ದಲ್ಲಿ ಯಾವುದೇ ಕೋಮು ಭಾಷಣಗಳು, ದ್ವೇಷ ಭಾಷಣಗಳು ನಡೆದರೆ. ಕೋಮುವಾದವನ್ನು ಬೆಂಬಲಿಸುವ ಅಥವಾ ಉತ್ತೇಜಿಸುವವರ ವಿರುದ್ಧ ಕೋಮು ವಿರೋಧಿ ಕಾರ್ಯಪಡೆ ಕಠಿಣ ಕ್ರಮ ಕೈಗೊಳ್ಳುತ್ತದೆ ಎಂದರು. ಕರಾವಳಿ ಜಿಲ್ಲೆಗಳಲ್ಲಿ ಕೋಮುಗಲಭೆ ನಡೆಯುವ ನಿಟ್ಟಿನಲ್ಲಿ ಐಜಿ ಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ ಆಂಟಿ ಕಮ್ಯೂನಲ್ ಟಾಸ್ಕ್ ಫೋರ್ಸ್ ಎರಡು ವಾರಗಳಲ್ಲಿ ಆರಂಭವಾಗಲಿದೆ. ಈ ಟಾಸ್ಕ್ ಫೋರ್ಸ್ ಪೊಲೀಸರ ಜೊತೆಗೂಡಿ ಕಾರ್ಯನಿರ್ವಹಿಸಲಿದೆ ಎಂದು ಪರಮೇಶ್ವರ ತಿಳಿಸಿದರು. ಯಾವುದೇ ಸಮುದಾಯದವರು ಆಗಲೀ, ಕಾನೂನು ಉಲ್ಲಂಘನೆ ಮಾಡಲು ಬಿಡುವುದಿಲ್ಲ. ಇನ್ನು ಮುಂದೆ ಇಂತಹ ಘಟನೆಗಳು ಜಿಲ್ಲೆಯಲ್ಲಿ ನಡೆಯಬಾರದು. ಜಿಲ್ಲೆಯಲ್ಲಿ ಶಾಂತಿ ಸುವ್ಯವಸ್ಥೆ ಹಾಳು ಮಾಡಲು ಬಿಡುವುದಿಲ್ಲ

> ಕರಾವಳಿಯ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಕೋಮು ಸೌಹಾರ್ದ ರಕ್ಷಣೆಗಾಗಿ ನಕ್ಸಲ್ ನಿಗ್ರಹ ಪಡೆಯ ಮಾದರಿಯಲ್ಲಿ ಪ್ರತ್ಯೇಕವಾದ ಕೋಮು ಗಲಭೆ ನಿಗ್ರಹ ಪಡೆಯನ್ನು ರಚನೆ ಮಾಡಲಾಗುವುದು.
> **ಡಾ.ಜಿ.ಪರಮೇಶ್ವರ್** । ಗೃಹ ಸಚಿವ

ಎಂದು ಪರಮೇಶ್ವರ್ ಹೇಳಿದರು. ಅಲ್ಲದೇ ಮಂಗಳೂರು ನಗರಾದ್ಯಂತ 144 ಸೆಕ್ಷನ್ ಜಾರಿಯಾಗಿದೆ. ನಿನ್ನೆಯಿಂದ ಮೇ 6ರ ಬೆಳಗ್ಗೆ 6 ಗಂಟೆಯವರೆಗೂ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಗೃಹ ಸಚಿವರು ಮಂಗಳೂರಿನಲ್ಲಿ ಸಭೆ ನಡೆಸಿದ್ದು ಅದರಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಜಂಟಿಯಾಗಿ ಎಡಿಜಿಪಿ ಹಿತೇಶ್, ಕಮಿಷನರ್ ಅನುಪಮ್ ಅಗರ್ವಾಲ್ ಸೇರಿದಂತೆ ಅಧಿಕಾರಿಗಳು ಭಾಗಿಯಾಗಿದ್ದರು. ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ದ.ಕ.ಜಿಲ್ಲೆ ಮತ್ತು ಉಡುಪಿ ಜಿಲ್ಲೆಗೆ ಸೀಮಿತವಾಗಿ ಪ್ರತ್ಯೇಕವಾಗಿ ಆಂಟಿ ಕಮ್ಯೂನಲ್ ಟಾಸ್ಕ್ ಫೋರ್ಸ್ ಆರಂಭಿಸಲಾಗುವುದು ಎಂದರು. ಸುಹಾಸ್ ಶೆಟ್ಟಿ ಕೊಲೆ ಪ್ರಕರಣ ಸಂಬಂಧಪಟ್ಟ 8 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ. ಆ ಕುರಿತು ಹೆಚ್ಚಿನ ಮಾಹಿತಿಯನ್ನು ನೀಡಲಿದ್ದಾರೆ.

## ಸುಹಾನ್ ಶೆಟ್ಟಿ ಹತ್ಯೆ ಪ್ರಕರಣ: ಎಂಟು ಆರೋಪಿಗಳ ಬಂಧನ

**ಬೆಂಗಳೂರು, ಮೇ 3:** ಹಿಂದೂ ಸಂಘಟನೆಯ ಕಾರ್ಯಕರ್ತ ಹಾಗೂ ಕೊಲೆ ಆರೋಪಿ ಸುಹಾಸ್ ಶೆಟ್ಟಿ ಕೊಲೆ ಪ್ರಕರಣದಲ್ಲಿ ಮಂಗಳೂರು ಪೊಲೀಸರು 8 ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ. ಸುಹಾಸ್ ಶೆಟ್ಟಿಯನ್ನು ಮಂಗಳೂರಿನ ಬಜ್ಪೆ ವಿಮಾನ ನಿಲ್ದಾಣದ ಬಳಿ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಭೀಕರವಾಗಿ ಹತ್ಯೆಗೈದಿದ್ದರು. ಈ ಹಿನ್ನೆಲೆಯಲ್ಲಿ ಮಂಗಳೂರಿನಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸರು ನಿಷೇಧಾಜ್ಞೆ ಜಾರಿಗೊಳಿಸಿದ್ದಾರೆ. ಈ ಕೊಲೆ ಪ್ರಕರಣದ ಬೆನ್ನು ಹತ್ತಿದ ಮಂಗಳೂರು ಪೊಲೀಸರು 5 ವಿಶೇಷ ತಂಡಗಳನ್ನು ರಚಿಸಿ ಕಾರ್ಯಾಚರಣೆ ನಡೆಸಿದ್ದು, ಎಲ್ಲಾ 8 ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಬಂಧಿತರ ವಿಚಾರಣೆ ನಡೆಸಿದ್ದಾರೆ. ಸಿಸಿಟಿವಿ ದೃಶ್ಯಗಳನ್ನು ಆಧರಿಸಿ ಮಂಗಳೂರಿನ ವಿವಿಧೆಡೆ ತಲೆಮರೆಸಿಕೊಂಡಿದ್ದ 6 ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತರಲ್ಲಿ ನಾಲ್ವರು ಹಿಂದೂಗಳು ಇದ್ದಾರೆ ಎನ್ನಲಾಗಿದ್ದು, ಬಂಧಿತ ಆರೋಪಿಗಳನ್ನು ಚಿಕ್ಕಮಗಳೂರು ಜಿಲ್ಲೆಯ ಕಳಸ ಮೂಲದವರು ಎಂದು ಹೇಳಲಾಗಿದ್ದು, ಮಂಗಳೂರಿನ ಸಫ್ವಾನ್ ಗ್ಯಾಂಗ್ ಜೊತೆ ಗುರುತಿಸಿಕೊಂಡಿದ್ದರು ಎಂದು ಹೇಳಲಾಗಿದೆ. ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ ಹೇಳಿರುವಂತೆ ಬಂಧಿತ 8 ಆರೋಪಿಗಳ ಪೈಕಿ ಇಬ್ಬರು ಹಿಂದೂಗಳಿದ್ದಾರೆ. ಅವರ ವಿವರನ್ನು ನೀಡಿದ್ದಾರೆ. ಅಬ್ದುಲ್ ಸಫ್ವಾನ್ (29), ನಿಯಾಜ್ (28), ಕಲಂದರ್ ಶಾಫಿ (31), ಮೊಹಮ್ಮದ್ ಮುಝಮ್ಮಿಲ್ (32), ರಂಜಿತ್ (19), ನಾಗರಾಜ್ (20), ಮೊಹಮ್ಮದ್ ರಿಜ್ವಾನ್ (28) ಮತ್ತು ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದಲ್ಲಿ 8 ಆರೋಪಿಗಳನ್ನು ಬಂಧಿಸಲಾಗಿದೆ. ಸಫ್ವಾನ್ ಪ್ರಮುಖ ಆರೋಪಿ. 2023ರಲ್ಲಿ ಅಬ್ದುಲ್ ಸಫ್ವಾನ್ ಮೇಲೆ ಮಾರಣಾಂತಿಕ ಹಲ್ಲೆ ಆಗಿತ್ತು. ಸಫ್ವಾನ್‌ಗೆ ಸುಹಾಸ್ ಶೆಟ್ಟಿ ಕೊಲೆ ಮಾಡುವ ಆತಂಕ ಇತ್ತು. ಹಾಗಾಗಿ ಸುಹಾಸ್ ಶೆಟ್ಟಿಯನ್ನು ಕೊಲೆ ಮಾಡಲು ತೀರ್ಮಾನಿಸಿದ್ದರು. ಸುಹಾಸ್ ಕೊಲೆ ಮಾಡಲು ಸಫ್ವಾನ್ ತಂಡಕ್ಕೆ ಆದಿಲ್ 5 ಲಕ್ಷ ರೂ. ನೀಡಿದ್ದ. ಈ 5 ಲಕ್ಷ ರೂಪಾಯಿಗಾಗಿ ಆದಿಲ್ ಫಂಡಿಂಗ್ ಮಾಡಿದ್ದ. ನಿಯಾಜ್ ಸ್ನೇಹಿತರಾದ ನಾಗರಾಜ್ ಮತ್ತು ರಂಜಿನ್ ಸಂಪರ್ಕ ಮಾಡುತ್ತಾರೆ. ಈ ಇಬ್ಬರು ಸಫ್ವಾನ್ ಮನೆಯಲ್ಲಿ ವಾಸವಿದ್ದರು. ಮೇ 1ರಂದು ಸುಹಾಸ್ ಚಲನವಲನ ಗಮನಿಸಿ ಕೊಲೆ ಮಾಡಿದ್ದಾರೆ ಎಂದು ಅನುಪಮ್ ಅಗರ್ವಾಲ್ ತಿಳಿಸಿದರು.

> ಇನ್ನೂ ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಹತ್ಯೆ ಪ್ರಕರಣ ಸಂಬಂಧ ಪ್ರತಿಕ್ರಿಯಿಸಿ, ಹಾಡುಹಗಲೇ ಈ ಪರಿಯಾಗಿ ಹೊಡೆದು ಕೊಲ್ಲುತ್ತಾರೆ.ಇದು ನಿಮ್ಮ ಇಂಟೆಲಿಜೆನ್ಸ್ ವೈಫಲ್ಯ ಅಲ್ವೆ. ಮೊದಲಿಗೆ ವಾಟ್ಸಪ್ ಸ್ಟೇಟಸ್ ಹಾಕಿಕೊಂಡಿದ್ದಾರೆ. 26 ಜನರ ಸಾವಾದ್ರು ಅಷ್ಟೇ ಒಬ್ಬರ ಸಾವಾದ್ರು ಅಷ್ಟೇ ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸುತ್ತೆ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.
> **ಪ್ರಹ್ಲಾದ್ ಜೋಶಿ** । ಕೇಂದ್ರ ಸಚಿವ

> ಸುಹಾಸ್ ಶೆಟ್ಟಿ ಕೊಲೆಗೆ ಪೊಲೀಸರೇ ಪರೋಕ್ಷ ಕಾರಣ ಎಂದು ಪ್ರತಿಪಕ್ಷ ನಾಯಕ ಹಾಗೂ ಬಿಜೆಪಿ ಮುಖಂಡ ಆರ್. ಅಶೋಕ್ ಗಂಭೀರ ಆರೋಪ ಮಾಡಿದ್ದರು. ಸುಹಾಸ್ ಶೆಟ್ಟಿಗೆ ಕೊಲೆ ಬೆದರಿಕೆ ಇದೆ ಎಂದು ಪೊಲೀಸರೇ ವಾರದ ಹಿಂದೆ ಎಚ್ಚರಿಕೆ ನೀಡಿದ್ದರು. ಅಲ್ಲದೇ ವಾಹನದಲ್ಲಿ ಮಾರಕಾಸ್ತ್ರ ಇಟ್ಟುಕೊಳ್ಳದಂತೆ ಸೂಚಿಸಿದ್ದರು. ಪೊಲೀಸರು ನೀಡಿದ ಎಚ್ಚರಿಕೆ ದುಷ್ಕರ್ಮಿಗಳಿಗೆ ಹೇಗೆ ಗೊತ್ತಾಯಿತು ಎಂದು ಆರ್.ಅಶೋಕ್ ಪ್ರಶ್ನಿಸಿದ್ದಾರೆ.

### ಕಾಸರಗೋಡು ಕೇರಳದಲ್ಲಿದ್ದರೂ ಸದಾ ಕನ್ನಡಿಗರ ಹೃದಯದಲ್ಲಿ ಸ್ಥಾನ ಪಡೆದಿದೆ: ಸಚಿವ ಚಲುವರಾಯಸ್ವಾಮಿ

## ಕೇರಳದ ಕನ್ನಡಿಗರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಸದಾ ಸಿದ್ಧ

**ಕಾಸರಗೋಡು(ಕೇರಳ),ಮೇ 3:** ಕಾಸರಗೋಡು ಜಿಲ್ಲೆ ಆಡಳಿತದ ದೃಷ್ಟಿಯಿಂದ ಕೇರಳ ರಾಜ್ಯಕ್ಕೆ ಒಳಪಟ್ಟರೂ ಸಹ ನಮ್ಮ ರಾಜ್ಯದ ಕನ್ನಡಿಗರ ಮನಸ್ಸು, ಹೃದಯದಲ್ಲಿ ಸ್ಥಾನ ಪಡೆದಿದೆ. ಈ ನಿಟ್ಟಿನಲ್ಲಿ ಕಾಸರಗೋಡಿನ ಕನ್ನಡಿಗರ ಹಾಗೂ ಕನ್ನಡ ಪತ್ರಕರ್ತರ ಕ್ಷೇಯೋಭಿವೃದ್ಧಿಗೆ ಸದಾ ರಾಜ್ಯ ಸರ್ಕಾರ ಬದ್ಧವಾಗಿರುತ್ತದೆ ಎಂದು ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ಹೇಳಿದರು.

ಶನಿವಾರದಂದು ಇಲ್ಲಿನ ಸೀತಾಂಗೋಳಿಯಲ್ಲಿ ನಡೆದ ಕೆ.ಯು.ಡಬ್ಲ್ಯೂಜೆ ದತ್ತಿನಿಧಿ ಪ್ರಶಸ್ತಿ ಪ್ರದಾನ ಹಾಗೂ ಕನ್ನಡ ಸಂಸ್ಕೃತಿ ಉತ್ಸವ ಉದ್ಘಾಟಿಸಿ ಮಾತನಾಡಿದರು. ನಮ್ಮ ಸರ್ಕಾರ ಯಾವಾಗಲೂ ಗಡಿನಾಡು ಕನ್ನಡಿಗರ ಹಾಗೂ ಪತ್ರಕರ್ತರ ಹಿತ ಕಾಪಾಡಲು ಸಿದ್ಧವಾಗಿದೆ. ಗಡಿ ಪ್ರದೇಶದ ಕನ್ನಡಿಗರ ರಕ್ಷಣೆ, ಅಭಿವೃದ್ಧಿ, ಶಿಕ್ಷಣಕ್ಕೆ ಹೆಚ್ಚು ಒತ್ತುಕೊಡಲು ಆದ್ಯತೆ ನೀಡಲಾಗುವುದು ಎಂದರು.

ಕಾಸರಗೋಡಿನ ಪತ್ರಕರ್ತರು ಸೇರಿದಂತೆ ಕನ್ನಡಿಗರ ಯಾವುದೇ ನೆರವು ಬೇಕಾಗಿದ್ದಲ್ಲಿ ತಕ್ಷಣವೇ ಒದಗಿಸುವ ಕೆಲಸ ಸರ್ಕಾರ ಮಾಡ್ತಾ ಇದ್ದು, ಹಂತ ಹಂತವಾಗಿ ಅನುದಾನವನ್ನು ಸಹ ಸರ್ಕಾರದಿಂದ ನೀಡಲಾಗುವುದು ಎಂದರು. ನಮ್ಮ ರಾಜ್ಯ ಸೇರಿದಂತೆ ಬೇರೆ, ಬೇರೆ ರಾಜ್ಯಗಳ ಕನ್ನಡಿಗ ಪತ್ರಕರ್ತರನ್ನು ಒಗ್ಗೂಡಿಸುವ ಕೆಲಸವನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಮಾಡುತ್ತಾ ಇದ್ದು, ಅವರ ಪರಿಶ್ರಮದಿಂದ ಕಾಸರಗೋಡಿನಲ್ಲಿ ಕನ್ನಡ ಪತ್ರಕರ್ತರ ಘಟಕ, ಅತ್ಯುತ್ತಮ ಕಾರ್ಯ ಮಾಡುತ್ತಿದೆ ಎಂದು ಶ್ಲಾಘಿಸಿದರು. ಸಮಾರಂಭದಲ್ಲಿ ಕಾಸರಗೋಡು ಪತ್ರಕರ್ತರಿಗೆ ಗುರುತಿನಚೀಟಿ ವಿತರಿಸಿ ಮಾತನಾಡಿದ ಶಿವಾನಂದ ತಗಡೂರು ಅವರು, ಕೆಯುಡಬ್ಲ್ಯೂಜೆ ಘಟಕ ಕಾಸರಗೋಡಿನಲ್ಲಿ ಅಸ್ತಿತ್ವಕ್ಕೆ ಬಂದ ಮೇಲೆ ವರ್ಷದಿಂದ ವರ್ಷಕ್ಕೆ ಹತ್ತು ಹಲವಾರು ಕಾರ್ಯಕ್ರಮವನ್ನು ಕ್ರಿಯಾತ್ಮಕವಾಗಿ



ಮಾಡುತ್ತಿದೆ ಎಂದು ಪ್ರಶಂಸಿಸಿದರು.

ಕಾಸರಗೋಡು ಪತ್ರಕರ್ತರ ಆಶೋತ್ತರಗಳಿಗೆ ಕೆಯುಡಬ್ಲ್ಯೂಜೆಸ್ಪಂದಿಸುತ್ತಾ ಬಂದಿದೆ. ಸಿಎಂ ಸಿದ್ದರಾಮಯ್ಯ ಮತ್ತು ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರ ಸಹಕಾರದಿಂದ 25 ಲಕ್ಷ ರೂ ಅನುದಾನ ಕೊಡಿಸಲಾಗಿದೆ. ನೆರವು ನೀಡಿದ ಸರ್ಕಾರಕ್ಕೆ ಅಭಿನಂದಿಸುವುದಾಗಿ ತಿಳಿಸಿದರು.

ಕಾಸರಗೋಡು ಜಿಲ್ಲೆಯಲ್ಲಿ ಇಂದಿಗೂ ಕನ್ನಡ ಭಾಷೆ ಉಳಿವಿಗಾಗಿ ಶ್ರಮಿಸುತ್ತಿದ್ದು, ಕನ್ನಡ ಪತ್ರಕರ್ತರು ಶ್ರಮಿಸುತ್ತಿದ್ದು, ಇಂತಹ ಕಾರ್ಯಕ್ರಮಗಳು ಇತರೆ ಗಡಿನಾಡು ಕನ್ನಡಿಗರಿಗೆ ಮಾದರಿಯಾಗಿದೆ ಎಂದರು. ಮಂಜೇಶ್ವರ ಶಾಸಕ ಎ.ಕೆ.ಎಂ.ಅಶ್ರಫ್ ಮಾತನಾಡಿ, ನಾವೆಲ್ಲ ಕೇರಳದಲ್ಲಿದ್ದರೂ ಕನ್ನಡಾಭಿಮಾನಿಗಳಾಗಿದ್ದೇವೆ. ಗಡಿಯಲ್ಲಿನಕನ್ನಡ ಉಳಿಸಿ ಬೆಳೆಸಲು ಕಂಕಣಬದ್ದರಾಗಿದ್ದೇವೆ ಎಂದರು.ಹಿರಿಯ ಪತ್ರಕರ್ತರಾದ ಗಣೇಶ್ ಕಾಸರಗೋಡು, ಮಂಡ್ಯದ ಮತ್ತಿಕೇರಿ ಜಯರಾಮ್, ಶಿವಮೊಗ್ಗದ ಎನ್.ರವಿಕುಮಾರ್, ಕೊಪ್ಪಳದ ನಾಗರಾಜ್. ವೈ, ಬೆಳಗಾಂನ

ಮಲ್ಲಿಕಾರ್ಜುನ ರೆಡ್ಡಿ ಗೋಂದಿ, ಮಂಗಳೂರಿನ ವೇಣು ವಿನೋಧ, ಸತ್ಯವತಿ ಸೇರಿದಂತೆ ಒಟ್ಟು 21 ಜನ ಪತ್ರಕರ್ತರಿಗೆ, ಸಾಧಕರಿಗೆ ವಿವಿಧ ದತ್ತಿನಿಧಿ ಪ್ರಶಸ್ತಿಗಳನ್ನು ಕೃಷಿ ಸಚಿವರಾದ ಎನ್.ಚೆಲುವರಾಯಸ್ವಾಮಿ ಪ್ರದಾನ ಮಾಡಿದರು. ತುಮಕೂರಿನಲ್ಲಿ ರಾಜ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಿದ್ದ ಅಲ್ಲಿನ ಜಿಲ್ಲಾಧ್ಯಕ್ಷ ಚೀ.ನಿ.ಪುರುಷೋತ್ತಮ ಮತ್ತು ಪ್ರಧಾನ ಕಾರ್ಯದರ್ಶಿ ರಘುರಾಮ ಅವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು. ಸಮಾರಂಭದ ಸಾನಿಧ್ಯವನ್ನು ಎಡನೀರು ಮಠದ ಸಚ್ಚಿದಾನಂದ ಭಾರತೀ ಸ್ವಾಮೀಜಿ ವಹಿಸಿದ್ದರು.

ಸ್ವಾಗತ ಸಮಿತಿ ಅಧ್ಯಕ್ಷ ಕೆ.ಕೆ.ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಸದಾಶಿವಶೆಟ್ಟಿ ಕೂಳೂರು, ಕಾಸರಗೋಡು ಘಟಕದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ಮತ್ತಿತರರು ಇದ್ದರು. ಕಾರ್ಯಕ್ರಮಕ್ಕೂ ಮುನ್ನ ಶೋಭಾ ಯಾತ್ರೆ ನಡೆಯಿತು. ಕಾರ್ಯಕ್ರಮ ಬಳಿಕ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

## ಪಾಕಿಸ್ತಾನದ ವಿರುದ್ಧ ಯುದ್ಧ ಮಾಡಲು ಸಿದ್ಧ: ಸಚಿವ ಜಮೀರ್

**ಬೆಂಗಳೂರು, ಮೇ 3:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಾಗಿರುವಾಗ, ಕರ್ನಾಟಕ ವಸತಿ ಮತ್ತು ಅಲ್ಪಸಂಖ್ಯಾತರ ಸಚಿವ ಬಿ.ಜೆ.ಝಮೀರ್ ಅಹ್ಮದ್ ಖಾನ್ ಅವರು ಆತ್ಮಾಹುತಿ ಬಾಂಬ್ ಹಿಡಿದು ನೆರೆಯ ದೇಶದ ವಿರುದ್ಧ ಯುದ್ಧ ಮಾಡಲು ಪಾಕಿಸ್ತಾನಕ್ಕೆ ಹೋಗಲು ಸ್ವಯಂಪ್ರೇರಿತರಾಗಿ ಮುಂದಾಗಿದ್ದಾರೆ.



ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಇಮ್ರಾನ್ ಖಾನ್, ಪಾಕಿಸ್ತಾನ ಯಾವಾಗಲೂ ಭಾರತದ ಶತ್ರುವಾಗಿದೆ ಮತ್ತು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅನುಮತಿಸಿದರೆ ಯುದ್ಧಕ್ಕೆ ಹೋಗಲು ಸಿದ್ಧ ಎಂದು ಹೇಳಿದರು.ನಾವು ಭಾರತೀಯರು, ನಾವು ಹಿಂದೂಸ್ತಾನಿಗಳು. ಪಾಕಿಸ್ತಾನವು ನಮ್ಮೊಂದಿಗೆ ಯಾವುದೇ ಸಂಬಂಧವನ್ನು ಹೊಂದಿರಲಿಲ್ಲ. ಪಾಕಿಸ್ತಾನ ಯಾವಾಗಲೂ ನಮ್ಮ ಶತ್ರು. ಮೋದಿ, ಅಮಿತ್ ಶಾ ಮತ್ತು ಕೇಂದ್ರ ಸರ್ಕಾರ ನನಗೆ ಅವಕಾಶ ನೀಡಿದರೆ, ನಾನು ಯುದ್ಧಕ್ಕಾಗಿ ಪಾಕಿಸ್ತಾನಕ್ಕೆ ಹೋಗಲು ಸಿದ್ಧನಿದ್ದೇನೆ ಎಂದು ಅವರು ಹೇಳಿದರು.ತಮಗೆ ಆತ್ಮಾಹುತಿ ಬಾಂಬ್ ನೀಡುವಂತೆ ಪ್ರಧಾನಿ ಮೋದಿ ಮತ್ತು ಅಮಿತ್ ಶಾ ಅವರಿಗೆ ಕರೆ ನೀಡಿದ್ದರು. ನಾನು ಯುದ್ಧಕ್ಕಾಗಿ ಪಾಕಿಸ್ತಾನಕ್ಕೆ ಹೋಗುತ್ತೇನೆ. ಮೋದಿ, ಶಾ ನನಗೆ ಆತ್ಮಾಹುತಿ ಬಾಂಬ್ ನೀಡಲಿ, ನಾನು ಅದನ್ನು ನನ್ನ ದೇಹಕ್ಕೆ ಕಟ್ಟಿಕೊಂಡು ಪಾಕಿಸ್ತಾನಕ್ಕೆ ಹೋಗಿ ಅವರ ಮೇಲೆ ದಾಳಿ ಮಾಡುತ್ತೇನೆ ಎಂದು ಅವರು ಹೇಳಿದರು.ಇದಕ್ಕೂ ಮೊದಲು, ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಖಾನ್ ಬಲವಾಗಿ ಖಂಡಿಸಿದರು, ಇದು ಮುಗ್ಧ ನಾಗರಿಕರ ವಿರುದ್ಧದ ಹೇಯ ಮತ್ತು ಅಮಾನವೀಯ ಕೃತ್ಯ ಎಂದು ಕರೆದರು. ಪ್ರತಿಯೊಬ್ಬ ಭಾರತೀಯರು ಒಗ್ಗಟ್ಟಿನಿಂದ ನಿಲ್ಲಬೇಕು ಮತ್ತು ರಾಷ್ಟ್ರೀಯ ಭದ್ರತೆಗೆ ಸಂಬಂಧಿಸಿದಂತೆ ಕಠಿಣ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕೇಂದ್ರಕ್ಕೆ ಕರೆ ನೀಡಿದರು.

> ಬಾಂಬ್ ಕಟ್ಟಿಕೊಂಡು ಪಾಕ್ ಗಡಿಗೆ ಹೋಗ್ತೀನಿ ಎಂದ ಸಚಿವ ಜಮೀರ್ ಅಹ್ಮದ್ಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಟಾಂಗ್ ನೀಡಿದರು. "ನೀವೇನೂ ಮಾಡೋದು ಬೇಡ, ಸುಮ್ಮನಿದ್ದರೆ ಸಾಕು. ಜಮೀರ್ ಶಾಂತವಾಗಿದ್ದರೇ ಸಾಕು. ಮಿಲಿಟರಿಯನ್ನ ನಂಬಿ ಸುಮ್ಮನಿರಿ ಸಾಕು. ನಿಮ್ಮ ಭಾಷಣ ಬೇಡ, ನೀವು ಹೋಗೋದು ಬೇಡ ಸೈನ್ಯದ ಶಕ್ತಿ, ಸೈನಿಕರು, ಇಂಟಲಿಜೆನ್ಸ್ ಬಗ್ಗೆ ವಿಶ್ವಾಸವಿಡಿ", ಜಮೀರ್ ಶಾಂತವಾಗಿರೋದೆ ದೇಶಕ್ಕೆ ಮಾಡೋ ದೊಡ್ಡ ಸೇವೆ ಎಂದು ವ್ಯಂಗ್ಯವಾಡಿದ್ದಾರೆ.

# ಒಂದೇ ದಿನ 30,000ಕ್ಕೂ ಹೆಚ್ಚು ಜನರಿಂದ ಕೇದಾರನಾಥನ ದರ್ಶನ



**ಡೆಹ್ರಾಡೂನ್,ಮೇ.3:** ಕೇದಾರನಾಥ ಧಾಮದ ಬಾಗಿಲು ತೆರೆದ ಮೊದಲ ದಿನವೇ ದೇವಸ್ಥಾನಕ್ಕೆ 30,000ಕ್ಕೂ ಹೆಚ್ಚು ಭಕ್ತರು ದರ್ಶನ ಪಡೆದಿದ್ದಾರೆ. ಮೇ 2 ರಂದು ಸಂಜೆ 7 ಗಂಟೆ ವೇಳೆಗೆ 19,196 ಪುರುಷರು, 10,597 ಮಹಿಳೆಯರು ಮತ್ತು 361 ತೃತಿಯ ಲಿಂಗಿಗಳು ಕೇದಾರನಾಥಕ್ಕೆ ಭೇಟಿ ನೀಡಿ ದರ್ಶನ ಪಡೆದಿದ್ದಾರೆ.

ಶುಕ್ರವಾರ ಕೇದಾರನಾಥ ದೇವಾಲಯದ ಬಾಗಿಲು ತೆರೆಯಲಾಯಿತು, ಭಾರತೀಯ ಸೇನೆಯ ಗರ್ವಾಲ್ ರೈಫಲ್ಸ್‌ನ ಬ್ಯಾಂಡ್ ಈ ಸಂದರ್ಭದಲ್ಲಿ ಭಕ್ತಿಗೀತೆಗಳನ್ನು ನುಡಿಸಿತು. ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಧಾಮ್ ಪೋರ್ಟಲ್ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಕೇದಾರನಾಥ ಆವರಣದಲ್ಲಿ ನಡೆದ ಮುಖ್ಯ ಸೇವಕ ಭಂಡಾರದಲ್ಲಿ ಭಕ್ತರಿಗೆ ವೈಯಕ್ತಿಕವಾಗಿ ಪ್ರಸಾದ ವಿತರಿಸಿದರು. ಮೇ 4 ರಂದು ಬದರಿನಾಥ ಧಾಮದ ಬಾಗಿಲು ತೆರೆಯಲಿದೆ ಎಂದು ಅವರು ಘೋಷಿಸಿದರು.

ಕೇದಾರನಾಥದ ಪುನರ್ನಿರ್ಮಾಣಕ್ಕಾಗಿ 2,000 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ ಎಂದು ಸಿಎಂ ಧಾಮಿ ಬಹಿರಂಗಪಡಿಸಿದರು. ಹೆಚ್ಚುವರಿಯಾಗಿ, ಪ್ರವೇಶವನ್ನು ಸುಧಾರಿಸಲು ಗೌರಿಕುಂಡ್‌ನಿಂದ ಕೇದಾರನಾಥಕ್ಕೆ ರೋಪ್ವೇ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ನಾವು ಪ್ರತಿ ಹಂತದಲ್ಲೂ ತೀರ್ಥಯಾತ್ರೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದ್ದೇವೆ ಮತ್ತು ಯಾತ್ರೆಯ ಮಾರ್ಗಗಳಲ್ಲಿ ಹಲವಾರು ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಿದ್ದೇವೆ. ಚಾರ್ ಧಾಮ್ ಯಾತ್ರೆ ಉತ್ತರಾಖಂಡದ ಜೀವನಾಡಿಯಾಗಿದ್ದು, ಲಕ್ಷಾಂತರ ಜನರಿಗೆ ಜೀವನೋಪಾಯವನ್ನು ಒದಗಿಸುತ್ತದೆ ಎಂದು ಧಾಮಿ ಹೇಳಿದರು.

# ರೈತ ನಾಯಕ ರಾಕೇಶ್ ಟಿಕಾಯತ್ ಮೇಲೆ ಹಿಂದುತ್ವ ಸಂಘಟನೆಗಳ ದಾಳಿ



**ನವದೆಹಲಿ, ಮೇ 3:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ವಿರುದ್ಧ ನಡೆದ ಪ್ರತಿಭಟನಾ ರ್ಯಾಲಿಯಲ್ಲಿ ರೈತ ನಾಯಕ ರಾಕೇಶ್ ಟಿಕಾಯತ್ ಭಾಗವಹಿಸುವುದನ್ನು ವಿರೋಧಿಸಿ ಅವರನ್ನು ಸುತ್ತುವರೆದು ಅವರ ಮೇಲೆ ದಾಳಿ ಮಾಡಿರುವ ಘಟನೆ ಶುಕ್ರವಾರ ನಡೆದಿದೆ. ಈ ಘಟನೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಭಾರತೀಯ ಕಿಸಾನ್ ಯೂನಿಯನ್ (ಬಿಕೆಯು) ಶನಿವಾರ ಮುಜಫರ್ನಗರದಲ್ಲಿ ತುರ್ತು ಕಿಸಾನ್ ಪಂಚಾಯತ್‌ಗೆ ಕರೆ ನೀಡಿದೆ. ಭಯೋತ್ಪಾದನಾ ವಿರೋಧಿ

ಘಟನೆಯ ಕುರಿತು ಚರ್ಚಿಸಲು ಮುಜಫರ್ ನಗರದ ಜಿಐಸಿ ಮೈದಾನದಲ್ಲಿ ಪಂಚಾಯತ್ ನಡೆಸಲಾಗುವುದು ಎಂದು ಬಿಕೆಯು ರಾಷ್ಟ್ರೀಯ ಅಧ್ಯಕ್ಷ ನರೇಶ್ ಟಿಕಾಯತ್ ಘೋಷಿಸಿದ್ದಾರೆ. ಆಕ್ರೋಶ್ ರ್ಯಾಲಿಯಲ್ಲಿ ನಡೆದ ಘಟನೆಯು ರೈತರ ಚಳುವಳಿಯನ್ನು ದುರ್ಬಲಗೊಳಿಸಲು ರಾಜಕೀಯ ಪಕ್ಷ ಆಯೋಜಿಸಿದ ಪಿತೂರಿಯ ಭಾಗವಾಗಿ ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ. ಶುಕ್ರವಾರ, ಪಹಲ್ಗಾಮ್ ದಾಳಿಯನ್ನು ಪ್ರತಿಭಟಿಸಲು ಬಲಪಂಥೀಯ ಗುಂಪುಗಳು ಆಯೋಜಿಸಿದ್ದ ರ್ಯಾಲಿಯಲ್ಲಿ ರಾಕೇಶ್ ಟಿಕಾಯತ್ ಅವರನ್ನು ಸುತ್ತುವರೆದು ಅವರ ಮೇಲೆ ದಾಳಿ ಮಾಡಲಾಗಿದೆ. ಜೊತೆಗೆ ಸಭೆಯಿಂದ ಹಿಂತಿರುಗುವಂತೆ ಅವರನ್ನು ಕೇಳಲಾಯಿತು ಎಂದು ಆರೋಪಿಸಲಾಗಿದೆ. ಈ ದಾಳಿಯ ವೇಳೆ ಅವರ ಪೇಟ ಕೂಡ ಕೆಳಗೆ ಬಿದ್ದಿದ್ದು, ಘಟನೆಯ ವೀಡಿಯೊಗಳು ವ್ಯಾಪಕ ವೈರಲಾಗಿದೆ.

ಈ ಘಟನೆ ಸ್ವಯಂಪ್ರೇರಿತವಾಗಿರಲಿಲ್ಲ. ಇದು ಪೂರ್ವ ಯೋಜಿತ ಮತ್ತು ರಾಜಕೀಯ ಉದ್ದೇಶಗಳಿಂದ ನಡೆಸಲ್ಪಟ್ಟಿದೆ ಎಂದು ನರೇಶ್ ಟಿಕಾಯತ್ ಹೇಳಿದ್ದಾರೆ. ಮಧ್ಯಾಹ್ನ ಪ್ರಾರಂಭವಾಗಲಿರುವ ಪಂಚಾಯತ್‌ಗೆ ಮುಂಚಿತವಾಗಿ ಪ್ರದೇಶದಾದ್ಯಂತ ರೈತರು ಸಿಸೌಲಿ ಮತ್ತು ಮುಜಫರ್ನಗರದಲ್ಲಿ ಸೇರಲು ಪ್ರಾರಂಭಿಸಿದ್ದಾರೆ ಎಂದು ಹೇಳಿದ್ದಾರೆ. ಶುಕ್ರವಾರದ ಗದ್ದಲ ವನ್ನು ರಾಕೇಶ್ ಟಿಕಾಯತಗ್ ಖಂಡಿಸಿದ್ದು, ಇದು ರಾಜಕೀಯ ವಿಧ್ವಂಸಕ ಕೃತ್ಯ ಎಂದು ತಾನು ಭಾವಿಸಿದ್ದಾಗಿ ಪುನರುಚ್ಚರಿಸಿದ್ದಾರೆ. ತಮ್ಮ ವಿರುದ್ಧ ಘೋಷಣೆಗಳನ್ನು ಕೂಗಿದವರು ಮದ್ಯದ ಅಮಲಿನ ಪ್ರಭಾವದಲ್ಲಿರುವಂತೆ ತೋರುತ್ತಿತ್ತು ಎಂದು ಅವರು ಹೇಳಿಕೊಂಡಿದ್ದಾರೆ. ಇದು ರೈತರ ಧ್ವನಿಯನ್ನು ನಿಗ್ರಹಿಸಲು ಒಂದು ನಿರ್ದಿಷ್ಟ ರಾಜಕೀಯ ಪಕ್ಷದಿಂದ ನಡೆಸಲ್ಪಟ್ಟ ಪಿತೂರಿಯಾಗಿದೆ. ಕೆಲವು ಯುವಕರನ್ನು ಉದ್ದೇಶಪೂರ್ವಕವಾಗಿ ರ್ಯಾಲಿಯನ್ನು ಅಡ್ಡಿಪಡಿಸಲು ಕಳುಹಿಸಲಾಗಿದೆ ಎಂದು ಅವರು ಶುಕ್ರವಾರ ಸುದ್ದಿಗಾರರಿಗೆ ತಿಳಿಸಿದ್ದರು.

ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಬಿಕೆಯು ಟ್ರ್ಯಾಕ್ಟರ್ ಮೆರವಣಿಗೆಯನ್ನು ಆಯೋಜಿಸುವುದಾಗಿ ಟಿಕಾಯತ್ ಘೋಷಿಸಿದ್ದಾರೆ. ಮೆರವಣಿಗೆಯ ದಿನಾಂಕವನ್ನು ಮುಂದಿನ ದಿನಗಳಲ್ಲಿ ನಿರ್ಧರಿಸಲಾಗುವುದು. ಸಾರ್ವಜನಿಕರ ಆಕ್ರೋಶವನ್ನು ಶಾಂತಗೊಳಿಸಲು ಭಯೋತ್ಪಾದಕ ಚಟುವಟಿಕೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

# ಸಮುದ್ರದಲ್ಲಿ ಯಾವುದೇ ಅನುಮಾನಾಸ್ಪದ ದೋಣಿಗಳ ಬಗ್ಗೆ ನಿಗಾ ಇಡಲು ಮೀನುಗಾರರು, ನಿರ್ವಾಹಕರಿಗೆ ಸೂಚನೆ



**ಕಾರವಾರ,ಮೇ 3:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ, ಮೀನುಗಾರರು ಮತ್ತು ದೊಡ್ಡ ಟ್ರಾಲರ್‌ಗಳ ನಿರ್ವಾಹಕರಿಗೆ ಕಾರವಾರದ ಕರಾವಳಿ ಭದ್ರತಾ ಪಡೆ ಎಚ್ಚರಿಕೆ ನೀಡಿದ್ದು ಸಮುದ್ರದಲ್ಲಿ ಯಾವುದೇ ಅನುಮಾನಾಸ್ಪದ ದೋಣಿಗಳ ಚಲನೆಯ ಮೇಲೆ ನಿಗಾ ಇಡುವಂತೆ ಸೂಚಿಸಿದೆ. 26 ಭಾರತೀಯರ ಜೀವವನ್ನು ಬಲಿ ಪಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಭದ್ರತೆ ಸಂಬಂಧ ಚರ್ಚಿಸಲು ಇತ್ತೀಚೆಗೆ ಕಾರವಾರದಲ್ಲಿ ಸಭೆ ಕರೆಯಲಾಗಿತ್ತು. ಕಾರವಾರವು ಭಾರತದ ಅತಿದೊಡ್ಡ ನೌಕಾ ನೆಲೆಯಾಗಿದ್ದು INS ಕದಂಬ – ಮತ್ತು ದೇಶದ ಮೊದಲ ವಿಮಾನವಾಹಕ ನೌಕೆ – INS ವಿಕ್ರಮಾದಿತ್ಯ ಇಲ್ಲಿ ನೆಲೆಗೊಂಡಿದೆ.ಕಾರವಾರ ನೌಕಾ ನೆಲೆಯು ಗೋವಾ, ಕೊಚ್ಚಿ ಮತ್ತು ಮುಂಬೈ ನಂತರ ಶಸ್ತ್ರಾಸ್ತ್ರ ವಿಭಾಗ ಮತ್ತು ಕಾರ್ಯತಂತ್ರದ ನೌಕಾ ರಕ್ಷಣಾ ಸ್ಥಳವಾಗಿದೆ. ಈ ನೆಲೆಯನ್ನು ತರಬೇತಿ ಉದ್ದೇಶಗಳಿಗಾಗಿಯೂ ಬಳಸಲಾಗುತ್ತದೆ. ಸಮುದ್ರದಲ್ಲಿ ಯಾವುದೇ ಅನುಮಾನಾಸ್ಪದ ದೋಣಿಗಳು ಕಂಡುಬಂದರೆ, ತಕ್ಷಣ ವರದಿ ಮಾಡಲು ಭದ್ರತಾ ಪಡೆಗಳು ಮೀನುಗಾರರಿಗ ತಿಳಿಸಿದೆ.

ಕಾರವಾರ ಕರಾವಳಿಯಲ್ಲಿ ಭದ್ರತಾ ಪರಿಸ್ಥಿತಿಯ ಬಗ್ಗೆ ದೊಡ್ಡ ದೋಣಿ ನಿರ್ವಾಹಕರಿಗೆ ಮಾಹಿತಿ ನೀಡಲಾಯಿತು. ಅರಬ್ಬಿ ಸಮುದ್ರದಲ್ಲಿ ಪಾಕಿಸ್ತಾನದ ನಿಯಂತ್ರಣದಲ್ಲಿರುವ ನೀರು ಕಾರವಾರ ಕರಾವಳಿಯಿಂದ 250 ಕಿ.ಮೀ ದೂರದಲ್ಲಿದೆ ಮತ್ತು ದೊಡ್ಡ ದೋಣಿಗಳನ್ನು ಅಂತರರಾಷ್ಟ್ರೀಯ ಗಡಿಗಳಿಂದ ದೂರವಿರಲು ತಿಳಿಸಲಾಗಿದೆ" ಎಂದು ಕಾರವಾರದ ಮೀನುಗಾರಿಕಾ ಟ್ರಾಲರ್ ನಿರ್ವಾಹಕರು ಹೇಳಿದರು."ಹೆಚ್ಚಿನ ಸಮಯ ಮೀನುಗಾರರು ಯಾವುದೇ ಅನುಮಾನಾಸ್ಪದ ದೋಣಿಗಳ ಬಗ್ಗೆ ಎಚ್ಚರವಾಗಿರುತ್ತಾರೆ.

ಹೆಚ್ಚಿನ ಮೀನುಗಾರಿಕಾ ದೋಣಿಗಳು ತಮ್ಮ ರಾಜ್ಯಗಳನ್ನು ಪ್ರತಿನಿಧಿಸುವ ಪ್ರತ್ಯೇಕ ಬಣ್ಣಗಳನ್ನು ಹೊಂದಿರುತ್ತವೆ. ಅಂತಹ ಯಾವುದೇ ಚಲನೆ ದಾಖಲಾಗಿದ್ದರೆ, ನಾವು ಕರಾವಳಿ ಭದ್ರತಾ ಪಡೆಗೆ ತಿಳಿಸುತ್ತೇವೆ ಎಂದು ಟ್ರಾಲರ್ ಮಾಲೀಕರು ಹೇಳಿದರು.ಭಾರತೀಯ ನೌಕಾಪಡೆಯು ಈಗಾಗಲೇ ನೌಕಾ ನೆಲೆಯ ಉದ್ದಕ್ಕೂ ಭದ್ರತೆಯನ್ನು ಹೆಚ್ಚಿಸಿದೆ. ಭದ್ರತೆಯ ಭಾಗವಾಗಿ ಹೆಚ್ಚುವರಿ ಚೆಕ್‌ಪೋಸ್ಟ್‌ಗಳು ಮತ್ತು ಗಸ್ತು ತಿರುಗುವಿಕೆ ನಡೆಸಲಾಗುತ್ತಿದೆ."ಸಾಮಾನ್ಯವಾಗಿ ಸಮುದ್ರದಲ್ಲಿ ಯುದ್ಧ ವ್ಯಾಯಾಮಗಳು ನಡೆಯುವಾಗ ನೆಲೆಯನ್ನು ಹೈ ಅಲರ್ಟ್‌ನಲ್ಲಿ ಇರಿಸಲಾಗುತ್ತದೆ. ಇಲ್ಲಿಯವರೆಗೆ ನೌಕಾಪಡೆ ಅಥವಾ ಕೇಂದ್ರ ಸರ್ಕಾರದಿಂದ ಯಾವುದೇ ನಿರ್ದಿಷ್ಟ ಮಾಹಿತಿ ಬಂದಿಲ್ಲ, ಆದರೆ ಜಿಲ್ಲಾ ಕೇಂದ್ರಗಳು ನೌಕಾ ನೆಲೆಯನ್ನು ಹೊಂದಿರುವುದರಿಂದ ಹೈ ಅಲರ್ಟ್‌ನಲ್ಲಿವೆ ಎಂದು ಜಿಲ್ಲಾಡಳಿತದ ಅಧಿಕಾರಿಯೊಬ್ಬರು ಹೇಳಿದರು.

# ಅಮಾನತುಗೊಂಡಿದ್ದ ವಿದ್ಯಾರ್ಥಿಗೆ ಸುಪ್ರೀಂ ಪರಿಹಾರ

**ನವದೆಹಲಿ, ಮೇ 3:** ದುಷ್ಕೃತ್ಯ ಹಾಗೂ ದೇಶವಿರೋಧಿ ಚಟುವಟಿಕೆಗಳ ಆರೋಪದ ಮೇಲೆ ಈ ಹಿಂದೆ ಅಮಾನತುಗೊಂಡಿದ್ದ ದಲಿತ ಪಿಎಚ್ಡಿ ಸಂಶೋಧಕ ಮತ್ತು ಎಡಪಂಥೀಯ ವಿದ್ಯಾರ್ಥಿ ನಾಯಕ ರಾಮದಾಸ್ ಕೆ.ಎಸ್ ಅವರಿಗೆ ಸುಪ್ರೀಂ ಕೋರ್ಟ್ ಪರಿಹಾರ ನೀಡಿದ್ದು, ಪಿಎಚ್‌ಡಿ ಮುಂದುವರಿಸಲು ವಿದ್ಯಾರ್ಥಿಗೆ ಅವಕಾಶ ನೀಡುವಂತೆ ಟಾಟಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್‌ಗೆ ನಿರ್ದೇಶನ ನೀಡಿದೆ. ನ್ಯಾಯಮೂರ್ತಿ ದೀಪಂಕರ್ ದತ್ತ ಮತ್ತು ನ್ಯಾಯಮೂರ್ತಿ ಮನಮೋಹನ್ ಅವರನ್ನೊಳಗೊಂಡ ಪೀಠವು ಅಮಾನತು ಅಮಾನ್ಯಗೊಳಿಸಲಿಲ್ಲ. ಆದರೂ ರಾಮದಾಸ್ ಅವರ ಪಿಎಚ್ಡಿ ಪೂರ್ಣಗೊಳಿಸಲು ಅವಕಾಶ ನೀಡಬೇಕು ಎಂಬ ಅಭಿಪ್ರಾಯವನ್ನು ಪೀಠ ವ್ಯಕ್ತಪಡಿಸಿತು. ಏ.2024ರಲ್ಲಿ ಟಿಐಎಸ್‌ಎಸ್ ರಾಮದಾಸ್ ಅವರನ್ನು ಸಂಸ್ಥೆಯಿಂದ ಎರಡು ವರ್ಷಗಳ ಕಾಲ ಅಮಾನತುಗೊಳಿಸಿತು. ಟಿಸ್ಸ ಎಲ್ಲ ಕ್ಯಾಂಪಸ್‌ಗಳಲ್ಲಿ ಅವರ ಪ್ರವೇಶವನ್ನು ನಿಷೇಧಿಸಿತು. ಕೇಂದ್ರ ಸರ್ಕಾರ ಮತ್ತು ಬಿಜೆಪಿ ವಿರುದ್ಧದ ಪ್ರತಿಭಟನೆಯಲ್ಲಿ ರಾಮದಾಸ್ ಭಾಗವಹಿಸಿದ ನಂತರ, ಜನವರಿ 2024 ರಲ್ಲಿ ಟಿಐಎಸ್‌ಎಸ್– ಪಿಎಸ್‌ಎಫ್ (ಪ್ರಗತಿಶೀಲ ವಿದ್ಯಾರ್ಥಿಗಳ ವೇದಿಕೆ) ಬ್ಯಾನರ್ ಅಡಿಯಲ್ಲಿ ಸಂಸತ್ತಿನ ಮೆರವಣಿಗೆ ಎಂಬ ಪ್ರದರ್ಶನದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ (ಎನ್‌ಇಪಿ) ಅನುಷ್ಠಾನವನ್ನು ವಿರೋಧಿಸಿದ ನಂತರ ಈ ಕ್ರಮ ಕೈಗೊಳ್ಳಲಾಯಿತು. ಬಾಂಬೆ ಹೈಕೋರ್ಟ್‌ನ ತೀರ್ಪನ್ನು ಪ್ರಶ್ನಿಸಿ ರಾಮದಾಸ್ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದರು. ಹೈಕೋರ್ಟ್ ರಾಮ್ದಾಸ್‌ರವರ ಅಮಾನತು ಎತ್ತಿಹಿಡಿದಿದೆ. ಈ ಪ್ರತಿಭಟನೆ/ ಮೆರವಣಿಗೆ ರಾಜಕೀಯ ಪ್ರೇರಿತವಾಗಿದೆ ಎಂದು ಹೈಕೋರ್ಟ್ ಗಮನಿಸಿತು. ಮೆರವಣಿಗೆಯಲ್ಲಿ ವ್ಯಕ್ತಪಡಿಸಿದ ಅಭಿಪ್ರಾಯಗಳು ಸಂಸ್ಥೆಯ ಅಭಿಪ್ರಾಯಗಳನ್ನು ಪ್ರತಿನಿಧಿಸುತ್ತವೆ ಮತ್ತು ಇದು ಸಂಸ್ಥೆಗೆ ಅಪಖ್ಯಾತಿ ತರುತ್ತದೆ ಎಂಬ ಅಭಿಪ್ರಾಯವನ್ನು ರಾಮದಾಸ್ ಸೃಷ್ಟಿಸಿದ್ದಾರೆ ಎಂದು ಟಿಐಎಸ್‌ಎಸ್ ಕಂಡುಕೊಂಡಿದ್ದು ಸರಿಯಾಗಿದೆ ಎಂದು ಗಮನಿಸಿತು. 2015 ರಲ್ಲಿ ರಾಮದಾಸ್ ಮೊದಲು ಮಾಧ್ಯಮ ಮತ್ತು ಸಾಂಸ್ಕೃತಿಕ ಅಧ್ಯಯನ ಕೋರ್ಸ್‌ನಲ್ಲಿ ಸ್ನಾತಕೋತ್ತರ ಪದವಿಗಾಗಿ ಟಿಐಎಸ್‌ಎಸ್‌ಗೆ ಸೇರಿಕೊಂಡರು. ಅವರಿಗೆ ಸಂಸ್ಥೆಯಿಂದ ವಿದ್ಯಾರ್ಥಿವೇತನ ನೀಡಲಾಯಿತು. 2018 ರಲ್ಲಿ, ಅವರು ಅಭಿವೃದ್ಧಿ ಅಧ್ಯಯನದಲ್ಲಿ ಸಂಯೋಜಿತ ಎಂಫಿಲ್. ಮತ್ತು ಪಿಎಚ್‌ಡಿ ಕೋರ್ಸ್‌ಗೆ ಸೇರಿಕೊಂಡರು. 2023 ರಲ್ಲಿ, ಯುಜಿಸಿ–ನೆಟ್ ಪರೀಕ್ಷೆಯಲ್ಲಿ ಅವರ ಸಾಧನೆಯನ್ನು ಪರಿಗಣಿಸಿ, ಕೇಂದ್ರ ಸಾಮಾಜಿಕ ನ್ಯಾಯ ಸಚಿವಾಲಯವು ಅವರಿಗೆ ಪರಿಶಿಷ್ಟ ಜಾತಿಯಲ್ಲಿ ರಾಷ್ಟ್ರೀಯ ಫೆಲೋಶಿಪ್ ನೀಡಿತು.

# ಅಯೋಧ್ಯೆ–ಫೈಜಾಬಾದ್ ರಸ್ತೆಯಲ್ಲಿ ಮಾಂಸ–ಮದ್ಯ ಮಾರಾಟ ನಿಷೇಧ



ಅಯೋಧ್ಯೆ, ಮೇ 3: ಅಯೋಧ್ಯೆ ನಗರ ಪಾಲಿಕೆಯು, ಅಯೋಧ್ಯೆ ಮತ್ತು ಫೈಜಾಬಾದ್ ಅನ್ನು ಸಂಪರ್ಕಿಸುವ ಪ್ರಮುಖ ರಸ್ತೆಯಾದ ರಾಮ್ ಪಥ್ನ ಸಂಪೂರ್ಣ 14 ಕಿಲೋಮೀಟರ್ ವ್ಯಾಪ್ತಿಯಲ್ಲಿ ಮಾಂಸ ಮತ್ತು ಮದ್ಯ ಮಾರಾಟವನ್ನು ನಿಷೇಧಿಸುವ ನಿರ್ಣಯವನ್ನು ಅಂಗೀಕರಿಸಿದೆ. ಹೊಸದಾಗಿ ನಿರ್ಮಾಣವಾಗಿರುವ ರಾಮ ದೇವಾಲಯದ ಸುತ್ತಮುತ್ತಲಿನ ಪ್ರದೇಶದ ಧಾರ್ಮಿಕ ಪಾವಿತ್ರ್ಯವನ್ನು ಎತ್ತಿಹಿಡಿಯುವ ಪ್ರಯತ್ನದಲ್ಲಿ ತಂಬಾಕು ಉತ್ಪನ್ನಗಳು, ಪಾನ್, ಗುಟ್ಕಾ, ಬೀಡಿ, ಸಿಗರೇಟ್ ಮತ್ತು ಒಳ ಉಡುಪುಗಳ ಜಾಹೀರಾತುಗಳಿಗೂ ಈ ನಿರ್ಣಯವು ನಿರ್ಬಂಧಗಳನ್ನು ವಿಸ್ತರಿಸುತ್ತದೆ.


ಸರಯು ನದಿಯ ಪವಿತ್ರ ಘಾಟ್ಗಳಲ್ಲಿ ಪ್ರಾರಂಭವಾಗಿ ರಾಮ ಜನ್ಮಭೂಮಿ ದೇವಾಲಯವನ್ನು ಹಾದುಹೋಗುವ ರಾಮ ಪಥ್ ಅನ್ನು ವೇಗವಾಗಿ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಕಾರಿಡಾರ್ ಆಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಪ್ರತಿ ತಿಂಗಳು ಲಕ್ಷಾಂತರ ಭಕ್ತರು ಮತ್ತು ಪ್ರವಾಸಿಗರನ್ನು ಆಕರ್ಷಿಸುತ್ತಿದೆ. ಹಿಂದೂ ಧಾರ್ಮಿಕ ಭಾವನೆಗಳಿಗೆ ಆಕ್ಷೇಪಾರ್ಹ ಅಥವಾ ಅಗೌರವವೆಂದು ಪರಿಗಣಿಸಲಾದ ಉತ್ಪನ್ನಗಳನ್ನು ನಿಷೇಧಿಸುವ ಕ್ರಮವನ್ನು ಅಯೋಧ್ಯೆ ಸ್ಥಳೀಯ ಆಡಳಿತ ತೆಗೆದುಕೊಂಡಿದೆ ಎಂಬ ಮಾತು ಕೇಳಿಬರುತ್ತಿದೆ. ಅಯೋಧ್ಯಾ ಮಹಾನಗರ ಪಾಲಿಕೆಯ ಕಾರ್ಯಕಾರಿ ಸಮಿತಿಯು ಈ ನಿರ್ಣಯವನ್ನು ಅಂಗೀಕರಿಸಿದೆ ಎಂದು ಮೇಯರ್ ಗಿರೀಶ್ ಪತಿ ತ್ರಿಪಾಠಿ ಹೇಳಿದರು. ಅಯೋಧ್ಯಾ ಕೇವಲ ನಗರವಲ್ಲ, ಇದು ಭಾರತದ ಆಧ್ಯಾತ್ಮಿಕ ಹೃದಯ. ರಾಮಪಥ ಕೇವಲ ರಸ್ತೆಯಲ್ಲ, ಇದು ಶ್ರೀರಾಮನ ಬಳಿಗೆ ಕರೆದೊಯ್ಯುವ ಪವಿತ್ರ ಮಾರ್ಗವಾಗಿದೆ. ಈ ಮಾರ್ಗದ ಪಾವಿತ್ರ್ಯವನ್ನು ರಕ್ಷಿಸಲು, ಪಾಲಿಕೆಯು ತನ್ನ 14 ಕಿಲೋಮೀಟರ್ ವ್ಯಾಪ್ತಿಯಲ್ಲಿ ಮದ್ಯ ಮತ್ತು ಮಾಂಸ ಮಾರಾಟ ಹಾಗೂ ಅನುಚಿತ ಜಾಹೀರಾತುಗಳನ್ನು ನಿಷೇಧಿಸುವ ನಿರ್ಣಯವನ್ನು ಅಂಗೀಕರಿಸಿದೆ ಎಂದು ಹೇಳಿದರು. ಅಯೋಧ್ಯಾ ನಗರ ವ್ಯಾಪ್ತಿಯಲ್ಲಿ ಮಾಂಸ ಮತ್ತು ಮದ್ಯ ಮಾರಾಟವನ್ನು ಈಗಾಗಲೇ ನಿಷೇಧಿಸಲಾಗಿದ್ದರೂ, ಹೊಸ ನಿರ್ಣಯವು ಫೈಜಾಬಾದ್ನೊಳಗೆ ಬರುವ ರಾಮಪಥದ ಉಳಿದ ಭಾಗವನ್ನು ಒಳಗೊಳ್ಳುವ ಗುರಿಯನ್ನು ಹೊಂದಿದೆ ಎಂದು ಅವರು ಒತ್ತಿ ಹೇಳಿದರು. ರಾಮ್ ಪಥ್ನ ಸುಮಾರು ಐದು ಕಿಲೋಮೀಟರ್ ಫೈಜಾಬಾದ್ ನಗರದ ಮೂಲಕ ಹಾದುಹೋಗುತ್ತದೆ, ಅಲ್ಲಿ ಹಲವಾರು ಅಂಗಡಿಗಳು ಪ್ರಸ್ತುತ ಮಾಂಸ ಮತ್ತು ಮದ್ಯವನ್ನು ಮಾರಾಟ ಮಾಡುತ್ತವೆ. ಈ ನಿರ್ಣಯವು ಏಕರೂಪತೆಯನ್ನು ತರಲು ಮತ್ತು ಈ ಪವಿತ್ರ ಮಾರ್ಗದ ಸಂಪೂರ್ಣ ಭಾಗವು ಅಯೋಧ್ಯೆಯ ಧಾರ್ಮಿಕ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಖಚಿತಪಡಿಸಿಕೊಳ್ಳಲು ಪ್ರಯತ್ನಿಸುತ್ತದೆ ಎಂದು ಮೇಯರ್ ಹೇಳಿದರು. ನಿರ್ಣಯವನ್ನು ಅಂಗೀಕರಿಸಿದ ಕಾರ್ಯಕಾರಿ ಸಮಿತಿಯು ಮೇಯರ್, ಉಪ ಮೇಯರ್ ಮತ್ತು 12 ಕಾರ್ಪೊರೇಟರ್‌ಗಳನ್ನು ಒಳಗೊಂಡಿದೆ. ಗಮನಾರ್ಹವಾಗಿ, ಸಮಿತಿಯ ಏಕೈಕ ಮುಸ್ಲಿಂ ಸದಸ್ಯ, ಬಿಜೆಪಿಗೆ ಸೇರಿದ ಸುಲ್ತಾನ್ ಅನ್ಸಾರಿ ಸಹ ಈ ಪ್ರಸ್ತಾಪವನ್ನು ಬೆಂಬಲಿಸಿದರು. ನಗರದ ವಿಕಸನಗೊಳ್ಳುತ್ತಿರುವ ಸಾಂಸ್ಕೃತಿಕ ಗುರುತಿಗೆ ಹಂಚಿಕೆಯ ಬದ್ಧತೆಯನ್ನು ಒತ್ತಿಹೇಳುವ ಮೂಲಕ, ಯಾವುದೇ ಭಿನ್ನಾಭಿಪ್ರಾಯವಿಲ್ಲದೆ ಈ ನಿರ್ಧಾರವನ್ನು ಸರ್ವಾನುಮತದಿಂದ ತೆಗೆದುಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ನಿಷೇಧವು ಮಾಂಸಾಹಾರಿ ವಸ್ತುಗಳು ಮತ್ತು ಮದ್ಯದ ಮಾರಾಟಕ್ಕೆ ಸೀಮಿತವಾಗಿಲ್ಲ. ಧಾರ್ಮಿಕ ಸಂದರ್ಭದಲ್ಲಿ ಸೂಕ್ತವಲ್ಲವೆಂದು ಪರಿಗಣಿಸಲಾದ ಹೋರ್ಡಿಂಗ್ಗಳು ಮತ್ತು ಜಾಹೀರಾತುಗಳ ರೂಪದಲ್ಲಿ ದೃಶ್ಯ ಮಾಲಿನ್ಯವನ್ನು ಸಹ ಇದು ಗುರಿಯಾಗಿಸುತ್ತದೆ.

ರಾಮ್ ಪಥದ ಉದ್ದಕ್ಕೂ ನಡೆಯುವ, ಸಂಚರಿಸುವ ಯಾತ್ರಿಕರು ಮತ್ತು ಭಕ್ತರು ದೇವಾಲಯದ ಪರಿಸರದ ಪಾವಿತ್ರ್ಯಕ್ಕೆ ವಿರುದ್ಧವಾದ ಚಿತ್ರಗಳು ಅಥವಾ ಉತ್ಪನ್ನಗಳಿಗೆ ಒಡ್ಡಿಕೊಳ್ಳದಂತೆ ನಾವು ಖಚಿತಪಡಿಸಿಕೊಳ್ಳಲು ಬಯಸುತ್ತೇವೆ. ಆದ್ದರಿಂದ, ಪಾನ್ ಮಸಾಲ, ಸಿಗರೇಟ್ ಮತ್ತು ಒಳ ಉಡುಪುಗಳಿಗೆ ಸಂಬಂಧಿಸಿದ ಜಾಹೀರಾತುಗಳನ್ನು ಅನುಮತಿಸಲಾಗುವುದಿಲ್ಲ ಎಂದು ಪುರಸಭೆಯ ಹಿರಿಯ ಅಧಿಕಾರಿಯೊಬ್ಬರು ಹೇಳಿದರು. ನಿರ್ಣಯವನ್ನು ಅಂಗೀಕರಿಸಲಾಗಿದ್ದರೂ, ಅನುಷ್ಠಾನಕ್ಕೆ ಎಚ್ಚರಿಕೆಯಿಂದ ಯೋಜನೆ ಅಗತ್ಯವಿರುತ್ತದೆ. ಪುರಸಭೆಯು ಶೀಘ್ರದಲ್ಲೇ ಜಾರಿ ಸಮಯಸೂಚಿ ಮತ್ತು ವಿಧಾನಗಳನ್ನು ವಿವರಿಸುವ ವಿವರವಾದ ಅಧಿಸೂಚನೆಯನ್ನು ಹೊರಡಿಸುವ ನಿರೀಕ್ಷೆಯಿದೆ. ಇವುಗಳಲ್ಲಿ ಫೈಜಾಬಾದ್ನಲ್ಲಿ ಅಸ್ತಿತ್ವದಲ್ಲಿರುವ ಅಂಗಡಿಯವರಿಗೆ ಸೂಚನೆಗಳು, ಸ್ಥಳಾಂತರ ಆಯ್ಕೆಗಳು ಮತ್ತು ಉಲ್ಲಂಘನೆಗಳಿಗೆ ದಂಡಗಳು ಸೇರಿವೆ. ಈ ಕ್ರಮವು ಸ್ಥಳೀಯ ಜನಸಂಖ್ಯೆಯಿಂದ ಮಿಶ್ರ ಪ್ರತಿಕ್ರಿಯೆ ಬಂದಿದೆ. ಅಯೋಧ್ಯೆಯ ವಿಶಿಷ್ಟ ಧಾರ್ಮಿಕ ಸ್ಥಾನಮಾನವನ್ನು ಉಲ್ಲೇಖಿಸಿ ಅನೇಕ ನಿವಾಸಿಗಳು ಮತ್ತು ಧಾರ್ಮಿಕ ಗುಂಪುಗಳು ಈ ನಿರ್ಧಾರವನ್ನು ಸ್ವಾಗತಿಸಿದ್ದರೂ, ಫೈಜಾಬಾದ್ನ ಕೆಲವು ವ್ಯಾಪಾರಿಗಳು ಜೀವನೋಪಾಯದ ನಷ್ಟದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಜಾರಿಗೊಳಿಸುವ ಮೊದಲು ಸಂಬಂಧಪಟ್ಟವರೊಂದಿಗೆ ಸಮಾಲೋಚನೆಗಳನ್ನು ನಡೆಸಲಾಗುವುದು ಎಂದು ನಾಗರಿಕ ಅಧಿಕಾರಿಗಳು ಭರವಸೆ ನೀಡಿದ್ದಾರೆ. ಅಯೋಧ್ಯೆಯನ್ನು ವಿಶ್ವ ದರ್ಜೆಯ ಆಧ್ಯಾತ್ಮಿಕ ಪ್ರವಾಸೋದ್ಯಮ ತಾಣವಾಗಿ ಅಭಿವೃದ್ಧಿಪಡಿಸುವ ಯುಪಿ ಸರ್ಕಾರದ ವಿಶಾಲ ದೃಷ್ಟಿಕೋನಕ್ಕೆ ಈ ನಿರ್ಧಾರ ಹೊಂದಿಕೆಯಾಗುತ್ತದೆ ಎಂದು ನಗರಾಭಿವೃದ್ಧಿ ತಜ್ಞರು ಹೇಳುತ್ತಾರೆ.




**ಮಹಾರಾಷ್ಟ್ರದ ಮುಂಬೈನಲ್ಲಿ ನಡೆದ WAVES–2025 ರಲ್ಲಿ ಮಾಹಿತಿ ಮತ್ತು ಪ್ರಸಾರ ಮತ್ತು ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಡಾ.ಎಲ್.ಮುರುಗನ್ ಅವರು ಮಾಧ್ಯಮ ಮತ್ತು ಮನರಂಜನಾ ವಲಯ 2024–2025 ರ ಅಂಕಿಅಂಶಗಳ ಕೈಪಿಡಿ ಸೇರಿದಂತೆ ಐದು ವರದಿಗಳನ್ನು ಬಿಡುಗಡೆ ಮಾಡಿದರು.**

# ದೇವಸ್ಥಾನದಲ್ಲಿ ಕಾಲ್ತುಳಿತ: 6 ಸಾವು, 50ಕ್ಕೂ ಹೆಚ್ಚು ಜನರಿಗೆ ಗಾಯ



**ಪಣಜಿ, ಮೇ 3:** ಗೋವಾದ ಬಿಚೋಲಿಮ್ನ ಲೈರಾಯಿ ದೇವಿ ದೇವಸ್ಥಾನದ ಜಾತ್ರೆಯಲ್ಲಿ ಕಾಲ್ತುಳಿತ ಸಂಭವಿಸಿ ಆರು ಜನರು ಸಾವನ್ನಪ್ಪಿದ್ದು, 50ಕ್ಕಿಂತ ಅಧಿಕ ಜನರು ಗಾಯಗೊಂಡಿದ್ದಾರೆ. ಜಾತ್ರೆಗೆ ಸಾವಿರಾರು ಜನರು ಆಗಮಿಸಿದ್ದ ವೇಳೆ, ಶನಿವಾರ ಮುಂಜಾನೆ 3 ಗಂಟೆಯ ಸುಮಾರಿಗೆ ಅವಘಡ ಸಂಭವಿಸಿದೆ. ಗಾಯಾಳುಗಳಲ್ಲಿ ಕನಿಷ್ಠ 10 ಜನರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಗೋವಾ ವೈದ್ಯಕೀಯ ಕಾಲೇಜಿನಲ್ಲಿ ನಿಗಾದಲ್ಲಿ ಇರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಜಾತ್ರೆಗೆ ಗೋವಾ ಮಾತ್ರವಲ್ಲದೆ ಮಹಾರಾಷ್ಟ್ರ ಮತ್ತು ಕರ್ನಾಟಕದ ಭಕ್ತರು ಸೇರಿದ್ದರು ಎಂದು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ. ತನಿಖೆಯ ನಂತರ ದುರಂತದ ನಿಖರವಾದ ಕಾರಣ ತಿಳಿದುಬರಲಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾಗಿ ವರದಿಯಾಗಿದೆ. ಕನಿಷ್ಠ 30 ಜನರು ಗಾಯಗೊಂಡಿದ್ದಾರೆ ಎಂದು ರಾಜ್ಯ ಆರೋಗ್ಯ ಸಚಿವ ವಿಶ್ವಜಿತ್ ರಾಣೆ ದೃಢಪಡಿಸಿದ್ದಾರೆ. ಅವರಲ್ಲಿ ಎಂಟು ಜನರ ಸ್ಥಿತಿ ಗಂಭೀರವಾಗಿದೆ. ಗಾಯಾಳುಗಳಲ್ಲಿ ಇಬ್ಬರನ್ನು ಬಂಬೋಲಿಮ್‌ನಲ್ಲಿರುವ ಗೋವಾ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದಿದ್ದಾರೆ. ಲೈರಾಯಿ ದೇವಿ ದೇವಾಲಯವು ಉತ್ತರ ಮತ್ತು ದಕ್ಷಿಣ ಭಾರತದ ವಾಸ್ತುಶಿಲ್ಪ ಶೈಲಿಯಿಂದ ಹೆಸರುವಾಸಿಯಾಗಿದೆ. ಪ್ರತಿ ವರ್ಷ ಮೇ ತಿಂಗಳಲ್ಲಿ ಇಲ್ಲಿ ಜಾತ್ರೆ ನಡೆಯುತ್ತದೆ. ಸಾಂಪ್ರದಾಯಿಕ ಬೆಂಕಿಯ ಮೇಲೆ ನಡೆಯುವ ಆಚರಣೆಯನ್ನು ಒಳಗೊಂಡಿರುವ ಈ ಜಾತ್ರೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಳ್ಳುತ್ತಾರೆ.

# ತಮಿಳುನಾಡಿನ 25 ಮೀನುಗಾರರ ಬಿಡುಗಡೆ

**ಚೆನ್ನೈ, ಮೇ 3:** ಫೆಬ್ರವರಿ 23 ರಂದು ಶ್ರೀಲಂಕಾ ಕರಾವಳಿ ಕಾವಲು ಪಡೆ ಬಂಧಿಸಿದ್ದ ತಮಿಳುನಾಡಿನ 25 ಮೀನುಗಾರರು ಶನಿವಾರ ಸ್ವದೇಶಕ್ಕೆ ಮರಳಿದರು. ಎರಡು ತಿಂಗಳಿಗೂ ಹೆಚ್ಚು ಕಾಲ ಬಂಧನದಲ್ಲಿದ್ದ ಮೀನುಗಾರರು ಕೊಲಂಬೊದಿಂದ ಏರ್ ಇಂಡಿಯಾ ವಿಮಾನದ ಮೂಲಕ ಚೆನ್ನೈಗೆ ಬಂದರು, ಅವರಿಗೆ ರಾಜ್ಯ ಸರ್ಕಾರದಿಂದ ಸಾರಿಗೆ ವ್ಯವಸ್ಥೆ ಮಾಡಲಾಯಿತು. ರಾಮೇಶ್ವರಂ ಮೂಲದ ಮೀನುಗಾರರು ಮೋಟಾರು ದೋಣಿಗಳಲ್ಲಿ ಮಂಡಪಂ ಪ್ರದೇಶಕ್ಕೆ ಬಂದಾಗ ಈ ಘಟನೆ ಸಂಭವಿಸಿದೆ.

ಮಧ್ಯರಾತ್ರಿಯ ಸಮಯದಲ್ಲಿ, ಶ್ರೀಲಂಕಾ ಕರಾವಳಿ ಕಾವಲು ಪಡೆ ಗಸ್ತು ತಿರುಗಿ ಮೀನುಗಾರರು ಸಮುದ್ರ ಗಡಿಯನ್ನು ದಾಟಿದ್ದಾರೆ ಎಂದು ಆರೋಪಿಸಿ ಅವರನ್ನು ತಡೆದರು. ಮೀನುಗಾರರನ್ನು ವಶಕ್ಕೆ ತೆಗೆದುಕೊಂಡು, ನಂತರ ನ್ಯಾಯಾಲಯಕ್ಕೆ ಹಾಜರುಪಡಿಸಿ ಜೈಲಿಗೆ ಹಾಕಲಾಯಿತು. ಅವರ ಬಂಧನದ ನಂತರ, ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರಿಗೆ ಪತ್ರ ಬರೆದು, ಮೀನುಗಾರರ ಬಿಡುಗಡೆಯನ್ನು ಅವರ ದೋಣಿಗಳೊಂದಿಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಶ್ರೀಲಂಕಾದಲ್ಲಿರುವ ಭಾರತೀಯ ಹೈಕಮಿಷನ್ ಅಧಿಕಾರಿಗಳು ನಂತರ ಶ್ರೀಲಂಕಾ ಅಧಿಕಾರಿಗಳೊಂದಿಗೆ ಚರ್ಚೆಯಲ್ಲಿ ತೊಡಗಿದರು. ಶ್ರೀಲಂಕಾ ನ್ಯಾಯಾಲಯವು ಇತ್ತೀಚೆಗೆ ಅವರ ಬಿಡುಗಡೆಗೆ ಆದೇಶಿಸಿತು. ನಂತರ, ಮೀನುಗಾರರನ್ನು ಭಾರತೀಯ ಹೈಕಮಿಷನ್ಗೆ ಹಸ್ತಾಂತರಿಸಲಾಯಿತು. ಕೊಲಂಬೊದಲ್ಲಿ ಮೀನುಗಾರರು ತಂಗಿದ್ದ ಸಮಯದಲ್ಲಿ ಹೈಕಮಿಷನ್ ಅವರಿಗೆ ಸರಿಯಾದ ವಸತಿ ಸೌಕರ್ಯವನ್ನು ಖಚಿತಪಡಿಸಿತು. ಅವರಿಗೆ ತುರ್ತು ಪ್ರಮಾಣಪತ್ರಗಳನ್ನು ನೀಡಿ, ಮೀನುಗಾರರು ಭಾರತಕ್ಕೆ ಮರಳಲು ವಿಮಾನ ಟಿಕೆಟ್‌ಗಳನ್ನು ವ್ಯವಸ್ಥೆ ಮಾಡಿತು. ಈ ಇತ್ತೀಚಿನ ಘಟನೆಯು ಸಮುದ್ರದ ಮಧ್ಯದ ಬಂಧನಗಳ ಪುನರಾವರ್ತಿತ ಕಾರಣ ಭಾರತ ಮತ್ತು ಶ್ರೀಲಂಕಾ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯನ್ನು ಹೆಚ್ಚಿಸುತ್ತದೆ.

2025 ರ ಆರಂಭದಿಂದ, ಶ್ರೀಲಂಕಾದ ಅಧಿಕಾರಿಗಳು 119 ಭಾರತೀಯ ಮೀನುಗಾರರನ್ನು ಬಂಧಿಸಿದ್ದಾರೆ. 16 ಭಾರತೀಯ ಮೀನುಗಾರಿಕಾ ದೋಣಿಗಳನ್ನು ವಶಪಡಿಸಿಕೊಂಡಿದ್ದಾರೆ. ತಮಿಳುನಾಡಿನ ಮೀನುಗಾರರ ಸಂಘಗಳು ಹೆಚ್ಚುತ್ತಿರುವ ಆತಂಕವನ್ನು ವ್ಯಕ್ತಪಡಿಸಿವೆ. ಪ್ರಮುಖ ಮೀನುಗಾರರ ನಾಯಕರಾದ ವಿ.ಪಿ. ಸೇಸುರಾಜ, ಬಂಧಿತ ಮೀನುಗಾರರ ಕುಟುಂಬಗಳು ಎದುರಿಸುತ್ತಿರುವ ಆರ್ಥಿಕ ಸಂಕಷ್ಟವನ್ನು ಒತ್ತಿ ಹೇಳಿದರು. ಅವರಲ್ಲಿ ಹಲವರು ಶ್ರೀಲಂಕಾ ವಿಧಿಸಿದ ಭಾರೀ ದಂಡವನ್ನು ಪಾವತಿಸಲು ಸಾಧ್ಯವಾಗುತ್ತಿಲ್ಲ ಎಂದರು

ಕೆಲವು ಮೀನುಗಾರರು ಸಮುದ್ರಕ್ಕೆ ಇಳಿಯಲು ಹಿಂಜರಿಯುತ್ತಿದ್ದಾರೆ ಎಂದು ಅವರು ಹೇಳಿದರು. ಇದಕ್ಕೆ ಪ್ರತಿಕ್ರಿಯೆಯಾಗಿ, ಹಲವಾರು ಮೀನುಗಾರರ ಸಂಘಗಳು ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ದೊಡ್ಡ ಪ್ರಮಾಣದ ಪ್ರತಿಭಟನೆಗಳನ್ನು ಯೋಜಿಸುತ್ತಿವೆ. ಒಂದು ಸಂಘದ ನಾಯಕ ಆಂಥೋನಿ ಜಾನ್, ಸಂಘಟಿತ ಪ್ರದರ್ಶನಗಳನ್ನು ಘೋಷಿಸಿದರು. ಬಂಧಿತ ಮೀನುಗಾರರ ಬಿಡುಗಡೆ, ವಶಪಡಿಸಿಕೊಂಡ ದೋಣಿಗಳನ್ನು ಮರುಪಡೆಯುವುದು ಮತ್ತು ಹೆಚ್ಚಿನ ಘಟನೆಗಳನ್ನು ತಡೆಗಟ್ಟಲು ಶ್ರೀಲಂಕಾದೊಂದಿಗೆ ದ್ವಿಪಕ್ಷೀಯ ಒಪ್ಪಂದದ ಮಾತುಕತೆ ಸೇರಿದಂತೆ ನಿರ್ಣಾಯಕ ಕ್ರಮಗಳನ್ನು ತೆಗೆದುಕೊಳ್ಳುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ತಂಗಚಿಮಾಡಮ್ನ ಪ್ರತಿನಿಧಿ ರಾಜಗೋಪಾಲ್ ಸಿಎಂ, ಸರ್ಕಾರದ ನಿಷ್ಕ್ರಿಯತೆಯನ್ನು ಟೀಕಿಸಿದರು. ಅನೇಕ ಭಾರತೀಯ ಮೀನುಗಾರರು ಶ್ರೀಲಂಕಾದಲ್ಲಿ ಜೈಲಿನಲ್ಲಿ ಉಳಿದಿದ್ದಾರೆ, ಇದರಿಂದಾಗಿ ಅವರ ಕುಟುಂಬಗಳು ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ಎತ್ತಿ ತೋರಿಸಿದರು. 2018 ರಿಂದ ಸುಮಾರು 270 ಭಾರತೀಯ ಟ್ರಾಲರ್‌ಗಳನ್ನು ಬಂಧಿಸಲಾಗಿದ್ದು, ಇದು ಮೀನುಗಾರರ ಜೀವನೋಪಾಯಕ್ಕೆ ತೀವ್ರ ಹೊಡೆತ ನೀಡಿದೆ ಎಂದು ಅವರು ಗಮನಸೆಳೆದರು. ಈ ದೀರ್ಘಕಾಲದ ಸಮಸ್ಯೆಯನ್ನು ಪರಿಹರಿಸಲು ಬಲವಾದ ರಾಜತಾಂತ್ರಿಕ ಕ್ರಮಗಳ ತುರ್ತು ಅಗತ್ಯವನ್ನು ಮುಖ್ಯಮಂತ್ರಿ ಸ್ಟಾಲಿನ್ ಪುನರುಚ್ಚರಿಸಿದರು. ತಮಿಳು ಮೀನುಗಾರರ ಸುರಕ್ಷತೆ ಮತ್ತು ಭದ್ರತೆಗೆ ಆದ್ಯತೆ ನೀಡಬೇಕು ಎಂದು ಒತ್ತಿ ಹೇಳಿದರು.

ಡಿಸೆಂಬರ್ ಅಂತ್ಯದೊಳಗೆ ಎಲ್ಲರಿಗೂ ಹಕ್ಕುಪತ್ರ ನೀಡಲು ಕ್ರಮ ಕೈಗೊಳ್ಳಿ

# ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ ಸಚಿವ ಕೃಷ್ಣ ಬೈರೇಗೌಡ

**ಬೆಂಗಳೂರು, ಮೇ.3–** ಜೂನ್ ತಿಂಗಳ ಅಂತ್ಯದೊಳಗೆ ರಾಜ್ಯದ ಎಲ್ಲಾ 3614 ಕಂದಾಯ ಗ್ರಾಮಗಳಿಗೂ ಅಂತಿಮ ಅಧಿಸೂಚನೆ ಹೊರಡಿಸಬೇಕು. ಡಿಸೆಂಬರ್ ಅಂತ್ಯದೊಳಗೆ ಎಲ್ಲರಿಗೂ ಹಕ್ಕುಪತ್ರ ನೀಡುವ ಮೂಲಕ ಬಡವರ ಕೆಲಸವನ್ನು ಈ ವರ್ಷದೊಳಗೆ ಮುಗಿಸಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಎಲ್ಲಾ ಜಿಲ್ಲಾಧಿಕಾರಿಗಳಿಗೂ ಇಂದು ಗಡುವು ನಿಗದಿಗೊಳಿಸಿದ್ದಾರೆ.


ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಸಭೆ ನಡೆಸಿ ಸೂಚನೆ ನೀಡಿದ ಅವರು, "ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವ ಕಡು ಬಡವರಿಗೆ ಕಂದಾಯ ಗ್ರಾಮಗಳನ್ನು ರಚಿಸಿ ಶಾಶ್ವತ ಪರಿಹಾರ ನೀಡಬೇಕು ಎಂಬ ಉದ್ದೇಶದಿಂದಲೇ 2017 ರಲ್ಲಿ ಕಾನೂನಿಗೆ ತಿದ್ದುಪಡಿ ತರಲಾಗಿತ್ತು. ಆದರೆ ಅನುಷ್ಠಾನ ಈವರೆಗೆ ಪೂರ್ಣಗೊಳ್ಳದಿರುವುದು ದುರಾದೃಷ್ಟ. ಈ ಹಿಂದೆ ಹಲವರಿಗೆ ಹಕ್ಕುಪತ್ರ ನೀಡಿದ್ದರೂ, ಇನ್ನೂ ಆಗಬೇಕಾದ ಕೆಲಸ ಸಾಕಷ್ಟು ಬಾಕಿ ಇದೆ" ಎಂದು ವಿಷಾದಿಸಿದರು."ಪ್ರಸ್ತುತ ಅಂಕಿ ಅಂಶಗಳ ಪ್ರಕಾರ ರಾಜ್ಯಾದ್ಯಂತ 3,614 ಕಂದಾಯ ಗ್ರಾಮಗಳಿದ್ದು, ಈವರೆಗೆ 2600 ಕಂದಾಯ ಗ್ರಾಮಗಳಿಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಕಳೆದ ಸರ್ಕಾರದ ಅವಧಿಯಲ್ಲಿ 1400 ಗ್ರಾಮಗಳ ರಚನೆ ಆಗಿದ್ದರೆ, ಕಳೆದ ಎರಡು ವರ್ಷದ ಅವಧಿಯಲ್ಲಿ 1,200 ಗ್ರಾಮಗಳಿಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಆದರೆ, ವಾಸ್ತವದಲ್ಲಿ ಇನ್ನೂ 1014 ಗ್ರಾಮಗಳಿಗೆ ಅಂತಿಮ ಅಧಿಸೂಚನೆ ಬಾಕಿ ಇದೆ" ಎಂದರು.

ಮುಂದುವರೆದು "ಕೇಂದ್ರ ಸರ್ಕಾರ ದೇಶದಾದ್ಯಂತ ಜನಗಣತಿ ಆರಂಭಿಸುವುದಾಗಿ ಘೋಷಿಸಿದೆ. ಜನಗಣತಿ ಆರಂಭವಾದರೆ ಜುಲೈ ತಿಂಗಳಿನಿಂದ ಕೇಂದ್ರ ಸರ್ಕಾರ ಯಾವುದೇ ಅಧಿಸೂಚನೆ ಹೊರಡಿಸಲು ಅವಕಾಶ ನೀಡುವುದಿಲ್ಲ. ಪರಿಣಾಮ ಬಡವರ ಅತಿಮುಖ್ಯ ಕೆಲಸಕ್ಕೆ ತೊಡಕುಂಟಾಗುವ ಸಾಧ್ಯತೆ ಇದೆ. ಹೀಗಾಗಿ ಬಾಕಿ ಇರುವ 1014 ಗ್ರಾಮಗಳಿಗೂ ಇದೇ ವರ್ಷದ ಜೂನ್ ಅಂತ್ಯದೊಳಗೆ ಅಂತಿಮ ಅಧಿಸೂಚನೆ ಹೊರಡಿಸಿ ಜುಲೈ ನಂತರ ಹಕ್ಕುಪತ್ರ ವಿತರಿಸಿ. ಸಿಎಂ ಸಿದ್ದರಾಮಯ್ಯ ಅವರಿಗೆ ನೀಡಿದ ಮಾತಿನಂತೆ ಈ ಕೆಲಸವನ್ನು ಈ ವರ್ಷಾಂತ್ಯದೊಳಗೆ ಮುಗಿಸಿ" ಎಂದು ಎಲ್ಲಾ ಜಿಲ್ಲಾಧಿಕಾರಿಗಳಿಗೂ ಸಮಯದ ಗಡುವು ನಿಗದಿಪಡಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿದೆ. ಎಲ್ಲಾ ಕಾಲದಲ್ಲೂ ಸಮಾಜದ ಅತ್ಯಂತ ಹಿಂದುಳಿದವರು ಹಾಗೂ ಕಡು ಬಡವರ ಪರ ಕೆಲಸ ಮಾಡುವುದೇ ಸರ್ಕಾರದ ಧ್ಯೇಯ. ಆ ನಿಟ್ಟಿನಲ್ಲಿ ಆಡಳಿತ ವರ್ಗವೂ ಸಹಕರಿಸಬೇಕು ಎಂದು ಸಭೆಯಲ್ಲಿ ಸಚಿವ ಕೃಷ್ಣ ಬೈರೇಗೌಡ ಅವರು ಕಿವಿಮಾತು ಹೇಳಿದರು.

ಈ ತಿಂಗಳಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸುತ್ತಿದೆ. ನಾಗರೀಕ ಸಮಾಜದಲ್ಲಿ ಮೂಲಭೂತ ಸೌಲಭ್ಯಗಳಿಂದ ವಂಚಿತರಾದ ಹಾಗೂ ಹಿಂದುಳಿದ ಜನ ಸಮೂಹಕ್ಕೆ ಸಹಾಯವಾಗುವ ಕೆಲಸ ಮಾಡಿ ಆ ಮೂಲಕ ಎರಡು ವರ್ಷ ಪೂರೈಸಿದ ಹರ್ಷಾಚರಣೆ ನಡೆಸಿದರೆ ಮಾತ್ರ ಆ ಕಾರ್ಯಕ್ರಮ ಅರ್ಥಪೂರ್ಣ. ಆ ನಿಟ್ಟಿನಲ್ಲಿ ಮೇ. 20ಕ್ಕೆ ಹೊಸಪೇಟೆಯಲ್ಲಿ ಕಂದಾಯ ಗ್ರಾಮಗಳ 1 ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಮೂಲಕ ದಶಕಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಲು ಸರ್ಕಾರ ಮುಂದಾಗಿದೆ" ಎಂದು ತಿಳಿಸಿದರು."ಕಾರ್ಯಕ್ರಮದ ಭಾಗವಾಗಿ ಈಗಾಗಲೇ ಅಂತಿಮ ಅಧಿಸೂಚನೆ ಆಗಿರುವ 2600 ಕಂದಾಯ ಗ್ರಾಮಗಳ 1.41 ಲಕ್ಷ ಫಲಾನುಭವಿಗಳ ಪೈಕಿ 92,719 ಜನ ಹಕ್ಕುಪತ್ರ ಸಿದ್ದವಾಗಿದೆ. ಇನ್ನೂ 50 ಸಾವಿರ ಹಕ್ಕುಪತ್ರಗಳು ಬಾಕಿ ಇದ್ದು, ಬಾಕಿ ಹಕ್ಕುಪತ್ರಗಳನ್ನೂ ಶೀಘ್ರ ಸಿದ್ದಪಡಿಸಿ. ತುಮಕೂರು, ಚಿತ್ರದುರ್ಗ, ಬೆಳಗಾವಿ, ಹಾವೇರಿ, ರಾಯಚೂರು, ಬಾಗಲಕೋಟೆ, ವಿಜಯನಗರ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಬಾಕಿ ಇರುವ ಅಥವಾ ಬಿಟ್ಟುಹೋಗಿರುವ ಗ್ರಾಮಗಳನ್ನು ಗುರುತಿಸಿದರೆ ಇನ್ನೂ 30 ರಿಂದ 35 ಸಾವಿರ ಫಲಾನುಭವಿಗಳಿಗೆ ಹಕ್ಕುಪತ್ರ ಸಿದ್ದಪಡಿಸಬೇಕಾಗಬಹುದು. ಆ ಕೆಲಸವನ್ನೂ ಸಹ ಶೀಘ್ರ ಪೂರ್ಣಗೊಳಿಸಿ" ಎಂದರು.

ಮುಂದುವರೆದು, "ಹಾಡಿ, ಹಟ್ಟಿ, ತಾಂಡಾಗಳಲ್ಲಿ ವಾಸಿಸುತ್ತಿರುವವರು ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಸಾಕಷ್ಟು ಹಿಂದುಳಿದವರು. ಆದರೆ, ಈ ಗ್ರಾಮಗಳನ್ನು ಕಂದಾಯ ಗ್ರಾಮಗಳಾಗಿ ಘೋಷಿಸದ ಕಾರಣ ದಶಕಗಳಿಂದಲೂ ಇವರು



ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಇತ್ತೀಚೆಗೆ ಕಳೆದೊಂದು ದಶಕಗಳಿಂದ ರಾಜ್ಯ ಸರ್ಕಾರ ಗ್ರಾಮಠಾಣಾ ಗಡಿಗಳನ್ನೂ ಮೀರಿ "ಹಾಡಿ, ಹಟ್ಟಿ, ತಾಂಡಾಗಳಿಗೆ ರಸ್ತೆ ಹಾಗೂ ನೀರಿನ ಸೌಲಭ್ಯ ನೀಡಿದ್ದೇವೆ. ಈ ಹಿಂದೆ ಶಾಲೆ, ನೀರು ಸರಬರಾಜು ಸಹ ನೀಡುತ್ತಿರಲಿಲ್ಲ ಎಂಬುದೇ ಕಟು ವಾಸ್ತವ. ಇಂತಹ ಜನರಿಗೆ ಶಾಶ್ವತ ಪರಿಹಾರ ನೀಡಿದರೆ ಮಾತ್ರ ಸರ್ಕಾರ ಎರಡು ವರ್ಷ ಪೂರೈಸಿದ್ದೂ ಅರ್ಥಪೂರ್ಣವಾಗುತ್ತದೆ. ಹೀಗಾಗಿ ಎಲ್ಲಾ ಜಿಲ್ಲಾಧಿಕಾರಿಗಳೂ ಬಡವರ ಕೆಲಸಗಳನ್ನು ಆದ್ಯತೆ ಮೇಲೆ ಮಾಡಬೇಕು" ಎಂದು ಸೂಚಿಸಿದರು.ಸಭೆಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ, ಕಂದಾಯ ಆಯುಕ್ತರಾದ ಸುನೀಲ್ ಕುಮಾರ್ ಹಾಗೂ ಭೂ ಮಾಪನಾ ಇಲಾಖೆ ಆಯುಕ್ತರಾದ ಮಂಜುನಾಥ್ ಉಪಸ್ಥಿತರಿದ್ದರು.



ಬೆಂಗಳೂರಿನ ವಿಧಾನಸೌಧದಲ್ಲಿ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಣಕಾಸು ಇಲಾಖೆಯ ನೂತನ ಸಿಬ್ಬಂದಿಗೆ ಅನುಕಂಪದ ನೇಮಕಾತಿ ಪತ್ರಗಳನ್ನು ವಿತರಿಸಿದರು.

# ಎಸ್.ಆರ್.ವಿಶ್ವನಾಥ್ ಪಕ್ಷಾತೀತ ಕೆಲಸ ಮಾಡುವುದನ್ನು ಸ್ವಾಗತಿಸಿ ಮೆಚ್ಚಿಕೊಂಡಾಡಿದ ಸಿದ್ದರಾಮಯ್ಯ

**ಬೆಂಗಳೂರು, ಮೇ.3–** ಬಿಜೆಪಿ ಶಾಸಕ ಎಸ್.ಆರ್.ವಿಶ್ವನಾಥ್ ಅವರು ಯಲಹಂಕದಲ್ಲಿ ಪಕ್ಷಾತೀತವಾಗಿ ಕೆಲಸ ಮಾಡುವುದಾಗಿ ಹೇಳಿರುವುದನ್ನು ಸ್ವಾಗತಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಯಲಹಂಕದಲ್ಲಿ ದಲಿತರು ಹಿಂದುಳಿದವರೇ ಹೆಚ್ಚಿದ್ದು, ಎಲ್ಲರಿಗೂ ನ್ಯಾಯ ದೊರಕಿಸುವ ಕೆಲಸವನ್ನು ವಿಶ್ವನಾಥ್ ಮಾಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಶ್ವನಾಥ್ ಅವರನ್ನ ಹಾಡಿ ಹೊಗಳಿದ್ದಾರೆ.

ವಿಶ್ವನಾಥ್ ಅವರ ಕ್ಷೇತ್ರಕ್ಕೆ ಅನುದಾನದ ಬೇಡಿಕೆಯನ್ನು



ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು. ಇಂದು ಯಲಹಂಕದಲ್ಲಿ 14 ಅಡಿಗಳ ಬಾಬಾ ಸಾಹೇಬ್ ಅಂಬೇಡ್ಕರ್ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದ ಸಿದ್ದರಾಮಯ್ಯ ಅವರು, ಸಮಗ್ರ ಸಾಮಾಜಿಕ ವ್ಯವಸ್ಥೆ ಬದಲಾಗಬೇಕು. ಅಂಬೇಡ್ಕರ್ ದಲಿತರಾಗಿ ಹುಟ್ಟಿದರೂ ಎಲ್ಲರ ನಾಯಕರಾಗಿದ್ದರು. ಸಾಮಾಜಿಕ ನ್ಯಾಯದಿಂದ ವಂಚಿತರಾದವರೆಲ್ಲರ ನಾಯಕರಾಗಿದ್ದರು. ಈ ದೇಶದಲ್ಲಿ ಅವರು ಹುಟ್ಟಿರವುದೇ ನಮಗೆ ಹೆಮ್ಮೆಯ ಸಂಗತಿ ಎಂದರು.

ಅಂಬೇಡ್ಕರ್ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ ಪ್ರತಿಮೆಗಳು ಸಂಕೇತಗಳಾದರೂ, ಇವುಗಳಿಂದ ಅಂಬೇಡ್ಕರ್ ಅವರ ವಿಚಾರಗಳು ಇನ್ನಷ್ಟು ಪಸರಿಸಲಿ ಎಂದರು.

# ವಿದ್ಯಾರ್ಥಿಗಳಲ್ಲಿ ಭವಿಷ್ಯದ ಬಗ್ಗೆ ನೈತಿಕ ಬದ್ಧತೆ ಇದೆ ಎಐಸಿಟಿಇ ಅಧ್ಯಕ್ಷ ಪ್ರೊ. ಟಿ. ಜಿ. ಸೀತಾರಾಮ್

**ಬೆಂಗಳೂರು, ಮೇ.3–** ಎಪಿಎಸ್ ಶಿಕ್ಷಣ ಸಂಸ್ಥೆಯಿಂದ ಮಹಾ ಶಿಕ್ಷಣ ಎಕ್ಸ್ ಪೋ ಮತ್ತು ಬೃಹತ್ ಉದ್ಯೋಗ ಮೇಳವನ್ನು 3 ಮೇ ರಂದು ಎನ್. ಆರ್. ಕಾಲೊನಿಯ ಎಪಿಎಸ್ ಜನನ ದೇಗುಲ ಕ್ಯಾಂಪಸ್ ನಲ್ಲಿ ಆಯೋಜಿಸಿತ್ತು.

ಈ ಕಾರ್ಯಕ್ರಮವನ್ನು ಎಐಸಿಟಿಇ ಅಧ್ಯಕ್ಷ ಪ್ರೊ. ಟಿ. ಜಿ. ಸೀತಾರಾಮ್ ಉದ್ಘಾಟಿಸಿ, ವಿದ್ಯಾರ್ಥಿಗಳಲ್ಲಿ ಭವಿಷ್ಯದ ಬಗ್ಗೆ ನೈತಿಕ ಬದ್ಧತೆ ಇದ್ದು, ಇದನ್ನು ಸಕಾರಗೊಳಿಸಲು ಅವಿರತವಾಗಿ ಶ್ರಮಿಸುವ ಅಗತ್ಯವಿದೆ. ಈ ಕನಸು ನನಸು ಮಾಡಲು ಯಾವುದೇ ನೋಂದಣಿ ಶುಲ್ಕವಿಲ್ಲದೇ ಉದ್ಯೋಗ ಮೇಳ ಆಯೋಜಿಸಿರುವುದು ಉತ್ತಮ ಬೆಳವಣಿಗೆ ಎಂದರು.

ಎಪಿಎಸ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ. ವಿಷ್ಣು ಭಾರತ ಅಲಂಪಲ್ಲಿ ಮಾತನಾಡಿ, ನಮ್ಮ ಸಂಸ್ಥೆ ಶೈಕ್ಷಣಿಕ ಚಟುವಟಿಕೆ ಜೊತೆಗೆ ಜಾಗತೀಕರಣ ಯುಗದಲ್ಲಿ ಉತ್ತಮ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಲು ತಯಾರಾಗುವಂತೆ ಮಾರ್ಗದರ್ಶನ ನೀಡುವುದು ನಮ್ಮ ನೈತಿಕ ಜವಾಬ್ದಾರಿಯಾಗಿದೆ. ಇಂದಿನ ಯುವಶಕ್ತಿ ಕೇವಲ ಬುದ್ಧಿಮತ್ತೆ ಅಷ್ಟೇ ಅಲ್ಲದೆ ಭಾವನಾತ್ಮಕ ಬಲ ಹೊಂದಿರುವ ಶ್ರೇಷ್ಠ ಸಾಮರ್ಥ್ಯವನ್ನು ಹೊಂದಿದೆ ಎಂದರು.

ಪ್ರತಿಷ್ಠಿತ ಕಂಪನಿಗಳ 100ಕ್ಕೂ ಹೆಚ್ಚು ಸಂಸ್ಥೆಗಳು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಿದ್ದವು. ಕೆಲವರಿಗೆ ಸ್ಥಳದಲ್ಲಿಯೇ ನೇಮಕಾತಿ ಆದೇಶ ನೀಡಲಾಯಿತು. ಸಮಾಜ ಸೇವೆ ಮತ್ತು ಸಾಮಾಜಿಕ ಹೊಣೆಗಾರಿಕೆಯ ಭಾಗವಾಗಿ ಉದ್ಯೋಗ ಮೇಳ ಆಯೋಜಿಸಲಾಗಿದೆ. ಈ ಸಂದರ್ಭದಲ್ಲಿ 'ದಿ ರೋಡ್ ಅಹೆಡ್ 2.0' ಎಂಬ



ಪುಸ್ತಕವನ್ನು, ಪ್ರೊ. ಟಿ.ಜಿ. ಸೀತಾರಾಮ್ ಮತ್ತು ಯೋಗಿ ಕೊಚ್ಚಾರ್ ಬಿಡುಗಡೆ ಮಾಡಿದರು. ಉದ್ಯೋಗ ಮೇಳದಲ್ಲಿ ಬ್ರೋಸ್ ಜಾಬ್ ಸಿಇಓ ಕೃಷ್ಣ ಭಾರ್ಗವ್, ಪರಿಸರವಾದಿಗಳಾದ ರೇವತಿ ಕಾಮತ್, ಹರಿ ಕೇಶವ್ ಮಾಧವ್ ಮತ್ತು ನಟಿ ಬೃಂದಾ ಆಚಾರ್ಯ ಉಪಸ್ಥಿತರಿದ್ದರು.

ಕನ್ನಡವನ್ನು ಪಹಲ್ಗಾಮ್ ಘಟನೆಗೆ ಸಂಬಂಧ ಕಲ್ಪಿಸಿರುವ ಹೇಳಿಕೆ ಸಂಬಂಧ

# ಖ್ಯಾತ ಗಾಯಕ ಸೋನುನಿಗಮ್ ಕ್ಷಮೆಯಾಚನೆಗೆ ಜೆಡಿಎಸ್ ಒತ್ತಾಯ

**ಬೆಂಗಳೂರು, ಮೇ.3–** ಬಾಲಿವುಡ್ ಗಾಯಕ ಸೋನು ನಿಗಮ್ ವಿರುದ್ಧ ಕನ್ನಡಿಗರು, ಕನ್ನಡಪರ ಸಂಘಟನೆಗಳು ಕೆರಳಿ ಕೆಂಡವಾಗಿವೆ. ಅಭಿಮಾನಿಯೊಬ್ಬರ ಕನ್ನಡ ಅಭಿಮಾನವನ್ನು ಪಹಲ್ಗಾಮ್ ಘಟನೆಗೆ ಹೋಲಿಸಿದ ಸೋನು ನಿಗಮ್ ವರ್ತನೆಯನ್ನು ತೀವ್ರವಾಗಿ ಖಂಡಿಸಿರುವ ಕನ್ನಡಪರ ಸಂಘಟನೆಗಳು ಬಹಿರಂಗ ಕ್ಷಮೆಗೆ ಆಗ್ರಹಿಸಿವೆ. ಜೊತೆ ಕನ್ನಡ ಚಿತ್ರರಂಗದಿಂದಲೇ ಸೋನು ನಿಗಮ್ ಅವರನ್ನು ನಿಷೇಧಿಸಬೇಕೆಂದು ಒತ್ತಾಯಿಸಿವೆ.

ಕರವೇ ಅಧ್ಯಕ್ಷ ನಾರಾಯಣ ಗೌಡ, ಡಾ.ರಾಜ್ಕುಮಾರ್ ಅಭಿಮಾನಿ ಬಳಗದ ಅಧ್ಯಕ್ಷ ಸಾ.ರಾ.ಗೋವಿಂದು, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ, ಚಲನಚಿತ್ರ ನಿರ್ದೇಶಕರು, ಗಾಯಕರು, ಕನ್ನಡಪರ ಹೋರಾಟಗಾರರು ಸೇರಿದಂತೆ ಕನ್ನಡ ಮನಸ್ಸುಗಳು ಸೋನು ನಿಗಮ್ ಅವರ ಧೋರಣೆಯನ್ನು ಖಂಡಿಸಿ ಪ್ರತಿಭಟನೆ ನಡೆಸಿರುವುದಲ್ಲದೆ ಕಾನೂನು ಹೋರಾಟಕ್ಕೂ ಮುಂದಾಗಿವೆ.

ಯಾವುದೇ ಕಾರಣಕ್ಕೂ ಸೋನು ನಿಗಮ್ ಅವರ ಕಾರ್ಯಕ್ರಮಗಳನ್ನು ಆಯೋಜಿಸಬಾರದು. ಯಾವುದಾದರೂ ಕಾರ್ಯಕ್ರಮ ನಡೆಸಿದರೆ ಅದಕ್ಕೆ ಆಯೋಜಕರೇ ಹೊಣೆಗಾರರು ಆಗಬೇಕಾಗುತ್ತದೆ. ಮುಂದಾಗುವ ಪರಿಣಾಮ ಎದುರಿಸಲು ಸಿದ್ಧರಾಗಬೇಕೆಂದು ನಿರ್ಮಾಪಕ,



ನಿರ್ದೇಶಕರಿಗೆ ಕನ್ನಡಪರ ಸಂಘಟನೆಗಳ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಕನ್ನಡಪರ ಹೋರಾಟಗಾರ ರೂಪೇಶ್ ರಾಜಣ್ಣ ಮತ್ತಿತರ ಮುಖಂಡರು ಚಲನಚಿತ್ರ ವಾಣಿಜ್ಯ ಮಂಡಳಿಗೆ ತೆರಳಿ ದೂರು ನೀಡಿ, ಸೋನು ನಿಗಮ್ ಅವರನ್ನು ಕನ್ನಡ ಚಿತ್ರರಂಗದಿಂದ ನಿಷೇಧಿಸಬೇಕೆಂದು ಆಗ್ರಹಿಸಿದ್ದಾರೆ. ಅವರ ವಿವಾದಿತ ಹೇಳಿಕೆಯಿಂದ ಕನ್ನಡದ ಮನಸ್ಸುಗಳಿಗೆ ತೀವ್ರ ನೋವಾಗಿದೆ. ಅವರು ಬಹಿರಂಗ ಕ್ಷಮೆ ಯಾಚಿಸಬೇಕು. ಅವರು ಕನ್ನಡಕ್ಕೆ ಯಾವ ರೀತಿ ಸೇವೆ ಸಲ್ಲಿಸಿದರೇನು ಪ್ರಯೋಜನ? ಈ ರೀತಿ ಮಾಡಿರುವ ಅವಮಾನವನ್ನು ನಾವು ಸಹಿಸಲು ಸಾಧ್ಯವಿಲ್ಲ ಎಂದು ಕಿಡಿಕಾರಿದ್ದಾರೆ.

ಕರವೇ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಕನ್ನಡದ ಬಗ್ಗೆ ಅವಹೇಳನಕಾರಿಯಾಗಿ ಹೇಳಿಕೆ ನೀಡಿರುವ ಸೋನು ನಿಗಮ್ ಅವರ ಹೇಳಿಕೆ ಅತ್ಯಂತ ಬಾಲಿಶವಾಗಿದೆ. ಬಾಲಿವುಡ್‌ನಲ್ಲಿ ಖಾಲಿ ಕುಳಿತಿದ್ದ ಸೋನು ನಿಗಮ್ ಅವರನ್ನು ಕರ್ನಾಟಕದಲ್ಲಿ ರತ್ನಗಂಬಳಿ ಹಾಸಿ ಕರೆದು ಆತಿಥ್ಯ ನೀಡಿದ್ದಕ್ಕೆ ಈ ರೀತಿ ಅವಮಾನ ಮಾಡಿ ಕನ್ನಡಿಗರ ಸ್ವಾಭಿಮಾನಕ್ಕೆ ಧಕ್ಕೆ ತಂದಿದ್ದಾರೆ. ಕನ್ನಡಿಗರನ್ನು ಭಯೋತ್ಪಾದಕರಿಗೆ ಹೋಲಿಸಿ ಅವಮಾನ ಮಾಡಿರುವುದನ್ನು ಯಾರೂ ಸಹಿಸಲು ಸಾಧ್ಯವಿಲ್ಲ. ಕೂಡಲೇ ಅವರನ್ನು ಕನ್ನಡ ಚಿತ್ರರಂಗದಿಂದ ನಿಷೇಧ ಮಾಡಬೇಕು. ಯಾವುದೇ ಕಾರಣಕ್ಕೂ ಅವರಿಗೆ ಮುಂದಿನ ದಿನಗಳಲ್ಲಿ ಅವಕಾಶ ನೀಡಲೇ ಬಾರದು ಎಂದು ಆಗ್ರಹಿಸಿದ್ದಾರೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ್ ಬಿಳಿಮಲೆ ಅವರು, ಸೋನು ನಿಗಮ್ ಅವರ ವರ್ತನೆ ಖಂಡಿಸಿ, ಸೋನು ನಿಗಮ್ ಕನ್ನಡಿಗರ ಕ್ಷಮೆಯಾಚಿಸಬೇಕು. ಇಲ್ಲವೇ ಕರ್ನಾಟಕಕ್ಕೆ ಬರುವುದನ್ನು ನಿಲ್ಲಿಸಬೇಕು. ಕನ್ನಡ ಭಾಷೆಗೂ ಪಹಲ್ಗಾಮ್‌ನ ಭಯೋತ್ಪಾದನೆ ಘಟನೆಗೂ ತಳಕು ಹಾಕುವುದು ಎಷ್ಟು ಸಮಂಜಸ. ಇದೇ ರೀತಿ ಹಲವು ಕನ್ನಡಪರ ಹೋರಾಟಗಾರರು ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಸೋನು ನಿಗಮ್ ವರ್ತನೆ ಖಂಡಿಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಕ್ಷಮೆ ಕೇಳಬೇಕು: ಜೆಡಿಎಸ್ ಒತ್ತಾಯ:** ಕನ್ನಡವನ್ನು ಪಹಲ್ಗಾಮ್ ಘಟನೆಗೆ ಸಂಬಂಧ ಕಲ್ಪಿಸಿ, ಕನ್ನಡಿಗರನ್ನು ಕೆಣಕಿರುವ ಗಾಯಕ ಸೋನು ನಿಗಮ್ ಕನ್ನಡಿಗರ ಕ್ಷಮೆ ಕೇಳಲೇಬೇಕು ಎಂದು ಜೆಡಿಎಸ್ ಒತ್ತಾಯಿಸಿದೆ.

ಈ ಸಂಬಂಧ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಕನ್ನಡ ಭಾಷಾಭಿಮಾನವನ್ನು ಅವಮಾನಿಸಿದ ಗಾಯಕ ಸೋನು ನಿಗಮ್ ನಿಮಗೆ ಧಿಕ್ಕಾರವಿರಲಿ. ಕನ್ನಡ ಹಾಡು ಹಾಡಿ ಎಂದು ಕೇಳಿದ್ದಕ್ಕೆ, ಕನ್ನಡದ ಮೇಲಿನ ನಮ ಅಭಿಮಾನವನ್ನು ಪಹಲ್ಗಾಮ್ ಉಗ್ರರ ದಾಳಿಗೆ ಹೋಲಿಕೆ ಮಾಡಿದ್ದು ಖಂಡನೀಯ. ಇದನ್ನು ಕನ್ನಡಿಗರು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದೆ.

ಕನ್ನಡಾಭಿಮಾನವನ್ನು ಪಹಲ್ಗಾಮ್ ಘಟನೆಗೆ ಕಲ್ಪಿಸಿದ ನಿಮದು ಉಗ್ರಗಾಮಿ ಮನಸ್ಥಿತಿ.. ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನ್ನಡದ ಹಾಡನ್ನು ಹಾಡುವಂತೆ ಕೇಳಿದರೆ ಅದು ತಪ್ಪೇ? ಎಂದು ಪ್ರಶ್ನಿಸಿದೆ.

ಸೋನು ನಿಗಮ್ ನೀವು ಕನ್ನಡ ಭಾಷೆಯಲ್ಲಿ ಹಾಡು ಹಾಡಿದ್ದಕ್ಕೆ ಕರ್ನಾಟಕದಲ್ಲಿ ಮನೆ ಮಾತಾಗಿದ್ದೀರಿ, ಪ್ರಖ್ಯಾತಿಯನ್ನು ಪಡೆದಿದ್ದು ಎಂಬುದನ್ನು ಮರೆತುಬಿಟ್ಟಿರಾ? ಕೋಟ್ಯಂತರ ಕನ್ನಡಿಗರು, ಅಭಿಮಾನಿಗಳು ನಿಮ್ಮನ್ನು ಆರಾಧಿಸುತ್ತಾ ಪ್ರೀತಿ ಕೊಟ್ಟಿದ್ದಾರೆ. ಆದರೆ ನೀವು ಕನ್ನಡದ ಮನಸ್ಸುಗಳನ್ನು, ಅಭಿಮಾನಿಗಳನ್ನು ಅವಮಾನಿಸಿ, ನೋಯಿಸಿದ್ದೀರಿ, ಅವರ ನಂಬಿಕೆ ಮತ್ತು ವಿಶ್ವಾಸಕ್ಕೆ ದ್ರೋಹ ಬಗೆದಿದ್ದೀರಿ ಎಂದು ಜೆಡಿಎಸ್ ವಾಗ್ದಾಳಿ ನಡೆಸಿದೆ.

# ಪಕ್ಷಕ್ಕೆ ಸೇರಿಸಿಕೊಳ್ಳಲು ಯತ್ನಾಳ್ ಹೈಕಮಾಂಡ್‌ಗೆ ಖುದ್ದು ಪತ್ರ

**ಬೆಂಗಳೂರು, ಮೇ.3–** ಬಿಜೆಪಿಯಿಂದ ಈಗಾಗಲೇ ಉಚ್ಚಾಟನೆಗೊಂಡಿರುವ ರೆಬಲ್ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಮರಳಿ ಪಕ್ಷಕ್ಕೆ ಸೇರಿಸಿಕೊಳ್ಳಿ ಎಂದು ಹೈಕಮಾಂಡ್‌ಗೆ ಪತ್ರ ಬರೆದಿದ್ದಾರೆ ಎಂಬ ವದಂತಿ ಬಗ್ಗೆ ಖುದ್ದು ಯತ್ನಾಳ್ ಅವರೇ ಸ್ಪಷ್ಟನೆ ನೀಡಿದ್ದಾರೆ.

ಕಾಗಕ್ಕ–ಗುಬ್ಬಕ್ಕನ ಕಥೆ ಬರೆದು ತಪ್ಪು ಸಂದೇಶ ಯಾರೂ ಹರಡಿಸಬೇಡಿ. ಬಿಜೆಪಿ ವರಿಷ್ಠರಿಗೆ ನಾನು ಯಾವುದೇ ಪತ್ರವಾಗಲಿ, ದೂರವಾಣಿ ಮೂಲಕ ಸಂಪರ್ಕಿಸಿದ್ದಾಗಲಿ ಮಾಡಿಲ್ಲ. ಇಲ್ಲಸಲ್ಲದ, ಊಹಾ ಪೋಹದ ವರದಿಯನ್ನು ಮಾಡಬೇಡಿ ಎಂದು ಮನವಿ ಮಾಡಿದ್ದಾರೆ. ರಾಜಕೀಯ




ನಿರ್ಧಾರದ ಬಗ್ಗೆ ಚರ್ಚಿಸಬೇಕಿದ್ದರೆ ಖುದ್ದು ನನಗೆ ಸಂಪರ್ಕಿಸಿ ನನ್ನ ನಿಲುವು ಏನು ಎಂಬುವುದನ್ನು ತಿಳಿದುಕೊಳ್ಳುವಂತೆ ಹೇಳಿದ್ದಾರೆ.6 ವರ್ಷಗಳಕಾಲ ಉಚ್ಚಾಟನೆಗೊಂಡ ಯತ್ನಾಳ್ ಅವರು, ಇನ್ಮುಂದೆ ಪಕ್ಷದ ಶಿಸ್ತನ್ನು ಉಲ್ಲಂಘನೆ ಮಾಡಲ್ಲ, ಪಾಪಸ್ ಪಕ್ಷಕ್ಕೆ ಬರುವೆ. ನನ್ನ ಮನವಿ ಸ್ವೀಕರಿಸಿ ಎಂದು ಪಕ್ಷದ ಶಿಸ್ತು ಸಮಿತಿಗೆ ಪತ್ರ ಬರೆದಿದ್ದಾರೆ ಎಂಬ ಸುದ್ದಿ ನಿನ್ನೆಯಿಂದ ಎಲ್ಲೆಡೆ ಹರಿದಾಡುತ್ತಿರುವ ಬೆನ್ನಲ್ಲೇ ಈ ಬಗ್ಗೆ ಯತ್ನಾಳ್ ಅವರೇ ಊಹಾಪೋಹಗಳಿಗೆ ತೆರೆ ಎಳೆದಿದ್ದಾರೆ. ಉಚ್ಚಾಟನೆ ನಂತರದಲ್ಲಿ ನಾನು ಬಿಜೆಪಿಗೆ ಹೋಗಲ್ಲ, ಕಾಂಗ್ರೆಸ್ಕಚೇರಿ ಕಡೆಗೂ ನನ್ನ ಹೆಣ ಹೋಗಲ್ಲ. ನನ್ನನ್ನೇ ಹೈಕಮಾಂಡ್ ನಾಯಕರು ಗೌರವದಿಂದ ವಾಪಸ್ ಪಕ್ಷಕ್ಕೆ ಬರವಾಡಿಕೊಳ್ಳಬಹುದು. ಹಾಗೊಂದು ವೇಳೆ ಕರೆಯದಿದ್ದರೆ ನಾನೇ ಹೊಸ ಪಕ್ಷ ಕಟ್ಟುವೆ. ಮುಂದಿನ ಸಿಎಂ ನಾನೇ ಎಂದು ಯತ್ನಾಳ್ ಅವರು ಆಗಾಗ ಹೇಳಿದ್ದು ಗೊತ್ತೇ ಇದೆ.ಬಿಜೆಪಿಯ ಇತರ ರೆಬಲ್ ನಾಯಕರ ಒತ್ತಡಕ್ಕೆ ಮಣಿದು ಯತ್ನಾಳ್ ಅವರು ಕೇಂದ್ರ ಶಿಸ್ತು ಸಮಿತಿಗೆ ಪತ್ರ ಬರೆದಿದ್ದಾರೆ ಎಂದು ಸುದ್ದಿ ಹರಿದಾಡಿದೆ.

# ಪರಯ ಸಮುದಾಯದ ಜಾತಿ ನೋಂದಣಿಗೆ ಜನ ಜಾಗೃತಿ ಅಭಿಯಾನ

**ಬೆಂಗಳೂರು, ಮೇ.3–** ಮೇ 5 ರಿಂದ 17 ರವರೆಗೆ ಪರಿಶಿಷ್ಟರ ಒಳಮೀಸಲಾತಿ ಕುರಿತಂತೆ ನಡೆಯಲಿರುವ ಸಮೀಕ್ಷೆ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಬಲಗೈ ಪರಯ ಮಹಾಸಭಾ ಪರಿಶಿಷ್ಟ ಜಾತಿ ಬಲಗೈ ಪರಯ ಸಮುದಾಯದ ಜಾತಿ ನೋಂದಣಿ ಜನ ಜಾಗೃತಿ ಅಭಿಯಾನ ಆರಂಭಿಸಿದೆ.

ಸುದ್ದಿಗೋಷ್ಠಿಯಲ್ಲಿ, ಕರ್ನಾಟಕ ಪರಿಶಿಷ್ಟ ಜಾತಿ ಬಲಗೈ ಪರಯ ಮಹಾಸಭಾ ಅಧ್ಯಕ್ಷ ಎ. ಕೃಷ್ಣಪ್ಪ, ಒಳ ಮಿಸಲಾತಿ ಜಾತಿ ಜನಗಣತಿಯಲ್ಲಿ ಪರಿಶಿಷ್ಟ ಜಾತಿ ಬಲಗೈ 'ಪರಯ' ಎಂದು ನೋಂದಾಯಿಸಬೇಕು. ಇದು ನಿರ್ಣಾಯಕ ಸಮಯವಾಗಿದ್ದು, ಎಲ್ಲರೂ ಜಾಗೃತರಾಗಿ ತಮ್ಮ ಜಾತಿಯನ್ನು ನಿಖರವಾಗಿ ಬರೆಸ ಬೇಕು. ನಮ್ಮ ಅಸ್ಥಿತ್ವ ಉಳಿಸಿಕೊಂಡು ಪರಯರ ಜಾತಿಯ ನೈಜ ಪಾಲು ಪಡೆಯಬೇಕಾಗಿದೆ ಎಂದರು.

ನಮ್ಮ ಜನಾಂಗ ಜಾತಿ ಪ್ರಮಾಣ ಪತ್ರ ಪಡೆಯುವಾಗ ಪರಿಶಿಷ್ಟ ಜಾತಿ (ಆದಿ ಕರ್ನಾಟಕ) ಎಂದು ಬರೆಸುತ್ತಿದ್ದಾರೆ. ಈಗ ಆದಿ ಕರ್ನಾಟಕ ಎಂಬುದನ್ನು ಪರಿಗಣಿಸದೆ ಮೂಲ ಉಪ ಜಾತಿಯ ಹೆಸರಿನಲ್ಲಿ ಜನಗಣತಿ ಮಾಡಲು ತೀರ್ಮಾನಿಸಲಾಗಿದೆ. ಆರವು ಬಾಷಿಕರು ಇತಿಹಾಸದ ಹಿನ್ನೆಲೆಯ ಬಗ್ಗೆ ಸುದೀರ್ಘವಾಗಿ ಚರ್ಚಿಸಿ 1977ರ ಸರ್ಕಾರ ಅಧಿಸೂಚನೆ ಕ್ರಮ ಸಂಖ್ಯೆ 90 ರಲ್ಲಿ "ಪರಯ" ಎಂಬುದಾಗಿ ಇರುವುದನ್ನು ಗುರುತಿಸಿ ಕೊಳ್ಳುವುದು ಸೂಕ್ತವೆಂದು ತೀರ್ಮಾನಿಸ ಲಾಗಿದೆ. ನಾವು



ಮುಂದಿನ ದಿನಗಳಲ್ಲಿ ಜಾತಿ ಪ್ರಮಾಣ ಪತ್ರ ಪಡೆಯುವಾಗ ಪರಿಶಿಷ್ಟ ಜಾತಿ, ಉಪ ಜಾತಿ 'ಪರಯ' ಎಂದು ನಮೂದಿಸಿ ಒಳ ಮೀಸಲಾತಿಯ ಉಪಯೋಗ ಪಡೆದುಕೊಳ್ಳಬೇಕು ಎಂದು ಎ.ಕೃಷ್ಣಪ್ಪ ಹೇಳಿದರು.

# ಪಿಎಸ್‌ಸಿ ಪೂರ್ವಭಾವಿ ಪರೀಕ್ಷೆ ಪರೀಕ್ಷಾ ಟಿಕೆಟ್ ನೀಡದೆ ಸತಾಯಿಸುತ್ತಿರುವ ಸರ್ಕಾರದ ವಿರುದ್ಧ ಬಿಜೆಪಿ ಕಿಡಿ

**ಬೆಂಗಳೂರು, ಮೇ.3–** ಕೆಪಿಎಸ್‌ಸಿ ಪೂರ್ವಭಾವಿ ಪರೀಕ್ಷೆಯಲ್ಲಿನ ಭಾಷಾಂತರ ಎಡವಟ್ಟಿನಿಂದ ಅನ್ಯಾಯಕ್ಕೊಳಗಾಗಿದ್ದ ಅಭ್ಯರ್ಥಿಗಳು ಹೈಕೋರ್ಟ್ ಮೊರೆ ಹೋಗಿ, ಮೇ 3ರಿಂದ ಆರಂಭವಾಗುವ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳುವ ಅನುಮತಿ ಪಡೆದಿದ್ದರೆ, ಅವರಿಗೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ಸೇಡು ತೀರಿಸಿಕೊಳ್ಳುತ್ತಿದೆ ಈ ಪಾಪಿ ಕಾಂಗ್ರೆಸ್ ಸರ್ಕಾರ ಎಂದು ಬಿಜೆಪಿ ಕಿಡಿಕಾರಿದೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು, ಕೆಪಿಎಸ್ಸಿ ಪೂರ್ವಭಾವಿ ಪರೀಕ್ಷೆಯಲ್ಲಿನ ಭಾಷಾಂತರ ಎಡವಟ್ಟಿನಿಂದ ಅನ್ಯಾಯಕ್ಕೊಳಗಾಗಿದ್ದ ಅಭ್ಯರ್ಥಿಗಳು ಹೈಕೋರ್ಟ್ ಮೊರೆ ಹೋಗಿ, ಮೇ 3ರಿಂದ ಅಂದರೆ ಇಂದಿನಿಂದ ಆರಂಭವಾಗುವ ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳುವ ಅನುಮತಿ ಪಡೆದಿದ್ದರೆ, ಅವರಿಗೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ಸೇಡು ತೀರಿಸಿಕೊಳ್ಳುತ್ತಿದೆ ಈ ಪಾಪಿ ಕಾಂಗ್ರೆಸ್ ಸರ್ಕಾರ.

ಒಂದು ಕಡೆ ಧೋ ಎಂದು ಸುರಿಯುತ್ತಿರುವ ಮಳೆ, ಮತ್ತೊಂದು ಕಡೆ ಅರ್ಜಿ ತುಂಬಲು ಯಾವ ದಾಖಲಾತಿಗಳು ಬೇಕೆ ಎನ್ನುವ ಗೊಂದಲ, ಹತ್ತಿರದಲ್ಲಿ ಒಂದು ಜೆರಾಕ್ಸ್ ಅಂಗಡಿ ಇಲ್ಲ, ಕುಡಿಯೋಕೆ ನೀರಿಲ್ಲ, ಕಾಫಿ ತಿಂಡಿಗೆ ಒಂದು ಹೋಟೆಲ್ ಇಲ್ಲ, ಹೆಣ್ಣುಮಕ್ಕಳಿಗೆ ಶೌಚಾಲಯವಿಲ್ಲ, ಹಸುಗೂಸುಗಳಿಗೆ ಹಾಲುಣಿಸೋಕೆ ಜಾಗ ಇಲ್ಲ, ಮಧ್ಯರಾತ್ರಿ ಆದರೂ ಹಾಲ್ ಟಿಕೆಟ್ ಕೈಗೆ ಸಿಕ್ಕಿಲ್ಲ, ಬೆಳಗಾದರೆ ಪರೀಕ್ಷೆ, ಇಂತಹ ಅವಾಂತರದ ನಡುವೆ ಪಾಪ ಅಭ್ಯರ್ಥಿಗಳು ಪರೀಕ್ಷೆ ಬರೆಯುವುದಾದರೂ ಹೇಗೆ ಎಂದು ಪ್ರಶ್ನಿಸಿದ್ದಾರೆ.



ಸಿದ್ದರಾಮಯ್ಯ ಅವರೇ, ಗ್ರಾಮೀಣ ಭಾಗದ ಕನ್ನಡ ಮಾಧ್ಯಮ ಅಭ್ಯರ್ಥಿಗಳು ಅಂದರೆ ತಮಗೆ ಯಾಕಿಷ್ಟು ದ್ವೇಷ? ಯಾಕಿಷ್ಟು ಅಸಡ್ಡೆ? ಬಡವರು ಮಕ್ಕಳು ಮುಂದೆ ಬರಬಾರದ? ವಿಧಾನಸಭೆ ಅಧಿವೇಶನದಲ್ಲಿ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಹಿತಾಸಕ್ತಿ ಕಾಪಡುವುದಾಗಿ ತಾವು ಕೊಟ್ಟ ಮಾತಿನಂತೆ ನಡೆದುಕೊಳ್ಳಲಿಲ್ಲ. ಬೇರೆ ದಾರಿ ಇಲ್ಲದೆ ಅಭ್ಯರ್ಥಿಗಳು ಕೋರ್ಟ್ ಮೊರೆ ಹೋಗಿ ಆದೇಶ ತಂದರೆ ಹಾಲ್ ಟಿಕೆಟ್ ಕೊಡಲು ಸತಾಯಿಸಿ ನೆಮ್ಮದಿಯಾಗಿ ಪರೀಕ್ಷೆ ಬರೆಯಲೂ ತೊಂದರೆ ಮಾಡಿದ್ದೀರಿ. ನೂರಾರು ಕನಸುಗಳನ್ನು ಇಟ್ಟುಕೊಂಡು ಹಗಲು ರಾತ್ರಿ ಎನ್ನದೆ ವರ್ಷಗಟ್ಟಲೆ ತಯಾರಿ ನಡೆಸಿದ ಅಭ್ಯರ್ಥಿಗಳ ಶಾಪ ನಿಮ್ಮ ಸರ್ಕಾರಕ್ಕೆ ತಟ್ಟದೇ ಇರದು ಎಂದು ಕಿಡಿಕಾರಿದ್ದಾರೆ.

ಪ್ರಹ್ಲಾದ್ ಜೋಶಿಯವಸು ಟ್ವೀಟ್ ಮಾಡಿ, ರಾಜ್ಯದಲ್ಲಿ ತುಘಲಕ್ ಸರ್ಕಾರ ನಡೆಯುತ್ತಿದೆಯೇ? ತಡರಾತ್ರಿ ದೂರದ ಊರಿನಿಂದ ಮಹಿಳೆಯರು ಹೇಗೆ ಬೆಂಗಳೂರಿಗೆ ಬರಲು ಸಾಧ್ಯ? ಕನ್ನಡ ಭಾಷಿಗರ ರಕ್ಷಣೆ, ಅವರ ಕನಸು ನುಚ್ಚುನೂರು ಮಾಡುತ್ತಿರುವ ನಿಮ್ಮ ಸರ್ಕಾರ ಪ್ರತಿಭಟನೆಗಳ ಹೆಸರಲ್ಲಿ ಕಾಲಾಹರಣ ಮಾಡುತ್ತಾ ದುರಾಡಳಿತ ನಡೆಸುತ್ತಿದ್ದೀರಾ. ಇಂದು ಕೆ ಎ ಎಸ್ ಮುಖ್ಯ ಪರೀಕ್ಷೆ ಆರಂಭ, ನಿನ್ನೆ ಮಧ್ಯರಾತ್ರಿಯವರೆಗೂ ಕೆಪಿಎಸ್ ಸಿಯ ಮುಂದೆ ಅಭ್ಯರ್ಥಿಗಳು ನಿಲ್ಲುವ ಸ್ಥಿತಿ.. ಕೆಪಿಎಸ್ ಸಿ ಇಂದು ಭಾರತಕ್ಕೆ ಕಪ್ಪು ಚುಕ್ಕೆಯಾಗಿರುವುದು ಅತ್ಯಂತ ದುರಾದೃಷ್ಟಕರ ಹಾಗೂ ಸರ್ಕಾರದ ಅತಿದೊಡ್ಡ ವೈಫಲ್ಯಗಳಲ್ಲಿ ಒಂದು. ಅಭ್ಯರ್ಥಿಗಳ ಜೀವನದ ಜೊತೆ ಚೆಲ್ಲಾಟವಾಡುತ್ತಿದೆ.. ನಿಮ್ಮ ದುರಾಡಳಿತದ ಸರ್ಕಾರದಿಂದ ಜನ ಬೇಸತ್ತಿದ್ದಾರೆ.. ಕೆಪಿಎಸ್ ಸಿ ಸಾಲು ಸಾಲು ತಪ್ಪುಗಳು ಮಾಡುತ್ತಿದೆ, ಎಷ್ಟು ಬಾರಿ ಕ್ಷಮೆ ಕೋರುತ್ತಿರಾ? ಈ ವೈಫಲ್ಯಕ್ಕೆ ನಿಮ್ಮ ರಾಜಿನಾಮೆ ಒಂದೇ ಉತ್ತರ ಎಂದು ಹೇಳಿದ್ದಾರೆ.

ಸಿದ್ದರಾಮಯ್ಯ ನವರೇ, ಕಳೆದ ಸದನದಲ್ಲಿ ಕೆಪಿಎಸ್ ಸಿ ವಿಚಾರವಾಗಿ "ಸರ್ವಪಕ್ಷ ಸಭೆ ಕರೆಯುತ್ತೇನೆ.. ಎಲ್ಲರಿಂದ ಅಭಿಪ್ರಾಯ ಪಡೆಯುತ್ತೇನೆ.. ಕನ್ನಡಿಗರಿಗೆ ಅನ್ಯಾಯ ಆಗಲು ಬಿಡುವುದಿಲ್ಲಾ.." ಹೀಗೆ ಸುಳ್ಳು ಹೇಳಿ ರಾತ್ರೋರಾತ್ರಿ ದುರಾಡಳಿತದ ಈ ಪರೀಕ್ಷೆ ನಡೆಸಲು ಮುಂದಾಗುತ್ತಿರುವ ನಿಮಗೆ ನಾಚಿಕೆ ಮಾನ ಮರ್ಯಾದೆ ಇಲ್ಲವೇ? ತಡರಾತ್ರಿ ದೂರದ ಊರಿನಿಂದ ಮಹಿಳೆಯರು ಹೇಗೆ ಬೆಂಗಳೂರಿಗೆ ಬರಲು ಸಾಧ್ಯ? ಕೆಪಿಎಸ್ ಸಿ ಕರ್ನಾಟಕದ ಪಾಲಿಗೆ ಶಾಪದ ಸಂಸ್ಥೆಯಾಗಿದೆ. ಕೆಪಿಎಸ್ ಸಿ ದೇಶಕ್ಕೆ ಕಪ್ಪು ಚುಕ್ಕೆಯಾಗಿರುವುದು ಅತ್ಯಂತ ದುರಾದೃಷ್ಟಕರ ಹಾಗೂ ಸರ್ಕಾರದ ಅತಿದೊಡ್ಡ ವೈಫಲ್ಯಗಳಲ್ಲಿ ಒಂದು. ನಿಮ್ಮ ದುರಾಡಳಿತದ ಸರ್ಕಾರ ಅಭ್ಯರ್ಥಿಗಳ ಜೀವನದ ಜೊತೆ ಚೆಲ್ಲಾಟವಾಡುತ್ತಿದೆ.. ನಿಮಗೆ ಸರ್ಕಾರದ ದುರಾಡಳಿತ ರಾಜ್ಯಕ್ಕೆ ಬೇಡವಾಗಿದೆ. ನಿಮ್ಮ ರಾಜಿನಾಮೆ ಮಾತ್ರ ನ್ಯಾಯ ಒದಗಿಸುತ್ತದೆ ಎಂದಿದ್ದಾರೆ.



ಕಾಂಗ್ರೆಸ್ ಸರ್ಕಾರದ ದುರಾಡಳಿತದಲ್ಲಿ ಯಾರಿಗೂ ನೆಮದಿಯಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದ್ದಾರೆ. ಕೆಎಎಸ್ ಪರೀಕ್ಷೆಗೆ ಸಂಬಂಧಿಸಿದಂತೆ ನೊಂದವರ ದನಿಯಾಗಿ ರಾಜ್ಯ ಬಿಜೆಪಿ ನಿಲ್ಲಲಿದೆ ಎಂದಿದ್ದಾರೆ. ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳ ಭವಿಷ್ಯದ ಜೊತೆ ಕೆಪಿಎಸ್‌ಸಿ ಚೆಲ್ಲಾಟವಾಡುತ್ತಿದ್ದರೆ ರಾಜ್ಯ ಸರ್ಕಾರ ಕಣ್ಣುಮುಚ್ಚಿಕೊಂಡು ನೋಡುತ್ತಿದೆ ಎಂದು ಟೀಕಿಸಿದ್ದಾರೆ. ಮೇ 2ರ ಮಧ್ಯರಾತ್ರಿ 12 ಗಂಟೆಯವರೆಗೆ ಕೆಪಿಎಸ್ಸಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಿ ಮಧ್ಯರಾತ್ರಿ ಹಾಲ್ ಟಿಕೆಟ್ ಪಡೆದು, ಮರುದಿನ ಬೆಳಗ್ಗೆಯೇ ಪರೀಕ್ಷಾ ಕೇಂದ್ರಕ್ಕೆ ಹೋಗಿ ಪರೀಕ್ಷೆ ಬರೆಯುವಂತೆ ಮಾಡಿರುವ ಗೊಂದಲದ ವ್ಯವಸ್ಥೆಯಿಂದ ಹಿಂಸೆ ಅನುಭವಿಸುತ್ತಿರುವ ಪರೀಕ್ಷಾರ್ಥಿಗಳು ಹಾಗೂ ಅವರ ಕುಟುಂಬದವರ ಶಾಪ ರಾಜ್ಯ ಸರ್ಕಾರಕ್ಕೆ ತಟ್ಟದೇ ಬಿಡದು ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಿಧಾನಸಭಾ ಅಧಿವೇಶನದಲ್ಲಿ ಕನ್ನಡ ಮಾಧ್ಯಮ ಅಭ್ಯರ್ಥಿಗಳ ಹಿತಾಸಕ್ತಿ ಕಾಪಾಡುವುದಾಗಿ ಸ್ವತಃ ಮುಖ್ಯಮಂತ್ರಿಗಳೇ ಮಾತು ಕೊಟ್ಟು, ಪರೀಕ್ಷಾರ್ಥಿಗಳಿಗೆ ನ್ಯಾಯ ಒದಗಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

# ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 30 ಕ್ವಿಂಟಾಲ್ ರಾಗಿ ಖರೀದಿ: ಡಿ.ಸಿ

**ಬೆಂಗಳೂರು, ಮೇ.3–** 2024–25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿತ ರೈತರಿಂದ ರಾಗಿ ಖರೀದಿಸುವ ಪ್ರಮಾಣವನ್ನು ಹೆಚ್ಚಿಸಲಾಗಿದ್ದು, ಖರೀದಿ ಕೇಂದ್ರಗಳಿಗೆ ಇನ್ನೂ ನೀಡದ ರೈತರಿಂದ ಮಾತ್ರ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 30 ಕ್ವಿಂಟಾಲ್ ರಾಗಿಯನ್ನು ಖರೀದಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಅವರು ತಿಳಿಸಿದ್ದಾರೆ.

ರಾಗಿ ಖರೀದಿ ಪ್ರಕ್ರಿಯೆಗೆ ಮಾ.1 ರಿಂದ ವಿದ್ಯುಕ್ತವಾಗಿ ಚಾಲನೆ ನೀಡ ಲಾಗಿದ್ದು, ಮಾ.3 ರಿಂದ ಜೂನ್ 30 ರವರೆಗೆ ರಾಗಿ ಖರೀದಿಯ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ. 2024–25 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿ ಮಾಡಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ರಾಗಿ ಖರೀದಿ ಕೇಂದ್ರಗಳನ್ನು ತೆರೆದು, ರಾಗಿ ಬೆಳೆದಿರುವ ರೈತರಿಂದ ನಿಯಮಾನುಸಾರ ಅಗತ್ಯ ದಾಖಲೆ ಗಳನ್ನು ಪಡೆದು ನೋಂದಾಯಿಸಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗಾಗಿ, ಬೆಂಗಳೂರು ಗ್ರಾಮಾಂತರ ಖರೀದಿ ಅಧಿಕಾರಿಗಳು ದೇವನಹಳ್ಳಿ ತಾಲ್ಲೂಕಿನ ಎ.ಅಚ್ಯುತ ದೊಡ್ಡಬಳ್ಳಾಪುರ ಎಚ್. ಎನ್. ನಾರಾಯಣ, ವೈ.ಎಸ್.ನಾರಾಯಣ ಶಿವಕುಮಾರ್ ಸಂಪರ್ಕಿಸಬಹುದಾಗಿದೆ.





ಮೈಸೂರಿನ ತಿಲಕ್ ನಗರದ ಈದ್ಗಾ ಮೈದಾನದಲ್ಲಿ ಶನಿವಾರ ವಕ್ಫ್ (ತಿದ್ದುಪಡಿ) ಕಾಯ್ದೆ 2025ರ ವಿರುದ್ಧ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ ಸದಸ್ಯರು ಪ್ರತಿಭಟನೆ ನಡೆಸಿದರು.

# ಧರ್ಮದ ಹೆಸರಿನಲ್ಲಿ ಆತಂಕ ಸೃಷ್ಟಿಸುವವರ ಬಗ್ಗೆ ಎಚ್ಚರದಿಂದ ಇರಬೇಕು: ಖಂಡ್ರೆ

**ಬೀದರ್, ಮೇ. 3–** ವಿಶ್ವಗುರು ಬಸವಣ್ಣನವರು ದಯೆಯೇ ಧರ್ಮದ ಮೂಲವೆಂದು ಹೇಳಿದ್ದರು. ಆದರೆ ಇಂದು ಧರ್ಮದ ಹೆಸರಿನಲ್ಲಿ ಆತಂಕ ಸೃಷ್ಟಿಸುವ ಕಾರ್ಯವನ್ನು ಕೆಲವರು ಮಾಡುತ್ತಿದ್ದಾರೆ. ಇದು ಅತ್ಯಂತ ಆತಂಕದ ವಿಷಯ ಎಂದು ಅರಣ್ಯ ಮತ್ತು ಪರಿಸರ ಖಾತೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ವೀರಶೈವ ಲಿಂಗಾಯತ ಸಮಾಜ ಆಯೋಜಿಸಿದ್ದ ಬಸವ ಜಯಂತಿ ಮತ್ತು ಡಾ. ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿಯವರ ಜಯಂತ್ಯುತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ಧರ್ಮದ ಹೆಸರಲ್ಲಿ ಆತಂಕ ಸೃಷ್ಟಿಸುವವರ ಬಗ್ಗೆ ಸಮಾಜ ಎಚ್ಚರದಿಂದ ಇರಬೇಕು. 12ನೇ ಶತಮಾನದಲ್ಲಿ ಬಸವಣ್ಣನವರು ಸಾಮಾಜಿಕ ಕ್ರಾಂತಿಯನ್ನೇ ಮಾಡಿದರೆ, 20ನೇ ಶತಮಾನದಲ್ಲಿ ಸಮಾನತೆಯ ಸಂದೇಶ ಸಾರಿ ತ್ರಿವಿಧ ದಾಸೋಹ ದಿಂದ ಎಲ್ಲ ಸಮುದಾಯದವರಿಗೆ ಅನ್ನ, ಆಶ್ರಯ ಮತ್ತು ಅಕ್ಷರ ಕೊಟ್ಟವರು ಡಾ.ಶ್ರೀ.ಶ್ರೀ. ಶಿವಕುಮಾರ ಸ್ವಾಮೀಜಿ ಅವರು. ವಿಶ್ವ ಗುರು ಬಸವಣ್ಣನವರು, ಕಾಯಕ, ಸಹಯೋಗ, ಸೋದರತ್ವದ ಬುನಾದಿಯ ಮೇಲೆ ಸುಂದರ ಸಮಾಜದ ನಿರ್ಮಾಣದ ಕನಸು ಕಂಡಿದ್ದರು. ಸರ್ವರಿಗೂ ಸಮಾನ ಅವಕಾಶ ಸಿಗಬೇಕು ಎಂಬ ಕನಸು ಕಂಡಿದ್ದರು ಎಂದರು. ಸಕಲ ಜೀವಾತ್ಮರಿಗೂ ಲೇಸನ್ನೇ ಬಯಸುವುದು ಲಿಂಗಾಯತ ಸಮಾಜ. ಈ ಜಗತ್ತಿನಲ್ಲಿ ಹುಟ್ಟಿದ ಪ್ರತಿಯೊಂದು ಸಸ್ಯ, ಕೀಟ, ಪ್ರಾಣಿ, ಪಕ್ಷಿ ಎಲ್ಲರಿಗೂ ಬದುಕುವ ಹಕ್ಕಿದೆ. ನಾವು ಸಹಬಾಳ್ವೆಯಿಂದ ಜೀವನ ನಡೆಸುವುದನ್ನು ಕಲಿಯಬೇಕು. ನಮ್ಮ ವಚನದಲ್ಲಿ ಅನುಭಾವ ಇದೆ. ಇಂದಿನ ಮಕ್ಕಳಿಗೆ ನಮ್ಮ ತಾಯಂದಿರು ವಚನಗಳನ್ನು ಕಲಿಸಬೇಕು. ಇದು ಅವರಲ್ಲಿ ನೈತಿಕತೆ ಹೆಚ್ಚಿಸುತ್ತದೆ. ಭಾಷೆಯ ಪ್ರೌಢಿಮೆ ಬೆಳೆಸುತ್ತದೆ ಎಂದರು.



ಬೀದರನಲ್ಲಿ ವೀರಶೈವ–ಲಿಂಗಾಯತ ಸಮಾಜ ಆಯೋಜಿಸಿದ ಬಸವ ಜಯಂತಿ, ಶ್ರೀ ಶಿವಕುಮಾರ ಸ್ವಾಮಿಗಳ ಜಯಂತ್ಯುತ್ಸವವನ್ನು ಜಿಲ್ಲಾಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಿದರು.

700 ಕೋಟಿ ಅನುಭವ ಮಂಟಪ : ಜಗತ್ತಿಗೆ ಸಂಸತ್ತಿನ ಪರಿಕಲ್ಪನೆಯನ್ನು ಕಟ್ಟಿಕೊಟ್ಟಿದ್ದೇ ಬಸವಾದಿ ಶರಣರ 770 ಅಮರಗಣಂಗಳ ಅನುಭವ ಮಂಟಪ. ಇಲ್ಲಿ ಮಹಿಳೆಯರಿಗೂ ಸ್ಥಾನ ಮಾನ ಕಲ್ಪಿಸಲಾಗಿತ್ತು. 12ನೇ ಶತಮಾನದಲ್ಲೇ ನಮ್ಮ ಶರಣರು ಸಮಾನತೆಯನ್ನು ಕಾರ್ಯಗತ ಮಾಡಿದ್ದರು. ಈಗ ಬಸವಕಲ್ಯಾಣದಲ್ಲಿ 700 ಕೋಟಿ ರೂ. ವೆಚ್ಚದಲ್ಲಿ ಭವ್ಯ, ದಿವ್ಯ ಅನುಭವ ಮಂಟಪ ನಿರ್ಮಾಣ ಕಾರ್ಯ ಭರದಿಂದ ನಡೆಯುತ್ತಿದೆ ಎಂದರು.

ಭಾಲ್ಕಿ ಹಿರೇಮಠದ ಪರಮಪೂಜ್ಯ ಚನ್ನಬಸವ ಪಟ್ಟದ್ದೇವರು ಆಧುನಿಕ ಅನುಭವ ಮಂಟಪದ ನಿರ್ಮಾಣಕ್ಕೆ ನಾಂದಿ ಹಾಡಿದ್ದರು. ಈ ಹಿಂದೆ 2013ರಿಂದ 2018ರ ಅವಧಿಯಲ್ಲಿ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯನವರು ಆಧುನಿಕ ಅನುಭವ ಮಂಟಪ ನಿರ್ಮಾಣಕ್ಕೆ ಸಮ್ಮತಿಸಿ ಹಣ ಬಿಡುಗಡೆ ಮಾಡಿದ್ದರು. ಇತ್ತೀಚೆಗೆ ಬೀದರ್‌ಗೆ ಬಂದಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇನ್ನೂ 400 ಕೋಟಿ ರೂ ಅನುದಾನ ನೀಡಿ ಮುಂದಿನ ವರ್ಷದೊಳಗೆ ಈ ಅನುಭವ ಮಂಟಪ ಪೂರ್ಣಗೊಳಿಸುವ ಭರವಸೆ ನೀಡಿದ್ದಾರೆ ಎಂದರು.

## ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದಲ್ಲಿ

# ತನಿಖೆ ಪೂರ್ಣಗೊಳ್ಳುವ ಮುನ್ನವೇ ಯು.ಟಿ.ಖಾದರ್ ಸ್ವತಃ ಹೇಳಿಕೆ ನೀಡಿರುವುದೇಕೆ: ಡಾ.ವೈ.ಭರತ್ ಶೆಟ್ಟಿ ಪ್ರಶ್ನೆ

**ಮಂಗಳೂರು, ಮೇ.3–** ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದಲ್ಲಿ ಪೊಲೀಸರ ತನಿಖೆ ಪೂರ್ಣಗೊಳ್ಳುವ ಮುನ್ನವೇ ವಿಧಾನಸಭಾಧ್ಯಕ್ಷ ಯು.ಟಿ ಖಾದರ್ ಅವರು 2022ರಲ್ಲಿ ಸುರತ್ಕಲ್‌ನಲ್ಲಿ ಹತ್ಯೆಗೀಡಾದ ಮಹಮ್ಮದ್ ಫಾಝಿಲ್ ಕುಟುಂಬದವರು ಈ ಕೃತ್ಯದಲ್ಲಿ ಭಾಗಿಯಾಗಿಲ್ಲ ಎಂದು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿಕೆ ನೀಡಿದ್ದು ಏಕೆ ಎಂದು ಶಾಸಕ ಡಾ.ವೈ.ಭರತ್ ಶೆಟ್ಟಿ ಪ್ರಶ್ನಿಸಿದ್ದಾರೆ.

'ಸುಹಾಸ್ ಶೆಟ್ಟಿ ಹತ್ಯೆಗೂ ನಮಗೂ ಸಂಬಂಧವಿಲ್ಲ ಎಂದು ಫಾಝಿಲ್ ಅವರ ತಂದೆ ಮತ್ತು ಸೋದರ ನನಗೆ ಕರೆ ಮಾಡಿ ಹೇಳಿದ್ದಾರೆ. ತನಿಖೆಗೆ ಸಹಕರಿಸುವುದಾಗಿಯೂ ತಿಳಿಸಿದ್ದಾರೆ' ಎಂದು ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿಕೆ ನೀಡಿದ್ದರು. ಇದನ್ನು ಪ್ರಶ್ನಿಸಿರುವ ಶಾಸಕ ಭರತ್ ಶೆಟ್ಟಿ, 'ಹತ್ಯೆಗೊಳಗಾಗಿರುವ ಮಹಮ್ಮದ್ ಫಾಝಿಲ್ ಸೋದರ ಆದಿಲ್ ಮೆಹರೂಫ್ ಸುಹಾಸ್ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿದ್ದಾನೆ



ಎಂದು ಗೃಹಸಚಿವ ಜಿ.ಪರಮೇಶ್ವರ ಹಾಗೂ ಪೊಲೀಸ್ ಕಮಿಷನರ್ ಅನುಪಮ ಅಗ್ರವಾಲ್ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ಫಾಝಿಲ್ ಕುಟುಂಬದ ಪಾತ್ರವಿಲ್ಲ ಎನ್ನುವ ಮೂಲಕ ವಿಧಾನಸಭಾಧ್ಯಕ್ಷರು ತನಿಖೆಯ ಹಾದಿ ತಪ್ಪಿಸುವ ಕೆಲಸ ಮಾಡಿದ್ದಾರೆ'. 'ಫಾಝಿಲ್ ಸಹೋದರನ ಜತೆ ಮಾತಾಡಿದ್ದೇನೆ ಎಂದು ಖಾದರ್ ಮಾಧ್ಯಮಗಳಿಗೆ ಸ್ವತಃ ಹೇಳಿಕೆ ನೀಡಿದ್ದಾರೆ. ಪೊಲೀಸರ ವಶದಲ್ಲಿರುವ ಆತನ ಜೊತೆ ಖಾದರ್ ಮಾತನಾಡಿದ್ದು ಹೇಗೆ. ಪೊಲೀಸರು ಆರೋಪಿ ಜತೆ ಮಾತನಾಡಲು ಅವಕಾಶ ಕಲ್ಪಿಸಿದ್ದು ಹೇಗೆ. ಆರೋಪಿಗಳನ್ನು ರಕ್ಷಿಸಲು ಅವರು ಮಧ್ಯ ಪ್ರವೇಶ ಮಾಡಿ, ತನಿಖೆಯ ದಿಕ್ಕು ತಪ್ಪಿಸುವ ಕುತಂತ್ರ ಮಾಡುತ್ತಿದ್ದಾರೆಯೆ ಎಂಬ ಸಂಶಯ ವ್ಯಕ್ತವಾಗುತ್ತಿದೆ. ಈ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಲು ಸ್ಪೀಕರ್ ಅವರು ರಾಜೀನಾಮೆ ನೀಡುವುದು ಅಗತ್ಯ. ಹಾಗಾಗಿ ಅವರು ಹುದ್ದೆಗೆ ರಾಜೀನಾಮೆ ನೀಡಿ ವಿಧಾನಸಭೆಯ ಸಭಾಧ್ಯಕ್ಷ ಪೀಠದ ಗೌರವ ಉಳಿಸಬೇಕು' ಎಂದು ಒತ್ತಾಯಿಸಿದರು.

'ಸುಹಾಸ್ ಹತ್ಯೆ ನಡೆಯುವಾಗ ಅದನ್ನು ಮೊಬೈಲ್‌ನಲ್ಲಿ ಸೆರೆಹಿಡಿದ ಮಹಿಳೆಯರು ಯಾರು. ಆ ವಿಡಿಯೊದಲ್ಲಿ ಇಬ್ಬರು ಮಹಿಳೆಯರು ಮಾತನಾಡುವುದು ಕೇಳಿಸುತ್ತಿದೆ. ಘಟನಾ ಸ್ಥಳದಲ್ಲಿ ಮತ್ತೆ ಇಬ್ಬರು ಮಹಿಳೆಯರಿದ್ದರು. ಈ ನಾಲ್ವರು ಮಹಿಳೆಯರನ್ನು ತನಿಖೆಗೆ ಒಳಪಡಿಸಬೇಕು. ಪೊಲೀಸರು ಸಾಕ್ಷ್ಯ ನಾಶವಾಗದಂತೆ ಎಚ್ಚರಿಕೆ ವಹಿಸಿ ತುರ್ತು ತನಿಖೆ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು.


# ಅಕ್ರಮ ಮಂಜೂರಾತಿ ರದ್ದುಪಡಿಸಿ, ಭೂಕಬಳಿಕೆದಾರರ ವಿರುದ್ಧ ಕಠಿಣ ಕ್ರಮಕ್ಕೆ ಖಂಡ್ರೆ ಸ್ಪಷ್ಟ ಸೂಚನೆ

**ತುಮಕೂರು, ಮೇ.3–** ಶೀಬಿ ಅರಣ್ಯ ಪ್ರದೇಶದಲ್ಲಿ ಆಗಿರುವ ಅಕ್ರಮ ಮಂಜೂರಾತಿ ರದ್ದುಪಡಿಸಲು ಮತ್ತು ನಕಲಿ ದಾಖಲೆ ಸೃಷ್ಟಿಸಿ ಅರಣ್ಯ ಭೂಮಿ ಕಬಳಿಸಲು ಪ್ರಯತ್ನಿಸುತ್ತಿರುವವರ ವಿರುದ್ಧ ಕಾನೂನು ರೀತ್ಯ ಕಠಿಣ ಕ್ರಮ ಕೈಗೊಂಡು, ಅಮೂಲ್ಯವಾದ ಅರಣ್ಯ ಭೂಮಿಯನ್ನು ಸಂರಕ್ಷಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ತುಮಕೂರು ಜಿಲ್ಲೆ ಕಳ್ಳಂಬೆಳ್ಳ ಹೋಬಳಿ ಶೀಬಿ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿ ಖುದ್ದು ಪರಿಶೀಲನೆ ನಡೆಸಿದ ಸಚಿವರು. ಬೆಂಗಳೂರು–ಪುಣೆ ಹೆದ್ದಾರಿಯ ಪಕ್ಕದಲ್ಲೇ ಇರುವ ಈ ಅರಣ್ಯಭೂಮಿಗೆ ಭಾರೀ ಮೌಲ್ಯವಿದ್ದು, ಕೆಲವರು ಇದನ್ನು ಕಬಳಿಸಲು ಮತ್ತು ಒತ್ತುವರಿ ಮಾಡಲು ಯತ್ನಿಸುತ್ತಿದ್ದಾರೆ. ಹೀಗಾಗಿ ಅರಣ್ಯ ಸಿಬ್ಬಂದಿ ಕಟ್ಟೆಚ್ಚರದಿಂದ ಇರಬೇಕು ಎಂದರು.ಕೆಲವರು ನ್ಯಾಯಾಲಯದಲ್ಲಿ ಭೂಮಿಯ ಮಾಲೀಕತ್ವದ ಹೋರಾಟ ನಡೆಸುತ್ತಿದ್ದಾರೆ. ಸುಪ್ರೀಂಕೋರ್ಟ್ ಡಿನೋಟಿಫಿಕೇಷನ್ ಆಗದ ಹೊರತು, ಅರಣ್ಯ ಭೂಮಿ ಅರಣ್ಯವಾಗಿಯೇ ಉಳಿಯುತ್ತದೆ ಎಂದು ಹೇಳಿದ್ದು, ಡಿನೋಟಿಫಿಕೇಷನ್ ಆಗದ ಈ ಅರಣ್ಯದಲ್ಲಿನ ಅಕ್ರಮ ಮಂಜೂರಾತಿ ರದ್ದುಪಡಿಸುವಂತೆ ಎ.ಸಿ. ನ್ಯಾಯಾಲಯದಲ್ಲಿ ದಾವೆ ಹೂಡುವಂತೆ ಸೂಚಿಸಿದರು. ಭೂಮಾಫಿಯಾದವರು ಬಡವರನ್ನು ಮುಂದಿಟ್ಟುಕೊಂಡು ಬೆಲೆಬಾಳುವ ಭೂಮಿ ಕಬಳಿಸಲು ಯತ್ನಿಸುತ್ತಾರೆ. ಅರಣ್ಯ ಭೂಮಿಯನ್ನು ಕಬಳಿಸಲು ಯತ್ನಿಸುವವರ ವಿರುದ್ಧ ಹಾಗೂ ಅದಕ್ಕೆ ಸಹಕಾರ ನೀಡುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಿ ಎಂದು ಸೂಚಿಸಿದರು.

ಪ್ರಕೃತಿ, ಪರಿಸರ, ಅರಣ್ಯ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂದು ನಮ್ಮ ಸಂವಿಧಾನ ಸಾರುತ್ತದೆ, ಸರ್ವೋನ್ನತ ನ್ಯಾಯಾಲಯ ಕೂಡ ಹಲವು ಪ್ರಕರಣಗಳಲ್ಲಿ ಇದನ್ನೇ ಪುನರುಚ್ಚರಿಸಿದೆ. ಹೀಗಾಗಿ ಅರಣ್ಯ ಸಂರಕ್ಷಣೆಯ ಹೊಣೆ ಹೊತ್ತು ಅಧಿಕಾರಿಗಳು ಅರಣ್ಯ ಉಳಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಈಶ್ವರ ಖಂಡ್ರೆ ತಿಳಿಸಿದರು.ಟಿ.ಬಿ. ಜಯಚಂದ್ರ ಅವರು ಕೂಡ ಈ ಅರಣ್ಯ ಸಂರಕ್ಷಿಸಲು ಬೇಲಿ ಹಾಕುವ ಪ್ರಸ್ತಾವನೆ ನೀಡಿದ್ದು, ಅರಣ್ಯ ಸಚಿವರಾಗಿ ಈ ಅರಣ್ಯವು ಭೂ ಮಾಫಿಯಾ ಪಾಲಾಗದಂತೆ ಉಳಿಸಲು ಎಲ್ಲ ಸಾಧ್ಯ ಪ್ರಾಮಾಣಿಕ ಪ್ರಯತ್ನ ಮಾಡುವ ಭರವಸೆಯನ್ನು ಅರಣ್ಯ ಸಚಿವರು ನೀಡಿದರು.

# ಎಸ್.ಜಿ.ಟಿ 10ನೇ ತರಗತಿ ವಿದ್ಯಾರ್ಥಿಗಳ ಉತ್ತಮ ಫಲಿತಾಂಶ



**ಬಳ್ಳಾರಿ ಮೇ.3–** ಬಳ್ಳಾರಿಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ಶ್ರೀ ಗುರು ತಿಪ್ಪೇರುದ್ರ ಇಂಗ್ಲೀಷ್ ಮಾಧ್ಯಮ ಶಾಲೆ ವಿದ್ಯಾರ್ಥಿಗಳು 2024–25ಸಾಲಿನ 10ನೇ ತರಗತಿಯ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶವನ್ನು ಪಡೆದಿರುತ್ತಾರೆ. ಇದರಲ್ಲಿ ಒಟ್ಟು 16 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 43 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಮತ್ತು 18 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯನ್ನು ಪಡೆದಿರುತ್ತಾರೆ. ಸಂಜನಾ ಮೊದಲನೆ ಸ್ಥಾನ, ನವತೇಜಶ್ವಿನಿ ದ್ವಿತೀಯ ಸ್ಥಾನ, ಸ್ನೇಹ ತೃತೀಯ ಸ್ಥಾನ, ಅಂಕಿತ ನಾಲ್ಕನೇ ಸ್ಥಾನ, ಕೆ ತನುಷ್ರಿ ಐದನೇ ಸ್ಥಾನ ಪಡೆದಿದ್ದಾರೆ. ಈ ಎಲ್ಲಾ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷರಾದ ಎಸ್. ಎನ್. ರುದ್ರಪ್ಪನವರು, ಕಾರ್ಯದರ್ಶಿಗಳಾದ ಜಿ. ನಾಗರಾಜ್, ಎಸ್.ಜಿ.ಟಿ ಶಾಲೆಯ ನಿರ್ದೇಶಕರಾದ ಜಿ. ಮಂಜುಳ, ಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ಡಿ ಇಲಿಯಾಸ್ ರವರು, ಸೌಮ್ಯ ಕೆ.ಪಿ, ಉಮಾದೇವಿ, ವೇಣು ಪ್ರಶಾಂತ್, ಖತೀಜ ಬೇಗಂ, ದಿವ್ಯ, ಮಾಧುರಿ, ಕೀರ್ತಿ, ಪರಿಮಳ, ಜಯಲಕ್ಷ್ಮಿ ?ಮ, ಹಾಗು ಎಲ್ಲಾ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗದವರು ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದಿಸಿದರು.

# ವಿಸ್ಡಮ್ ಲ್ಯಾಂಡ್ ಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ

**ಬಳ್ಳಾರಿ, ಮೇ.3–** ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲೂಕು ಸಂಗನಕಲ್ಲು ಗ್ರಾಮದಲ್ಲಿರುವ ಪ್ರತಿಷ್ಠಿತ ವಿದ್ಯಾಸಂಸ್ಥೆಯಾದ ವಿಸ್ಡಮ್ ಲ್ಯಾಂಡ್ ಶಾಲೆ ಪ್ರಸ್ತುತ ಎಸ್ ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದೆ.

ಹರ್ಷ ಡಿ.ಆರ್ ಎನ್ನುವ ವಿದ್ಯಾರ್ಥಿ 625 ಅಂಕಗಳಿಗೆ 620 ಅಂಕಗಳನ್ನು ಪಡೆಯುವ ಮೂಲಕ ಬಳ್ಳಾರಿ ಜಿಲ್ಲೆಯಲ್ಲಿ ಮೂರನೇ ಸ್ಥಾನವನ್ನು ಪಡೆದಿದ್ದಾನೆ. ತಾಲೂಕು ಮಟ್ಟದಲ್ಲಿ ಇಬ್ಬರು ವಿದ್ಯಾರ್ಥಿಗಳಾದ ಹರ್ಷ ಡಿ. ಆರ್.ಎನ್ನುವ ವಿದ್ಯಾರ್ಥಿ 625 ಕ್ಕೆ 620 ಅಂಕಗಳನ್ನು ಮತ್ತು ಸಂತೋಷ್ ಕುಮಾರ್ ಕೆ.ಎಂ ಎನ್ನುವ ವಿದ್ಯಾರ್ಥಿಯು 625 ಕ್ಕೆ 619 ಅಂಕಗಳನ್ನು ಪಡೆಯುವ ಮೂಲಕ ತಾಲೂಕು ಮಟ್ಟದಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನವನ್ನು ಪಡೆದಿದ್ದಾರೆ.

ಪರೀಕ್ಷೆ ಬರೆದ 91 ವಿದ್ಯಾರ್ಥಿಗಳಲ್ಲಿ 91 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಶೇಕಡ 100 ರಷ್ಟು ಫಲಿತಾಂಶವನ್ನು ಪಡೆದುಕೊಂಡಿದೆ ಎಂದು



ಶಾಲೆಯ ಪ್ರಾಂಶುಪಾಲರಾದ ಕಟ್ಟೆಗೌಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

91 ವಿದ್ಯಾರ್ಥಿಗಳಲ್ಲಿ ಶೇಕಡ 90ಕ್ಕಿಂತ ಹೆಚ್ಚು ಅಂಕಗಳನ್ನು 23 ಮಕ್ಕಳು ಹಾಗೂ ಶೇಕಡ 85ಕ್ಕಿಂತ ಹೆಚ್ಚು ಅಂಕಗಳನ್ನು 29 ವಿದ್ಯಾರ್ಥಿಗಳು ಪಡೆದಿದ್ದಾರೆ. ಉಳಿದ ವಿದ್ಯಾರ್ಥಿಗಳು ಪ್ರಥಮ ಸ್ಥಾನದಲ್ಲಿ ಉತ್ತೀರ್ಣರಾಗಿದ್ದು ಶಾಲೆಯ ಕೀರ್ತಿಯನ್ನು ಎತ್ತಿ ಹಿಡಿದಿದ್ದಾರೆ. ಉತ್ತೀರ್ಣರಾದ ಎಲ್ಲಾ ಮಕ್ಕಳಿಗೆ ಆಡಳಿತ ಮಂಡಳಿಯವರು, ಮುಖ್ಯ ಗುರುಗಳು ಮತ್ತು ಶಿಕ್ಷಕರು ಅಭಿನಂದನೆಯನ್ನು ಸಲ್ಲಿಸಿದ್ದಾರೆ.

# ಪಾಕಿಸ್ತಾನಕ್ಕೆ ಪಾಠಕಲಿಸಲು ಇಂದಿರಾಗಾಂದಿ ರೀತಿಯ ಕ್ರಮಗಳನ್ನು ಕೈಗೊಳ್ಳಿ: ಈಶ್ವರ್ ಖಂಡ್ರೆ ಮನವಿ

**ದಾವಣಗೆರೆ, ಮೇ 3:** ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರ ರೀತಿಯಲ್ಲಿ ಪಾಕಿಸ್ತಾನವನ್ನು ಎದುರಿಸಬೇಕಿದೆ. ಲೋಕಸಭೆಯ ಪ್ರತಿಪಕ್ಷವಾಗಿ ಕಾಂಗ್ರೆಸ್ ಕೇಂದ್ರ ಸರ್ಕಾರದ ಬೆನ್ನಿಗೆ ನಿಂತಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿಯಾಗಿದ್ದ ಇಂದಿರಾಗಾಂಧಿ ಅವರು ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಿದ್ದರು. ಇದೇ ರೀತಿ ಕ್ರಮ ಕೈಗೊಳ್ಳಲು ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಸಲಹೆ ನೀಡಿದ್ದಾರೆ. ಏಕೆ ಕ್ರಮಕ್ಕೆ ಮುಂದಾಗುತ್ತಿಲ್ಲ ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದರು. ಕಾಶ್ಮೀರದ ಪಹಲ್ಗಾಮ್ನಲ್ಲಿ ಭದ್ರತಾ ವೈಫಲ್ಯ ಆಗಿದ್ದು ಇಡೀ ದೇಶಕ್ಕೆ ಗೊತ್ತಿದೆ. ಕಂದಹಾರ ವಿಮಾನ ಅಪಹರಣ, ಸಂಸತ್ತು, ಅಕ್ಷರಧಾಮದ ಮೇಲಿನ ದಾಳಿ ಬಿಜೆಪಿ ಆಡಳಿತಾವಧಿಯಲ್ಲಿ ನಡೆದಿದೆ. ಭದ್ರತೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ವಿರುದ್ಧ ಆರೋಪ ಮಾಡುವ ನೈತಿಕತೆಯನ್ನು ಬಿಜೆಪಿ ಉಳಿಸಿಕೊಂಡಿಲ್ಲ. ಕರಾವಳಿಯಲ್ಲಿ ನಡೆದ ಅಪರಾಧ ಕೃತ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಅಪರಾಧಿಗಳನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳುತ್ತೇವೆ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯೆ ನೀಡಿದರು.'ಸಮಾಜ ಘಾತುಕ ಶಕ್ತಿಗಳಿಗೆ ಜಾತಿ, ಧರ್ಮ ಇಲ್ಲ. ಕೊಲೆಗಡುಕರು, ದುಷ್ಕರ್ಮಿಗಳನ್ನು ಬಗ್ಗು ಬಡಿಯುವುದು ರಾಜ್ಯ ಸರ್ಕಾರಕ್ಕೆ ಗೊತ್ತಿದೆ. ಭದ್ರತೆ ಹೆಚ್ಚು ಮಾಡಲು ಹಾಗೂ ಬೇಹುಗಾರಿಕೆ ಇನ್ನಷ್ಟು ಬಿಗಿಗೊಳಿಸಲು ಬಿಜೆಪಿ ಸಲಹೆ ನೀಡುವುದನ್ನು ಬಿಟ್ಟು ರಾಜ್ಯ ಸರ್ಕಾರದ ವಿರುದ್ಧ ಆರೋಪ ಮಾಡುವುದು ಸರಿಯಲ್ಲ' ಎಂದು ಕಿಡಿಕಾರಿದರು.'ಜನಗಣತಿ ಜೊತೆಗೆ ಜಾತಿ ಗಣತಿ ಮಾಡಲು ಮುಂದಾಗಿರುವ ಕೇಂದ್ರ ಸರ್ಕಾರದ ನಿರ್ಧಾರ ಸ್ವಾಗತಾರ್ಹ. ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಗಣತಿ ಮಾಡಿದರೆ ಒಳ್ಳೆಯದು. ರಾಜ್ಯದಲ್ಲಿ ನಡೆದ ಜಾತಿ ಗಣತಿಯಲ್ಲಿ ಸಣ್ಣ ಸಮುದಾಯಗಳು ಕಣ್ತಪ್ಪಿ ಹೋಗಿವೆ ಎಂಬ ಅಭಿಪ್ರಾಯ ಕೇಳಿ ಬಂದಿದೆ. ಮೇ 9 ರಂದು ಮತ್ತೊಮ್ಮೆ ಸಂಪುಟದ ಸಭೆ ನಡೆಯಲಿದೆ. ಸಚಿವನಾಗಿ ನನ್ನ ನಿಲುವು, ಅಭಿಪ್ರಾಯವನ್ನು ಸಂಪುಟದ ಮುಂದೆ ಇಡುವೆ' ಎಂದು ಹೇಳಿದರು.

## ಬಳ್ಳಾರಿಯ ಸರ್ಕಾರಿ ಆದರ್ಶ ವಿದ್ಯಾಲಯದ

# ಎಸ್.ಎಸ್.ಎಲ್.ಸಿ ಫಲಿತಾಂಶ ಶೇಕಡ 97.29

## –ವಿದ್ಯಾರ್ಥಿಗಳನ್ನು ಅಭಿನಂದಿಸಿದ ಎಚ್.ಎಂ. ಸತ್ಯನಾರಾಯಣ

**ಬಳ್ಳಾರಿ ಮೇ.3–** ಬಳ್ಳಾರಿ ಜಿಲ್ಲೆಯ ಎಲ್ಲಾ ಸರ್ಕಾರಿ ಪ್ರೌಢಶಾಲೆಗಳಿಗಿಂತ ಅತಿ ಹೆಚ್ಚು ಫಲಿತಾಂಶ ಪಡೆದು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದೆ ಹಾಗೂ ಸರ್ಕಾರಿ ಪ್ರೌಢಶಾಲೆಗಳಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿನಿ ದೇವಿಕಾ ಜಿ ನಮ್ಮ ಸರ್ಕಾರಿ ಆದರ್ಶ ಶಾಲೆಯ ವಿದ್ಯಾರ್ಥಿನಿ ಎಂಬ ಕೀರ್ತಿ ಪಡೆದಿದೆ

ಕಳೆದ 2024 –25 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಬಳ್ಳಾರಿ ಪಶ್ಚಿಮ ತಾಲೂಕಿನ ಸರ್ಕಾರಿ ಆದರ್ಶ ವಿದ್ಯಾಲಯಕ್ಕೆ ಶೇಕಡ 97.29 ಫಲಿತಾಂಶ ಬಂದಿದೆ.

ಕಳೆದ 2024– 25 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಸರ್ಕಾರಿ ಆದರ್ಶ ವಿದ್ಯಾಲಯ ಬಳ್ಳಾರಿ ಪ್ರೌಢಶಾಲೆಯ 74 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ಪರೀಕ್ಷೆ ಬರೆದಿದ್ದರು. ಅದರ ಪೈಕಿ



16 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದು ಅವರ ಪೈಕಿ ದೇವಿಕಾ ಜಿ (620) ಅಂಕಗಳನ್ನು ಪಡೆದು ಜಿಲ್ಲೆಗೆ ತೃತಿಯ ಸ್ಥಾನ ಪಡೆದಿದ್ದಾರೆ. ಪ್ರಾರ್ಥನಾ ಯು ಎಂ (615) ರಂಜಿತಾ (611) ಆಯೇಷಾ ಹುಮೇರ (605) ಕವಿತಾ ಹೆಚ್ (605 )ಪವಿತ್ರ ಜಿ( 603) ಭರತ್ ಕುಮಾರ್ ಎಂ( 601) ಅನುಷಾ ಜಿ (599) ಜಿ.ಎಂ. ಲಕ್ಷ್ಮಿ(599) ಗಾಯತ್ರಿ (599) ವಿಸ್ಮಯ್ ಅಸ್ಪಲ್ಲಿ (598) ಪೂಜ (597) ರಶ್ಮಿಕ (596 ) ಸ್ಫೂರ್ತಿ ಮಜ್ಜುಗೋಲು (596) ಬಿ ಸಿರಿಷ (594) ಜಿ ಸಂಧ್ಯಾ (590) ಅಂಕಗಳನ್ನು ಪಡೆದಿದ್ದಾರೆ.

ಒಟ್ಟಾರೆ 38 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 29 ವಿದ್ಯಾರ್ಥಿಗಳ ಪ್ರಥಮ ದರ್ಜೆ ಹಾಗೂ 04 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಶ್ರೇಣಿಯಲ್ಲಿ ಉತ್ತೀರ್ಣರಾಗಿರುವ ಮೂಲಕ ಸದರಿ ಸರ್ಕಾರಿ ಆದರ್ಶ ವಿದ್ಯಾಲಯವು ಅತಿ ಹೆಚ್ಚು ಫಲಿತಾಂಶ ಪಡೆದು ಪ್ರಥಮ ಸ್ಥಾನ ಪಡೆದಿದೆ.

# ಆದಿ ಶಂಕರರು ಮನುಕುಲೋದ್ಧಾರಕರು ದಯಾಘನ ಧಾರವಾಡಕರ್



ಕಲಬುರಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾ ಭವನದ ಜಿಲ್ಲಾ ಜಿಲ್ಲಾಡಳಿತ, ಕನ್ನಡ ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಶ್ರೀ ಆದಿ ಶಂಕರಾಚಾರ್ಯರ ಜಯಂತಿಯನ್ನು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ದಯಾಘನ ಧಾರವಾಡಕರ್ ಅವರು ಬಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

**ಕಲಬುರಗಿ, ಮೇ.3–** ಸಮಾಜದಲ್ಲಿ ಅನ್ಯಾಯ, ಅನಾಚಾರಗಳು ನಡೆಯುತ್ತಿರುವಾಗ ಜನ್ಮವೆತ್ತಿದ ಆದಿ ಶಂಕರರು ಮನುಕುಲೋದ್ಧಾರಕರಾಗಿ ಕಾರ್ಯ ನಿರ್ವಹಿಸಿದರು. ಸಮಾಜ ಸೇವೆಗಾಗಿ ತಮ್ಮ ಜೀವನವನ್ನು ಮುಡುಪಿಟ್ಟ ಮಹಾನ ಸನಾತನ ಶಕ್ತಿ. ಅವರ ತತ್ವ ಮತ್ತು ಆದರ್ಶಗಳು ಇಂದಿಗೂ ಜೀವಂತ ವಾಗಿದ್ದು, ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸನಾತನವನ್ನು ಎತ್ತಿ ಹಿಡಿಯಬೇಕೆಂದು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ದಯಾ ಘನ ಧಾರವಾಡಕರ್ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾ ಭವನದ ಜಿಲ್ಲಾ ಜಿಲ್ಲಾಡಳಿತ, ಕನ್ನಡ ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಶ್ರೀ ಆದಿ ಶಂಕರಾಚಾರ್ಯರ ಜಯಂತಿಯನ್ನು ಬಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟ ಎನ್ನುವರು ಇದಕ್ಕೆ ಮುಖ್ಯ ಕಾರಣವೆನೆಂದರೆ ಇಲ್ಲಿ ಹಲವಾರು ಸಂತರು, ಶರಣರು, ಋಷಿ ಮುನಿಗಳು, ಇಲ್ಲಿ ನೆಲೆಸಿದ್ದು ನಮ್ಮೆಲ್ಲರ ಪುಣ್ಯ ವಿಶೇಷ ಉಪನ್ಯಾಸ ನಿವೃತ್ತ ಉಪನ್ಯಾಸಕರಾದ ಶ್ಯಾಮಸುಂದರ ಅವರು ಹೇಳಿದರು.

ಶಂಕರಾಚಾರ್ಯರು ಒಬ್ಬ ಜಾತ್ಯಾತೀತ ಜಗದ್ಗುರುಗಳು. ಸಮಾಜದಲ್ಲಿ ಸಮಾನತೆಗಾಗಿ ಹಗಲಿರುಳೆನ್ನದೆ ಶ್ರಮಿಸಿದವರು. ಪ್ರಥಮವಾಗಿ ಕುಂಭಮೇಳ ಆಯೋಜನೆಗೆ ಕಾರಣೀಕರ್ತೃರಾದವರು ಶಂಕರಾಚಾರ್ಯರು.ಸರ್ವರನ್ನು ಸಮಾನತೆಯ ದೃಷ್ಟಿಯಿಂದ ನೋಡಿದವರು. ಶಂಕರಾಚಾರ್ಯರು, ಮಧ್ವಾಚಾರ್ಯರು, ಕನಕದಾಸರು, ಪುರಂದರದಾಸರು ತಮ್ಮ ಸಾಮಾಜಿಕ ಸೇವೆಯ ಮುಖಾಂತರ ಸಮಾಜದ ಅಂಕುಡೊಂಕುಗಳನ್ನು ತಿದ್ದಿ ಸನ್ಮಾರ್ಗ ತೋರಿಸಿದ ಮಹಾನ್ ವ್ಯಕ್ತಿಗಳು. ಪ್ರತಿಯೊಬ್ಬರು ಜೀವನದಲ್ಲಿ ಮೋಕ್ಷವನ್ನು ಪಡೆಯುವುದಕ್ಕೆ ಜ್ಞಾನಮಾರ್ಗ ಮತ್ತು ಭಕ್ತಿ ಮಾರ್ಗ ದಿಂದ ಮಾತ್ರ ಸಾಧ್ಯವೆಂದು ಹೇಳಿದ್ದರು.

ಭಾರತ ದೇಶದಲ್ಲಿ ಸನಾತನ ಹಿಂದು ಧರ್ಮವು ವೇದಗಳಿಗೆ ಹೆಚ್ಚಿನ ಮಹತ್ವವನ್ನು ನೀಡಿದೆ ಸಾವಿರಾರು ಋಷಿ ಮುನಿಗಳು ಶರಣರು ತಪಸ್ವಿಗಳು ಸಾಮಾಜಿಕ ಸೇವೆಗಾಗಿ ತಮ್ಮ ಜೀವನವನ್ನೆ ಮುಡುಪಿಟ್ಟಿದ್ದಾರೆ ಎಂದು ತಿಳಿಸಿದರು.

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕಾರ್ಯನಿರ್ವಹಿಸಲು ಸಿಇಓ ಸೂಚನೆ

**ವಿಜಯಪುರ, ಮೇ.3–** ಬೇಸಿಗೆ ಸಂದರ್ಭದಲ್ಲಿ ಜಿಲ್ಲೆಯ ಯಾವುದೇ ಗ್ರಾಮ ಹಾಗೂ ವಸತಿಗಳಿಗೆ ಕುಡಿಯುವ ನೀರಿನ ತೊಂದರೆಯಾಗ ದಂತೆ ಮುಂಜಾಗ್ರತಾ ಕ್ರಮವಹಿಸುವ ಮೂಲಕ ಯೋಜನಾಬದ್ಧವಾಗಿ ಕಾರ್ಯ ನಿರ್ವಹಿಸುವಂತೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ರಿಷಿ ಆನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಲಧಾರೆ ಮತ್ತು ಜಲ ಜೀವನ ಮಿಷನ್ ಯೋಜನೆಗಳ ಕುರಿತು ಜಿಲ್ಲೆಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರು ಸೇರಿದಂತೆ ಎಲ್ಲ ಉಪ–ವಿಭಾಗಗಳ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಶಾಖಾಧಿಕಾರಿಗಳು ಹಾಗೂ ಜಲಧಾರೆ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆದಾರರು ಮತ್ತು ಯೋಜನಾ ನಿರ್ವಹಣೆ ಸಮಾಲೋಚಕರೊಂದಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದರು. ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯ ಸಮಸ್ಯೆಯಾಗ ದಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳೊಂದಿಗೆ ನಿಯತವಾಗಿ ಹಾಗೂ ನಿರಂತರವಾಗಿ ಸಭೆಗಳನ್ನು ನಡೆಸುವ ಮೂಲಕ ನಿಗಾವಹಿಸಿ, ದೂರಿಗೆ ಆಸ್ಪದ ನೀಡದಂತೆ ಕಾರ್ಯ ನಿರ್ವಹಿಸಲು ಈಗಾಗಲೇ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದ ಅವರು, ಕುಡಿಯುವ ನೀರಿನ ಸಮಸ್ಯೆಯಾಗ ಬಹುದಾದ ಜನವಸತಿಗಳನ್ನು ಗುರುತಿಸಲಾಗಿದ್ದು, ಈ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಬೇಕು. ತೀವ್ರ ನಿಗಾವಹಿಸುವ ಮೂಲಕ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿ ಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

## ರಾಮಜನ್ಮ ಭೂಮಿ ಅಯೋಧ್ಯೆಯಂತೆ

# ಹನುಮನ ಜನ್ಮಭೂಮಿ ಅಂಜನಾದ್ರಿ ಅಭಿವೃದ್ಧಿಗೆ ಪೇಜಾವರಶ್ರೀ ಒತ್ತಾಯ

**ರಾಯಚೂರು, ಮೇ.3–** ಅಯೋಧ್ಯೆಯ ಶ್ರೀರಾಮ ಮಂದಿರದ ಅಭಿವೃದ್ಧಿಯಂತೆ ಹನುಮನ ಜನ್ಮಸ್ಥಳವಾದ ಅಂಜನಾದ್ರಿಯ ಅಭಿವೃದ್ಧಿಗೂ ಒತ್ತು ನೀಡುವಂತೆ ಕೇಂದ್ರ ಸರ್ಕಾರಕ್ಕೆ ತಾವು ಒತ್ತಾಯಿಸುವುದಾಗಿ ಉಡುಪಿ ಪೇಜಾವರ ಅಧೋಕ್ಷದ ಮಠದ ಪೀಠಾಧಿಪತಿ ಶ್ರೀ ವಿಶ್ವಪ್ರಸನ್ನ ತೀರ್ಥರು ಹೇಳಿದರು.

ನಗರದ ಸತ್ಯನಾರಾಯಣ ಪೇಟೆಯಲ್ಲಿ ಶ್ರೀ ಸತ್ಯನಾರಾಯಣ ದೇವಸ್ಥಾನದ 35ನೇ ವಾರ್ಷಿಕೋತ್ಸವ ಹಾಗೂ ವಿಶ್ವೇಶತೀರ್ಥರ ಸಭಾಭವನ 'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅಂಜನಾದ್ರಿ ಅಭಿವೃದ್ಧಿಯಾಗಬೇಕು. ಅಯೋಧ್ಯೆಗೆ ಹೋದವರು ಅಂಜನಾದ್ರಿಗೂ ಬರುತ್ತಾರೆ. ಯಾತ್ರಿಗಳಿಗೆ ಎಲ್ಲ ಸೌಲಭ್ಯಗಳು ಸಿಗುವಂತಗಬೇಕು. ಈ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಗಮನಹರಿಸುವಂತೆ ತಾವು ಒತ್ತಾಯಿಸುವುದಾಗಿ ತಿಳಿಸಿದರು.

ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣ ಆಗಬೇಕೆಂಬುದು ಹಿರಿಯ ಸ್ವಾಮೀಜಿ ವಿಶ್ವೇಶತೀರ್ಥರ ಆಸೆಯಾಗಿತ್ತು. ಅದರ ಜತೆಗೆ ಕರ್ನಾಟಕದ ಭಕ್ತರ ಸಹಕಾರವಿತ್ತು.



ರಾಯಚೂರು ನಗರದ ಸತ್ಯನಾರಾಯಣ ಪೇಟೆಯಲ್ಲಿ ಶ್ರೀ ಸತ್ಯನಾರಾಯಣ ದೇವಸ್ಥಾನದ 35ನೇ ವಾರ್ಷಿಕೋತ್ಸವ ಹಾಗೂ ವಿಶ್ವೇಶತೀರ್ಥರ ಸಭಾಭವನವನ್ನು ಉದ್ಘಾಟಿಸಿದರು.

ಈಗ ಅಭಿವೃದ್ಧಿಯಾಗಿದೆ. ಅದರಂತೆ ಅಂಜನಾದ್ರಿ ಅಭಿವೃದ್ಧಿಯಾಗುವುದರಲ್ಲಿ ಸಂದೇಹವೇ ಇಲ್ಲ ಎಂದ ಶ್ರೀಗಳು, ಗಂಗಾವತಿ ನಗರದಲ್ಲಿ ವಿದ್ಯಾಪೀಠ ಮತ್ತು ವಿಶ್ವೇಶತೀರ್ಥ ಸಭಾಭವನ ನಿರ್ಮಿಸಲು ಎಲ್ಲರ ಸಹಕಾರ ಕಾರಣವಾಗಿದೆ. ದಿ. ಸತ್ಯನಾರಾಯಣ ಶ್ರೇಷ್ಠಿ ಅವರ ಕುಟುಂಬ ಹಾಗೂ ಅವರ ಪುತ್ರ ಲಕ್ಷ್ಮೀನಾರಾಯಣ ಕಾರಣವಾಗಿದ್ದಾರೆ. ಮಾಜಿ ಸಚಿವ ಮಲ್ಲಿಕಾರ್ಜುನಾಗಪ್ಪ ಮಾತನಾಡಿ, ಪೇಜಾವರ ಶ್ರೀಗಳು ಹಿಂದೂ ಸಮಾಜವನ್ನು ರಕ್ಷಿಸುತ್ತಿದ್ದಾರೆ. ಇವರ ನೇತೃತ್ವದಲ್ಲಿ ಅಯೋಧ್ಯೆಯಲ್ಲಿ ಶ್ರೀರಾಮಚಂದ್ರ ದೇವರ ವಿಶೇಷ ಪೂಜೆ ನಡೆದಿರುವುದು ಶ್ಲಾಘನೀಯವಾಗಿದೆ ಎಂದು ಹೇಳಿದರು.

ವಿಧಾನಪರಿಷತ್ ಮಾಜಿ ಸದಸ್ಯ ಎಚ್.ಆರ್. ಶ್ರೀನಾಥ ಮಾತನಾಡಿ, ಅಯೋಧ್ಯೆಯಂತೆ ಅಂಜನಾದ್ರಿ ಅಭಿವೃದ್ಧಿಯಾಗಬೇಕೆಂದು ಶ್ರೀಗಳು ನಿರ್ಧರಿಸಿದರೆ ಕೆಲವೇ ದಿನಗಳಲ್ಲಿ ಅದು ಕಾರ್ಯಸಾಧುವಾಗಲಿದೆ. ಅಯೋಧ್ಯೆಯಷ್ಟೇ ಅಂಜನಾದ್ರಿಯೂ ಪವಿತ್ರ ಸ್ಥಳವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಇಲ್ಲಿಗೆ ಆಗಮಿಸುತ್ತಿರುವುದರಿಂದ ಅಭಿವೃದ್ಧಿಯಾಗಬೇಕಿದೆ ಎಂದರು.

# ಕಲಬುರಗಿ ವಿಶ್ವವಿದ್ಯಾಲಯ ಜಮೀನು, ಪರಭಾರೆ ವಿರೋಧಿಸಿ ನಾಳೆ ಬೆಂಗಳೂರಿಗೆ ದಲಿತರ ನಿಯೋಗ

**ಕಲಬುರಗಿ, ಮೇ. 3:** ಕಲಬುರಗಿ ವಿಶ್ವವಿದ್ಯಾಲಯದ 250 ಎಕರೆ ಜಮೀನು ಲಪಟಾಯಿಸಲು ಹೊಂಚು ಹಾಕುತ್ತಿರುವ ಸರ್ಕಾರದ ಕ್ರಮವು ಖಂಡನಾರ್ಹ. ಸ್ಪೋರ್ಟ್ಸ್‌ಸಿಟಿ ಹಾಗೂ ಸ್ಪೋರ್ಟ್ಸ್ ಹಬ್ ಮತ್ತು ಇತರೆ ಸರ್ಕಾರದ ಕಟ್ಟಡಗಳಿಗೆ ಸುಮಾರು 250 ಎಕರೆಗಿಂತ ಹೆಚ್ಚು ಜಮೀನು ಕೊಡಲು ವಿಶ್ವವಿದ್ಯಾಲಯದ ಆಡಳಿತ ಮಂಡಳಿಗೆ ಸರ್ಕಾರದ ಹಿರಿಯ ಅಧಿಕಾರಿಗಳು ಒತ್ತಡ ಹಾಕುತ್ತಿರುವುದು ಕೈಬಿಡಬೇಕು ಎಂದು ಒತ್ತಾಯಿಸಿ, ಬೆಂಗಳೂರಿಗೆ ಮೇ 5ರಂದು ನಿಯೋಗ ಹೋಗಲಾಗುವುದು ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ) ರಾಜ್ಯ ಸಂಘಟನಾ ಸಂಚಾಲಕ ಅರ್ಜುನ್ ಭದ್ರೆ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಕೆಲವು ಪ್ರಭಾವಿ ಜನ ಪ್ರತಿನಿಧಿಗಳು ಮತ್ತು ಸಿಂಡಿಕೇಟ್ ಸದಸ್ಯರು ಕೂಡ ವಿಶ್ವವಿದ್ಯಾಲಯ ಜಮೀನು ಎನ್‌ಓಸಿಗೆ ಒತ್ತಾಯ ಮಾಡುತ್ತಿರುವುದು ತೀರಾನಾಚಿಗೇಡಿ ವಿಷಯವಾಗಿದೆ. ವಿಶ್ವವಿದ್ಯಾಲಯದ ಶಿಕ್ಷಣ ಮಟ್ಟ ಮತ್ತು ಅಭಿವೃದ್ಧಿ ಪರವಾಗಿ ಇರಬೇಕು ಹೊರತು ವಿಶ್ವವಿದ್ಯಾಲಯದ ಆಸ್ತಿಗೆ ಕನ್ನ ಹಾಕುವ ಕೆಲಸ ಸಿಂಡಿಕೇಟ್ ಸದಸ್ಯರು ಮಾಡಬಾರದು ಎಂದು ತಾಕೀತು ಮಾಡಿದರು.



ಕಲಬುರಗಿ ಪತ್ರಿಕಾ ಭವನದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ) ರಾಜ್ಯ ಸಂಘಟನಾ ಸಂಚಾಲಕ ಅರ್ಜುನ್ ಭದ್ರೆ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದರು.

ವಿಶ್ವವಿದ್ಯಾಲಯ 800 ಎಕರೆ ಜಮೀನಿನಲ್ಲಿ ಈಗಾಗಲೇ 50 ಎಕರೆ ಇಎಸ್‌ಐ ಆಸ್ಪತ್ರೆಗೆ, ಪಂಡಿತ ದೀನದಯಾಳ್ ಉಪಾಧ್ಯಾಯ ವಸತಿನಿಲಯ ಹಾಗೂ ಜಿಟಿಟಿಸಿಯ ಬಹುಕೌಶಲ್ಯ ಅಭಿವೃದ್ಧಿ ಕೇಂದ್ರಕ್ಕೆ 20 ಎಕರೆ ಮುಂತಾದವುಗಳಿಗೆ ಜಮೀನು ನೀಡಲಾಗಿದೆ. ಅಂತರಾಷ್ಟ್ರೀಯ ಕ್ರಿಕೆಟ್ ಮೈದಾನಕ್ಕೆ 70 ಎಕರೆ, ಸ್ಪೋರ್ಟ್ಸ್‌ಸಿಟಿ ಮತ್ತು ಸ್ಪೋರ್ಟ್ಸ್ ಹಬ್‌ಗೆ 50 ಎಕರೆ, ಕಲ್ಯಾಣ ಕರ್ನಾಟಕ ಮಾನವ ಅಭಿವೃದ್ಧಿ ಮಂಡಳಿ ಕೃಷಿ, ಸಾಂಸ್ಕೃತಿಕ ಸಂಘ ಹಾಗೂ ಇಂಜಿನಿಯರ್ ಕಾಲೇಜಿಗೆ 20 ಎಕರೆ, ಅಗ್ನಿಶಾಮಕ ಠಾಣೆ ಹಾಗೂ ವಿಜ್ಞಾನೇಶ್ವರ ಕಾನುನು ಕಾಲೇಜಿಗೆ ತಲಾ 15 ಎಕರೆ, ಗಾಂಧಿ ಭವನಕ್ಕೆ ಹತ್ತು ಎಕರೆ, ಪೋಲಿಸ್ ಠಾಣೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆ, ವಚನ ಮಂಟಪ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯಕ್ಕೆ ತಲಾ ಐದು ಎಕರೆ, ಜಿಲ್ಲಾ ಪಂಚಾಯಿತಿ ನಿರ್ಮಾಣಕ್ಕೆ, ಸ್ಯಾಟ್‌ಲೈಟ್, ಬಸ್ ನಿಲ್ದಾಣಕ್ಕೆ, ಜಿಲ್ಲಾ ಪಂಚಾಯಿತಿ ಕಚೇರಿ ನಿರ್ಮಾಣಕ್ಕೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಈಗೆ ಎಲ್ಲ ಇಲಾಖೆಗೆ 250 ಎಕರೆಗೂ ಹೆಚ್ಚಿನ ಜಮೀನು ಕೊಡುವಂತೆ ಒತ್ತಡ ಹೇರುತ್ತಿದ್ದಾರೆ. ಸರ್ಕಾರ ಇಂತಹ ಒತ್ತಡಕ್ಕೆ ಮಣಿಯದೇ ಒಂದಿಂಚು ಜಾಗ ಕೊಡ ಬಾರದು ಎಂದು ಅವರು ಒತ್ತಾಯಿಸಿದರು.

ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ದಲಿತ, ಹಿಂದುಳಿದ ಮತ್ತು ಬಡವರ ರೈತರ ಮಕ್ಕಳಾಗಿದ್ದಾರೆ. ದಲಿತ, ಹಿಂದುಳಿದ, ಬಡ ರೈತರ ಮಕ್ಕಳು ಶರಣಬಸವೇಶ್ವರ ವಿಶ್ವವಿದ್ಯಾಲಯ, ಖಾಜಾ ಬಂದೇ ನವಾಜ್ ವಿಶ್ವವಿದ್ಯಾಲಯಗಳಲ್ಲಿ ಲಕ್ಷ ಗಟ್ಟಲೇ ಹಣ ಸುರಿದು ಓದಲಿಕ್ಕೆ ಆಗದು. ಅವರು ಉನ್ನತ ಶಿಕ್ಷಣ ಪಡೆಯಲು ವಂಚಿತರನ್ನಾಗಿ ಮಾಡಲು ಸಂಚು ರೂಪಿಸುವ ಹಾಗೆ ಕಾಣುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಸರ್ಕಾರಕ್ಕೆ ವಿಶ್ವವಿದ್ಯಾಲಯಗಳ ಸಂಖ್ಯೆ ಹೆಚ್ಚಿಸುವುದರಲ್ಲಿ ಉತ್ಸಾಹವಿದೆಯೇ ಹೊರತು ಇರುವ ವಿಶ್ವವಿದ್ಯಾಲಯಗಳು ಗುಣಮಟ್ಟ ಸುಧಾರಣೆಯ ಕುರಿತು ಹೆಚ್ಚಿನ ಆಸಕ್ತಿ ಇಲ್ಲ. ರಾಜ್ಯದ ಎಲ್ಲ ವಿಶ್ವವಿದ್ಯಾಲಯಗಳ ಖಾಯಂ ಸಿಬ್ಬಂದಿಗಳ ಕೊರತೆ ಎದುರಿಸುತ್ತಿದೆ. ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರು, ಅತಿಥಿ ಉಪನ್ಯಾಸಕರನ್ನು ನೆಚ್ಚಿಕೊಂಡು ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ. ಕೆಲವು ವಿಶ್ವವಿದ್ಯಾಲಯಗಳಲ್ಲಿ ಕೆಲವು ವಿಭಾಗ ಗಳಲ್ಲಿ ಮುಖ್ಯಸ್ಥರೇ ಇಲ್ಲ. ಅತಿಥಿ ಉಪನ್ಯಾಸಕರಿಗೆ ವೇತನ ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ಆಗುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ವಿಶ್ವವಿದ್ಯಾಲಯಗಳಲ್ಲಿ ಸಂವಾದ ಮತ್ತು ಸಾಂಸ್ಕೃತಿಕದಂತಹ ವಿಚಾರ ಧಾರೆಗಳನ್ನು ರೂಪಿಸುವ ವಿಶ್ವವಿದ್ಯಾಲಯಗಳ ಪರಂಪರೆ ಇಂದು ಕಳೆದುಕೊಂಡಿವೆ. ಈಗ ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳು ಒಂದಿಲ್ಲೊಂದು ವಿವಾದಗಳಿಂದ ಮತ್ತು ಭ್ರಷ್ಟಾಚಾರದ ಸುದ್ದಿಯಲ್ಲಿರುವೆ. ಕರ್ನಾಟಕ ಕೇಂದ್ರೀಯ ವಿಶ ವಿದ್ಯಾಲಯವನ್ನು ಒಳಗೊಂಡು ಎಲ್ಲ ವಿಶ್ವವಿದ್ಯಾಲಯಗಳಲ್ಲಿ ಜಾತ್ಯಾತೀತ, ಸಾಮರಸ್ಯ, ಜ್ಞಾನದಾಹದ ಕೇಂದ್ರವಾಗ ಬೇಕಿದ್ದ ವಿಶ್ವವಿದ್ಯಾಲಯಗಳಲ್ಲಿ ಕೋಮುವಾದದ ವಿಷ ಬೀಜ ಬಿತ್ತುವ ವಿದ್ಯಾರ್ಥಿಗಳನ್ನು ಕೋಮು ಗಲಭೆಗಳಿಗೆ ಪ್ರಚೋದಿಸುವ ಕೆಲಸ ನಡೆಯುತ್ತಿದೆ ಎಂದು ಅವರು ಆಕ್ರೋಶ ವ್ಯಕ ಪಡಿಸಿದರು.

ವಿಶ್ವವಿದ್ಯಾಲಯದ ಜಮೀನು ಸರ್ಕಾರ ಬೇರೆ, ಬೇರೆ ಇಲಾಖೆಗಳಿಗೆ ವರ್ಗಾಯಿಸಬಾರದು. ಒಂದು ವೇಳೆ ಜಮೀನು ನೀಡಿದರೆ ದೊಡ್ಡ ಪ್ರಮಾಣದ ಹೋರಾಟ ರೂಪಿಸಬೇಕಾಗುತ್ತದೆ. ಹಾಗಾಗಿ ಮೇ 5ರಂದು ನಿಯೋಗವೊಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತು ರಾಜ್ಯದ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಬಳಿಗೆ ತರೆಳಿ ಮನವಿ ಸಲ್ಲಿಸಲಾಗುವುದು ಎಂದು ಅವರು ತಿಳಿಸಿದರು.

## ಸಿಡಿಲು ಬಡಿದು ಮೃತಪಟ್ಟ, ಬೆಳೆನಷ್ಟ ಪರಿಹಾರ ವಿತರಿಸಲು ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಸೂಚನೆ

**ಕಲಬುರಗಿ, ಮೇ.3–** ಜಿಲ್ಲೆಯಲ್ಲಿ ಪೂರ್ವ ಮುಂಗಾರಿನಲ್ಲಿ ಹಾನಿಯಾದ ಸಿಡಿಲು ಬಡಿದು, ಮೃತಪಟ್ಟ, ಪ್ರಾಣಿಹಾನಿ ಬೆಳೆ ನಷ್ಟ ಕುರಿತು ಸರ್ಕಾರದ ಮಾರ್ಗಸೂಚಿ ಅನ್ವಯ ತುರ್ತಾಗಿ ಪರಿಹಾರ ವಿತರಿಸಲು ಕ್ರಮಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕಲಬುರಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ವಿಡಿಯೋ ಕಾನ್ಫರೆನ್ಸ್ ಹಾಲಿನಲ್ಲಿ ಮುಂಗಾರು ಪೂರ್ವ ಮಳೆ ಅನಾಹುತ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯನ್ನು ಉದ್ದೇಶಿಸಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಮಾತನಾಡಿದರು. ಜಿಲ್ಲಾ ಪಂಚಾಯತ್ ಸಿಇಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರುಗಳಿದ್ದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ವಿಡಿಯೋ ಕಾನ್ಫರೆನ್ಸ್ ಹಾಲಿನಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು ತಾಲೂಕಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ 15 ದಿನಗಳಿಂದ ಬಾರಿ ಗಾಳಿಯಿಂದ ಹಾನಿಯಾದ ಮನೆಗಳು ಪಂಚಾಯತ್ ರಾಜ್ ಮತ್ತು ಕಂದಾಯ ಇಲಾಖೆ ಜಂಟಿ ಸಮೀಕ್ಷೆ ಕೈಗೊಂಡ ಹಾನಿಯಾದ ಮನೆಗಳಿಗೆ ತುರ್ತು ಪರಿಹಾರ ವಿತರಿಸಬೇಕೆಂದರು ಯಾವುದೇ ಅನುದಾನ ಕೊರತೆ ಇಲ್ಲ ಎಂದರು.

ತೋಟಗಾರಿಕೆ ಇಲಾಖೆ ಬೆಳೆಯ 68 ಎಕ್ಟರ್ ಪ್ರದೇಶದ ತೋಟಗಳು ಬೆಳೆಗಳ ಹಾನಿಯಾದ ಕುರಿತು ಪ್ರಾಥಮಿಕ ಮಾಹಿತಿ ಸಭೆಯಲ್ಲಿ ತಿಳಿಸಲಾಯಿತು. ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಕುರಿತು ಎಲ್ಲಾ ತಹಶೀಲ್ದಾರ ಜೊತೆ ಚರ್ಚಿಸಲಾಯಿತು. ಸಧ್ಯದ ಪರಿಸ್ಥಿತಿಯ ಜಿಲ್ಲೆಯ 34 ಪಂಚಾಯತಿಗಳ ಒಟ್ಟು 40 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದ್ದಲ್ಲಿ ಎಲ್ಲ ಗ್ರಾಮಗಳಲ್ಲಿ ಈಗಾಗಲೇ ನೀರು ಸರಬರಾಜು ಮಾಡಲಾಗಿದೆ. ಪ್ರತಿಯೊಂದು ಹಳ್ಳಿಗಳಿಗೆ ನೀರಿನ ತೊಂದರೆಯಾಗ ದಂತೆ ಮುಂಜಾಗ್ರತೆಯನ್ನು ಅಧಿಕಾರಿ ಗಳು ಕ್ರಮವಹಿಸಬೇಕು. ಪಶುಸಂಗೋಪಾನ ಇಲಾಖೆ ಉಪನಿರ್ದೇಶಕರಿಗೆ ಡಾ.ಎಸ್. ಎಂ.ಬಿರಾದಾರ ಮಾತನಾಡಿ, ಜಿಲ್ಲೆಯ ಮೇವಿನ ಕೊರತೆ ಬಗ್ಗೆ ಮಾಹಿತಿ ನೀಡಿದರು. ಜಿಲ್ಲೆಯ ಎಲ್ಲ ಜಾನುವಾರು ಗಳಿಗೆ 29 ವಾರಕ್ಕೆ ಸಕಾಗುವಷ್ಟು ಮೇವು ಲಭ್ಯವಿದೆ ಏಳನೆ ಸುತ್ತಿನ ಕಾಲು ಮತ್ತು ಬಾಯಿ ಬೇನೆ ಲಸಿಕೆ ಯನ್ನು ಹಾಕಲಾಗಿರುತ್ತದೆ ಎಂದರು.

ಗುಡುಗು ಮತ್ತು ಸಿಡಿಲಿನ ಅಪಾಯ ಗಳನ್ನು ತಗ್ಗಿಸಲು ಸಾರ್ವ ಜನಿಕರ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಲು ಸಭೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದ್ದರು.

ಸಿಡಿಲಿನ ಕುರಿತು ಸ್ಥಳೀಯ ಜನರಲ್ಲಿ ಎಚ್ಚರಿಸಲು ಹಾಗೂ ಅಪಾಯಗಳನ್ನು ತಗ್ಗಿಸಲು ಸಲಹೆ ಸೂಚನೆಗಳನ್ನು ನೀಡಲು ಶಾಲಾ–ಕಾಲೇಜು ರೈತ ಸಂಪರ್ಕ ಕೇಂದ್ರಗಳು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹೆಚ್ಚಿನ ಪ್ರಚಾರಕೈಗೊಳ್ಳಬೇಕೆಂದರು.

ಬಿಸಿಗಾಳಿ ಕುರಿತು ವಿಶೇಷವಾಗಿ ಮಧ್ಯಾಹ್ನ ಮಧ್ಯಾಹ್ನ 12 ಗಂಟೆಯಿಂದ 4 ಗಂಟೆಯವರೆಗೆ ಬಿಸಿಲಿನ ಹೋಗದನ್ನು ತಪ್ಪಿಸುವುದು ಹೆಚ್ಚಾಗಿ ಬಾಯಾರಿಕೆ ಇಲ್ಲದಿದ್ದರೂ ಸಹ ನೀರು ಕುಡಿಯಲು ಸಾಧ್ಯವಾದಲ್ಲಿ ಹಗುರವಾದ ತಿಳಿಬಣ್ಣದ ಸಡಿಲವಾದ ರಂಧ್ರವಿರುವ ಹತ್ತಿಬಟ್ಟೆ ಧರಿಸಬೇಕು. ಮಧ್ಯಾಹ್ನ 12 ಗಂಟೆಗೆ 3 ಗಂಟೆಗೆ ಕೆಲಸ ಮಾಡುವುದು ತಪ್ಪಿಸುವುದು ಸಾರ್ವಜನಿಕರ ಗಮನಕ್ಕೆ ಅಧಿಕಾರಿ ಗಳು ತರಬೇಕೆಂದರು. ರೈತ ಮತ್ತು ಕೃಷಿ ಕಾರ್ಮಿಕರು ನೀವು ಹೊಲದಲ್ಲಿ ಕೆಲಸ ಮಾಡುತ್ತಿದ್ದಾರೆ ಟೋಪಿ ಬಳಸಬೇಕೆಂದರು. ಜಾನು ವಾರು ರಕ್ಷಣೆ ಗಮನ ಹರಿಸುವುದು ಸಾರ್ವಜನಿಕ ಅರಿವು ಮೂಡಿಸುವ ಕೆಲಸ ಅಧಿಕಾರಿಗಳು ಮಾಡಬೇಕೆಂದರು.

ಜಾನುವಾರ ರಕ್ಷಣೆ ಗಮನ ಹರಿಸುವ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಎಸ್.ಡಿ.ಆರ್.ಎಫ್ ಮತ್ತು ಅಗ್ನಿ ಶಾಮಕ ಇಲಾಖೆ ಸತತವಾಗಿ ಅಣುಕು ಪ್ರದರ್ಶನ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಧಾರವಾಡ ತಾಲೂಕಿನ ಯಾದವಾಡ ಗ್ರಾಮದಲ್ಲಿ ಶನಿವಾರ ದ್ಯಾಮಮ್ಮ ಮತ್ತು ದುರುಗಮ್ಮ ಜಾತ್ರೆಯಲ್ಲಿ ಭಕ್ತರು ಹೊನ್ನಾಟ (ಭಂಡಾರ ಜಾತ್ರೆ) ನಡೆಸಿದರು.

## ಗಾಲಿ ಜನಾರ್ಧನ ರೆಡ್ಡಿಯ ಅಕ್ರಮ ಗಳು ನ್ಯಾಯಾಲಯದಲ್ಲಿ ಸಾಬೀತು ಆಗುವ ನಂಬಿಕೆ: ಟಪಾಲ್ ಗಣೇಶ್

**ಬಳ್ಳಾರಿ ಮೇ.3–**ಗಂಗಾವತಿ ಯಲ್ಲಿ ಮರು ಚುನಾವಣೆ ಸಾಧ್ಯತೆ. ಇಡೀ ದೇಶದಲ್ಲಿ ಸದ್ದು ಮಾಡಿದ ಕರ್ನಾಟಕ ಮತ್ತು ಆಂಧ್ರಪ್ರದೇಶದ ಗಡಿಭಾಗದಲ್ಲಿ ನಡೆದ ಗಣಿಗಾರಿಕೆ ಕುರಿತು ಇದೇ ತಿಂಗಳು, ಮೇ6.ರಂದು ನ್ಯಾಯಾಲಯದಲ್ಲಿ ತೀರ್ಪು ಹೊರಬರಲಿದೆ. ಈ ಹಿನ್ನೆಲೆಯಲ್ಲಿ ಅಂದಿನಿಂದ ಇಂದಿನವರೆಗೆ ಹೋರಾಟ ಮಾಡಿಕೊಂಡು ಬಂದಿರುವ ಹೋರಾಟಗಾರ ಟಪಾಲ್ ಗಣೇಶ್ ಅವರು ಮೇ6. ರಂದು ಬರುವ ತೀರ್ಪು 101% ಗಾಲಿ ಜನಾರ್ಧನ್ ರೆಡ್ಡಿ ವಿರುದ್ಧ ತೀರ್ಪು ಬರಲಿದೆ ಎನ್ನುವ ನಂಭಿಕೆ ಇದೇ ಎಂದು ತಿಳಿಸಿದ್ದಾರೆ.

ಅಕ್ರಮ ಗಣಿಗಾರಿಕೆ ನಡೆದಿದೆ ಎಂದು 2006ರಿಂದ ಹೋರಾಟ ಮಾಡುತ್ತಿದ್ದ ಟಪಾಲ್ ಗಣೇಶ ಅವರಮೇಲೆ ಹಲ್ಲೆ ಕೂಡ ಆಗಿತ್ತು. ಎಷ್ಟೋ ಸಮಸ್ಯೆಗಳು ಎದುರಾದರೂ ಜಗ್ಗದೇ ಬಗ್ಗದೇ ಹೊರಾಟ ಮಾಡುತ್ತಾ ಬಂದಿದ್ದರು ಟಪಾಲ್ ಗಣೇಶ್.

ಆಸಂದರ್ಭದಲ್ಲಿ ಟಪಾಲ್ ಗಣೇಶ್ ಅವರಿಗೆ ಪೋಲಿಸ್ ಭದ್ರತಾ ವ್ಯವಸ್ಥೆಯನ್ನು ಒದಗಿಸಲಾಗಿತ್ತು, ಆದರೆ ಇತ್ತೀಚಿಗೆ ಭದ್ರತೆಯನ್ನು ತೊಲಗಿಸಲಾಗಿದೆ.

ರಾಜ್ಯ ಸರ್ಕಾರದ ಸಂಪತ್ತು 800 ಕೋಟಿ ಮೇಲೆ ಲೂಟಿಯಾಗಿದೆ ಎಂದು ಹೋರಾಟಕ್ಕೆ ನಿಂತಿರುವ ಟಪಾಲ್ ಗಣೇಶ್ ಅವರು, ಗಾಲಿ ಜನಾರ್ದನ್ ರೆಡ್ಡಿ ಏನೇ ಸರ್ಕಸ್ ಮಾಡಿದರು ಅವರಿಗೆ ನ್ಯಾಯಾಲಯದಲ್ಲಿ ಅವರ ಪರವಾಗಿ ತೀರ್ಪು ಬರಲು ಸಾಧ್ಯವಿಲ್ಲ ಎಂದು ಹಂಚಿಕೊಂಡಿದ್ದಾರೆ.

ಮೇ 6.ಕ್ಕೆ ಬರುವ ತೀರ್ಪು ಇತಿಹಾಸವನ್ನೇ ಬದಲಾವಣೆ ಮಾಡಲಿದೆ ಎಂದು ಇದರಿಂದ ಕರ್ನಾಟಕ ರಾಜ್ಯದಲ್ಲಿ ಗಂಗಾವತಿ ವಿಧಾನಸಭಾ ಕ್ಷೇತ್ರಕ್ಕೆ ಮತ್ತೊಮ್ಮೆ



ಚುನಾವಣೆ ನಡೆಯುವ ಸಾಧ್ಯತೆ ಇದೆ ಎಂದರು. ಗಾಲಿ ಜನಾರ್ದನ್ ರೆಡ್ಡಿ ಅವರ ಅಣ್ಣತಮ್ಮಂದಿರು ದೊಡ್ಡ ತಮ್ಮ ಶ್ರೀರಾಮುಲು ಎಲ್ಲರೂ ಅಕ್ರಮ ಮೈನಿಂಗ್ ನಡೆದ ಸಮಯದಲ್ಲಿ ಎಲ್ಲರೂ ಸಚಿವರಾಗಿದ್ದರು ಸೋಮಶೇಖರ ರೆಡ್ಡಿ ಕೆಎಂಎಫ್ ಅಧ್ಯಕ್ಷರಾಗಿದ್ದರು.

ಆಂಧ್ರ ಪ್ರದೇಶದಲ್ಲಿ ಅವರಿಗೆ ರಾಜಶೇಖರ್ ರೆಡ್ಡಿ ಸರ್ಕಾರ ಅಕ್ರಮಗಳಿಗೆ ಗ್ರೀನ್ ಮ್ಯಾಟ್ ಹಾಕಿತ್ತು ಎಂದು ಆರೋಪ ಮಾಡಿದರು. ಮೈನಿಂಗ್ ನಕ್ಷೆ ಹೆಚ್ಚು ಕಡಿಮೆ ಮಾಡಿ ಮೈನಿಂಗ್ ಒಂದು ಕಡೆ, ಪರಿಮೆಟ್ ಒಂದು ಕಡೆ. ಕೋಟ್ಯಾಂತರ ಲೂಟಿ ಮಾಡಿದ್ದಾರ ಎಂದು ಅಂದಿನ ಡಿಸಿ,ಎಸ್ಪಿ ಗಳು ಕೂಡ ಮನೆಯಲ್ಲಿ ಕೆಲಸ ಗಾರರಯಂತೆ, ಗಾಲಿ ಜನಾರ್ದನ್ ರೆಡ್ಡಿ ಪರವಾಗಿ ಕೆಲಸ ಮಾಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕರ್ನಾಟಕದಲ್ಲಿ ಸಿದ್ದರಾಮಯ್ಯ ಪಾದಯಾತ್ರೆ ಮಾಡಿದ್ದಾರೆ,ಆದ್ರೆ ಏನುಪ್ರಯೋಜನೆ ಆಗಿಲ್ಲ.

ಸಿದ್ದರಾಮಯ್ಯ ಸರ್ಕಾರ ದಲ್ಲಿ ಕೆಲ ಸಚಿವರು ವೆಸ್ಟ್ ಎಂದು ಗುಡಿಗಿದ್ದಾರೆ. ಟಪಾಲ್ ಗಣೇಶ್ ಅವರ ಉತ್ಸವ ನೋಡುತ ಇದ್ದರೆ ಕೆಲ ದಿನ ಗಳ ಹಿಂದೆ ದಿಂದ ಕೋರ್ಟ್ ನಲ್ಲಿ ನಡೆಯುವ ವಿದ್ಯಮಾನಗಳು ಗಣೇಶ್ ಅವರಿಗೆ ವಿಶ್ವಾಸ ಹೆಚ್ಚು ಮಾಡಿವೆ.

## ಕಾಶ್ಮೀರ ಹಿಂದೂಗಳ ಹತ್ಯೆಗೆ ಕಾಂಗ್ರೆಸ್ ಸರ್ಕಾರದ ಧೋರಣೆಯೇ ಕಾರಣ: ವಿಭೂತಿಹಳ್ಳಿ



ಯಾದಗಿರಿ ನಗರದ ಸುಭಾಷ್ ವೃತ್ತದಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಅವರ ಬರ್ಬರ ಹತ್ಯೆ ಖಂಡಿಸಿ ಬಿಜೆಪಿ ಮತ್ತು ಹಿಂದೂಪರ ಸಂಘಟನೆಗಳು ಪ್ರತಿಭಟನೆ ನಡೆಸಿದವು.

**ಯಾದಗಿರಿ, ಮೇ.3–** ಸಿದ್ದ ರಾಮಯ್ಯರ ನೇತೃತ್ವದ ಕಾಂಗ್ರೆಸ್ ಸರಕಾರದ ಎಸ್‌ಡಿಪಿಐ, ಪಿಎಸ್‌ಐ ಮೇಲಿನ ಪ್ರೀತಿಯು ಕಾಶ್ಮೀರ ಹಿಂದೂಗಳ ಹತ್ಯೆ ಮತ್ತು ಮಂಗಳೂರಿನ ಹಿಂದೂ ಕಾರ್ಯಕರ್ತ ಸುಹಾಸ್ ಹತ್ಯೆಯಂಥ ದುಷ್ಕೃತ್ಯ, ಹಿಂದೂಗಳ ಬೆದರಿಕೆ–ಹಿಂದೂಗಳ ಹತ್ಯೆಗೆ ಶಕ್ತಿ ಕೊಟ್ಟಂತಿದೆ. ದುಷ್ಟರಿಗೆ ಆನೆ ಬಲ ಬಂದಂತಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ ಅವರು ಆರೋಪಿಸಿದರು.

ನಗರದ ಸುಭಾಷ್ ವೃತ್ತದಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಅವರ ಬರ್ಬರ ಹತ್ಯೆ ಖಂಡಿಸಿ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದ ಅವರು, ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಅವರ ಬರ್ಬರ ಹತ್ಯೆ ನಡೆದಿದೆ. ಇದು ಪೂರ್ವನಿಯೋಜಿತ ಎಂಬುದು ಸ್ಪಷ್ಟವಾಗಿ ಕಾಣುತ್ತಿದೆ ಎಂದು ವಿವರಿಸಿದರು.

ಕಾಶ್ಮೀರದಲ್ಲಿ ಹಿಂದೂಗಳ ಮಾರಣಹೋಮ ಆಗಿದೆ. ಇದನ್ನು ದೇಶ– ರಾಜ್ಯದ ಜನರು ಮರೆತಿಲ್ಲ; ಇದರ ನಡುವೆ ಹಿಂದೂ ಕಾರ್ಯಕರ್ತನ ಬರ್ಬರ ಹತ್ಯೆ ನಡೆದಿರುವುದು ಖಂಡನೀಯ ಎಂದ ಅವರು, ರಾಜ್ಯದಲ್ಲಿ ಸಿದ್ದರಾಮಯ್ಯರ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ದೇಶದ್ರೋಹಿಗಳು, ಕೊಲೆಗಡುಕರಿಗೆ ಏನು ಮಾಡಿದರೂ ನಡೆಯುತ್ತದೆ ಎಂಬ ಆತ್ಮವಿಶ್ವಾಸ ಹೆಚ್ಚಾಗಿದೆ. ಇದರ ಪರಿಣಾಮವಾಗಿ ಪದೇಪದೇ ಇಂಥ ಕೃತ್ಯ ನಡೆಯುತ್ತಿದೆ. ಹಿಂದೂ ಕಾರ್ಯಕರ್ತರ ಹತ್ಯೆ ನಡೆಯುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಹಿರಿಯ ಮುಖಂಡೆ ನಾಗರತ್ನ ಕುಪ್ಪಿ ಮಾತನಾಡಿದ ಅವರು ಒಬ್ಬ ಹಿಂದೂ ಕಾರ್ಯಕರ್ತನ ಜೀವಕ್ಕೆ ಬೆದರಿಕೆ ಇದೆ ಎಂದು ಗೊತ್ತಿದ್ದರೂ ಯಾಕೆ ಇಂಥ ಘಟನೆ ಆಗಲು ಸಾಧ್ಯವಾಯಿತು ಎಂದ ಅವರು, ಮುಖ್ಯಮಂತ್ರಿಗಳ ಮೃದು ಧೋರಣೆಯು ಸುಹಾಸ್ ಕೊಲೆಗೂ ಕಾರಣ ಎಂದು ಟೀಕಿಸಿದರು. ಬಿಜೆಪಿ ಇದನ್ನು ಬಲವಾಗಿ ಖಂಡಿಸುತ್ತದೆ. ಕಗ್ಗೊಲೆ ಖಂಡಿಸಿ ರಾಜ್ಯವ್ಯಾಪಿ ಪ್ರತಿಭಟನೆಗೆ ಮಾಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯುವ ಮುಖಂಡ ಮಹೇಶರಡ್ಡಿ ಮುದ್ನಾಳ ಮಾತನಾಡಿದ ಅವರು ಹಿಂದೂ ವಿರೋಧಿ ರಾಜ್ಯ ಸರಕಾರ ತೊಲಗುವ ವರೆಗೆ ರಾಜ್ಯದ ಜನರಿಗೆ ನೆಮ್ಮದಿ ಇರಲಾರದು ಕಳೆದ ಕೆಲತಿಂಗಳುಗಳಿಂದ ಮುಖ್ಯಮಂತ್ರಿಗಳ ಹೇಳಿಕೆಯು ದೇಶದ್ರೋಹಿಗಳಿಗೆ ಶಕ್ತಿ ಕೊಡುವಂತಿದೆ. ಗೃಹಸಚಿವರ ನಿಷ್ಕ್ರಿಯತೆಯಿಂದ ಕರ್ನಾಟಕದಲ್ಲಿ ಇದ್ದೇವಾ ಅಥವಾ ಪಾಕಿಸ್ತಾನದಲ್ಲಿ ಇದ್ದೇವಾ ಎಂಬ ಚರ್ಚೆಗೆ ಕಾರಣವಾಗಿದೆ. ರಾಜ್ಯ ಸರಕಾರದ ಹಿಂದೂ ವಿರೋಧಿ ನಡವಳಿಕೆಗಳು, ಹಿಂದೂ ವಿರೋಧಿ ನೀತಿಯಿಂದ ಇಂಥ ದೇಶದ್ರೋಹಿಗಳಿಗೆ ಶಕ್ತಿ ತುಂಬುತ್ತಿದೆ ಎಂದು ಹೇಳಿದರು.

## ಹೊಸಪೇಟೆಯಲ್ಲಿ ಮೇ 20ರಂದು ರಾಜ್ಯ ಸರ್ಕಾರದ ಸಾಧನಾ ಸಮಾವೇಶ: ನಾರಾ ಭರತ್ ರೆಡ್ಡಿ



**ಬಳ್ಳಾರಿ, ಮೇ.3–** ವಿಜಯನಗರ ಜಿಲ್ಲೆ ಹೊಸಪೇಟೆಯ ವಿಜಯನಗರ ಕಾಲೇಜು ಮೈದಾನದಲ್ಲಿ ಇದೇ ತಿಂಗಳು ಮೇ,20 ರಂದು ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ ಏರ್ಪಡಿಸಲು ತೀರ್ಮಾನಿಸಲಾಗಿದೆ ಎಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ತಿಳಿಸಿದ್ದಾರೆ.

ಶುಕ್ರವಾರ ಸಂಜೆ ಹೊಸಪೇಟೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬಿ. ಝೆಡ್.ಜಮೀರ್ ಅಹ್ಮದ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ ನಂತರ ಅವರು ಪತ್ರಿಕಾ ಹೇಳಿಕೆ ನೀಡಿದ್ದಾರೆ.

ಕರ್ನಾಟಕದ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಾರಥ್ಯದಲ್ಲಿ ಯಶಸ್ವಿಯಾಗಿ ಎರಡು ವರ್ಷ ಪೂರೈಸಿದ್ದು, ಸರ್ಕಾರದ ಸಾಧನೆಗಳ ಬಗ್ಗೆ ಜನರೊಂದಿಗೆ ಸಂವಾದ ಏರ್ಪಡಿಸುವ ನಿಟ್ಟಿನಲ್ಲಿ ಈ ಸಮಾವೇಶ ಏರ್ಪಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಭೆಯಲ್ಲಿ ಭಾಗವಹಿಸಿದ್ದ ಶಾಸಕ ನಾರಾ ಭರತ್ ರೆಡ್ಡಿ; ಸಾಧನಾ ಸಮಾವೇಶ ಯಶಸ್ವಿಗೊಳಿಸಲು ಬೇಕಾಗುವ ಎಲ್ಲ ಸಹಕಾರವನ್ನು ನೀಡಲಾಗುವುದು ಎಂದು ತಿಳಿಸಿದರು.

ಮೇ.20 ರಂದು ನಡೆಯಲಿರುವ ಸಮಾವೇಶದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವ ಸಂಪುಟದ ಎಲ್ಲ ಸಚಿವರು ಕಲ್ಯಾಣ ಕರ್ನಾಟಕದ ಎಲ್ಲ ಶಾಸಕರು, ಸಂಸದರು ಭಾಗಿಯಾಗಲಿದ್ದಾರೆ ಎಂದು ಶಾಸಕ ನಾರಾ ಭರತ್ ರೆಡ್ಡಿ ತಿಳಿಸಿದ್ದಾರೆ.

ಸಮಾವೇಶದಲ್ಲಿ ವಿವಿಧ

## ಸೃಜನಶೀಲ ಕೆಲಸಗಳಿಂದ ಲೋಕದ ಅಭಿವೃದ್ಧಿ: ಭೀಮಾಶಂಕರ ಪ್ರೊ.ಬಿರಾದಾರ



**ಬಸವಕಲ್ಯಾಣ, ಮೇ.3–** ಸಮಾಜದ ಹಾಗೂ ಲೋಕದ ಕ್ರೀಯಾಶೀಲತೆ ಸೃಜನಶೀಲ ಕೆಲಸಗಳ ಕಟ್ಟುವಿಕೆಯಲ್ಲಿ ಅಡಗಿದೆ. ಏಕಾಂತವೂ ಲೋಕಾಂತದ ಅರಿವಿಗೆ ದಾರಿಯಾಗಿದೆ ಎಂದು ಶ್ರೀ ಬಸವೇಶ್ವರ ಪದವಿ ಕಾಲೇಜು ಅಧ್ಯಾಪಕ ಡಾ. ಭೀಮಾ ಶಂಕರ ಬಿರಾದಾರ ಹೇಳಿದರು.

ವಿಶ್ವವಿದ್ಯಾಲಯದ ಸಹಯೋಗ ದಲ್ಲಿ ಎಸ್‌ಎಸ್ ಕೆಬಿ ಪದವಿ, ದೊಡ್ಡಪ್ಪ ಅಪ್ಪ ಬಿಸಿಎ ಕಾಲೇಜು ವತಿಯಿಂದ ಎಸ್‌ಎಸ್ ಕೆಬಿ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರದಲ್ಲಿ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ ಕುರಿತು ಮಾತನಾಡಿದ ಅವರು, ಮೋಬೈಲ ಗೇಮಿಂಗ ನಂಥ ಆಧುನಿಕತೆ ಸೃಷ್ಟಿಸಿದ ಮೌಢ್ಯ ಗಳಿಗೆ ಯುವ ಜನತೆ ಬಲಿಯಾಗದಿರಲಿ ಎಂದರು.

ನಮ್ಮ ಓದು ಅಧ್ಯಯನಗಳು ನಮ್ಮೊಳಗೆ ಸೂಕ್ಷ್ಮತೆ ಬೆಳೆಸುತ್ತವೆ. ಆತ್ಮವಿಶ್ವಾಸ ಮೂಡಿಸುತ್ತವೆ. ಸ್ವವಿಮರ್ಶೆ ಹಾಗೂ ಲೋಕ ವಿಮರ್ಶೆಯ ಗುಣ ಸೃಷ್ಟಿಸುತ್ತವೆ. ಸಾಮಾಜಿಕ ಜಾಲತಾಣ, ಮೋಬೈಲ್ ಗೇಮಿಂಗ್ ಗೀಳು ರೋಗಕ್ಕೆ, ಖಿನ್ನತೆ ಉಂಟುಮಾಡಿ ಆತ್ಮಹತ್ಯೆಗೆ ಕಾರಣ ವಾಗಿವೆ. ಯುವ ಸಮುದಾಯ ನಿತ್ಯ ಕ್ರೀಯಾಶೀಲರಾ ಗಿರುವ ದಾರಿ ಕಂಡುಕೊಳ್ಳಬೇಕು.

ಬುದ್ಧ, ವಚನಕಾರರು, ಸಾಹಿತಿ ಗಳು ಈ ದೇಶವನ್ನು ವೈಚಾರಿಕವಾಗಿ ಕಟ್ಟಿದ್ದಾರೆ. ಗಾಂಧಿ, ವಿವೇಕಾನಂದರ ಅಂಬೇಡ್ಕರ, ಲೋ ಹಿಯಾ ಮೊದಲಾದವರು ಜಾತ್ಯ ತೀತ ಮತ್ತು ಪ್ರಜಾಪ್ರಭುತ್ವದ ನಾಡು ಕಟ್ಟಿದ್ದಾರೆ. ಹಲವಾರು ವಿಜ್ಞಾನಿಗಳು ವೈಜ್ಞಾನಿಕವಾಗಿ ವಿಶ್ವವನ್ನು ಕಟ್ಟಿಕೊಟ್ಟಿ ದ್ದಾರೆ ಈ ಎಲ್ಲವನ್ನೂ ಅರಿಯುವ ವ್ಯವ ಧಾನ ಮತ್ತು ಸಹನೆ ಯುವಶಕ್ತಿಯಲ್ಲಿ ಇರಬೇಕು ಎಂದರು.

ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಕೊರಾಳೆ ಮಾತನಾಡಿ, ಆಡಳಿತಾತ್ಮಕ ಹಾಗೂ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಯುವ ಸಮುದಾಯ ಸಿದ್ಧತೆ ನಡೆಸಬೇಕು. ಯುಪಿಎಸ್ಸಿ ಹಾಗೂ ಕೆಎಎಸ್ ಪರೀಕ್ಷೆ ಹೆಚ್ಚಾಗಿ ಬರೆಯು ವುದು ಬಿಎ, ಬಿಎಸ್ಸಿ, ಬಿಕಾಂ ಪದವಿ ವಿದ್ಯಾರ್ಥಿಗಳು. ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದ ವಿದ್ಯಾರ್ಥಿ ಗಳು ಕೀಳರಿಮೆ ಬಿಟ್ಟರೆ ಯಶಸ್ಸು ಸಾಧ. ಜೇನು ಹುಳುಗಳು ಇರದಿದ್ದರೆ ಮನುಷ್ಯನ ವಿನಾಶ ವಾಗುತ್ತದೆ. ಹೆಜ್ಜೇನು ಕಚ್ಚಿದರೆ ಹೃದಯ ಸ್ತಂಭನ ನಿಂತು ಸಾವು ಸಂಭವಿಸುತ್ತದೆ. ಜೇನು ಹುಳುಗಳ ಹಲವು ವಿಧ ಎಂದು ಜೇನು ಸಾಕಾಣಿಕೆ ಬಗ್ಗೆ ಮಾಹಿತಿ ನೀಡಿದರು. ಅಧ್ಯಕ್ಷತೆ ವಹಿಸಿದ್ದ ಕಲ್ಯಾಣಪ್ಪಾ ನಾವದಗಿ ಮಾತ ನಾಡಿ, ತಂತ್ರಜ್ಞಾನದ ದುರುಪಯೋಗ ದೇಶಕ್ಕೆ ಅಪಾಯ ತರುತ್ತದೆ. ಅದರ ಸದ್ಬಳಕೆಗೆ ಯುವ ಸಮುದಾಯ ಕಾಳಜಿ ತೋರಬೇಕು. ಸಮಾಜಕ್ಕೆ ಒಳ್ಳೆಯದನ್ನು ಮಾಡುವ ಮೂಲಕ ಯುವಕರು ದೇಶದ ಭವಿಷ್ಯ ರೂಪಿಸಬೇಕು ಎಂದರು.

## ಜೈನ ಧರ್ಮದ ಉಳಿವಿಗಾಗಿ ಎರಡಕ್ಕಿಂತ ಹೆಚ್ಚು ಮಕ್ಕಳನ್ನು ಹೆರಬೇಕು: ಜೈನಮುನಿ ಕುಲರತ್ನ ಭೂಷಣ ಮಹಾರಾಜರ ಕರೆ

**ಬೆಳಗಾವಿ, ಮೇ.3–** ಜೈನ ಧರ್ಮದ ಉಳಿವಿಗಾಗಿ ಅದರ ಪಾಲನೆಗಾಗಿ ಜೈನ ಬಂಧುಗಳು ಹೆಣ್ಣಾಗಲಿ, ಗಂಡಾಗಲಿ ಎರಡಕ್ಕಿಂತ ಹೆಚ್ಚಿನ ಮಕ್ಕಳನ್ನು ಹೊಂದುವುದು ಅಗತ್ಯವಿದೆ. ಜೈನ ಧರ್ಮದ ಜನಸಂಖ್ಯೆ ಹೆಚ್ಚಾದರೆ ಮಾತ್ರ ಜೈನ ಧರ್ಮಕ್ಕೆ ಉಳಿಗಾಲವಿದೆ. ಹೆಣ್ಣುಮಕ್ಕಳು ಜನಿಸಿದ ಮನೆಯಲ್ಲಿ ಮಾತ್ರ ಮುಂಬರುವ ದಿನಗಳಲ್ಲಿ ತಾವು ಆಹಾರ ಸೇವಿಸುವುದಾಗಿ ಆಚಾರ್ಯ ಶ್ರೀ ಕುಲರತ್ನ ಭೂಷಣ ಮುನಿ ಮಹಾರಾಜರು ಹೇಳಿದರು.



ಜಿಲ್ಲೆಯ ಅಥಣಿ ತಾಲ್ಲೂಕಿನ ಮಹೇಶವಾಡಗಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪಂಚಕಲ್ಯಾಣ ಮಹಾಮಹೋತ್ಸವದ ತೀರ್ಥಂಕರ ಜನ್ಮ ಕಲ್ಯಾಣ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಹಳಿಂಗಳಿ ಭದ್ರಗಿರಿ ಬೆಟ್ಟದಲ್ಲಿ ಗುರುಕುಲ ತೆರೆಯಲಾಗುವುದು. ಅಲ್ಲಿ ಬಡ ಹಾಗೂ ಅನಾಥ ಮಕ್ಕಳಿಗೆ ಉಚಿತವಾಗಿ ಶಿಕ್ಷಣ ಸಂಸ್ಕಾರ ಜೈನ ಧರ್ಮದ ಆಚಾರ ವಿಚಾರ ತಿಳಿಸಿಕೊಡಲಾಗುವುದು ಎಂದರು.

# ಸಿಂಧೂ ಜಲ ಒಪ್ಪಂದ ಉಲ್ಲಂಘಿಸಿದರೆ ಪರಿಣಾಮ ತೀವ್ರವಾಗಿರಲಿದೆ: ಪಾಕ್ ರಕ್ಷಣಾ ಸಚಿವ ಭಾರತಕ್ಕೆ ಎಚ್ಚರಿಕೆ

**ಇಸ್ಲಾಮಾಬಾದ್, ಮೇ 3:** ಪಹಲ್ಯಾಮ್ ಭಯೋತ್ಪಾದಕ ದಾಳಿಯಿಂದ ಭಾರತ – ಪಾಕಿಸ್ತಾನ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವುದರ ನಡುವೆ, ಭಾರತ ಸಿಂಧೂ ಜಲ ಒಪ್ಪಂದವನ್ನು ಉಲ್ಲಂಘಿಸಿ ಯಾವುದೇ ಡ್ಯಾಮ್ ನಿರ್ಮಿಸಿದರೆ ಇಸ್ಲಾಮಾಬಾದ್ ಅದನ್ನು "ಧ್ವಂಸಗೊಳಿಸಲಿದೆ" ಎಂದು ಪಾಕ್ ರಕ್ಷಣಾ ಸಚಿವ ಖವಾಜಾ ಆಸಿಫ್ ಹೇಳಿದ್ದಾರೆ. ಜಿಯೋ ನ್ಯೂಸ್ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಆಸಿಫ್, ಸಿಂಧೂ ನದಿಗೆ ಅಡ್ಡವಾಗಿ ಯಾವುದೇ ಮೂಲಸೌಕರ್ಯ ನಿರ್ಮಿಸುವುದನ್ನು "ಭಾರತದ ಆಕ್ರಮಣ" ಎಂದು ಪರಿಗಣಿಸಲಾಗುತ್ತದೆ ಎಂದಿದ್ದಾರೆ. ಪಹಲ್ಯಾಮ್ನಲ್ಲಿ ನಡೆದ ಮಾರಕ ಭಯೋತ್ಪಾದಕ ದಾಳಿ ಬಳಿಕ ಪಾಕಿಸ್ತಾನ ವಿರುದ್ಧ ಭಾರತ ಕಠಿಣ ಕ್ರಮಗಳನ್ನು ತೆಗೆದುಕೊಂಡಿದ್ದು, ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿದೆ. ಸಿಂಧೂ ನದಿಗೆ ಅಡ್ಡವಾಗಿ ಡ್ಯಾಂ ನಿರ್ಮಿಸಲು



ಭಾರತ ಯತ್ನಿಸಿದರೆ ಬಲವಾದ ಪ್ರತಿರೋಧ ಎದುರಿಸಬೇಕಾಗುತ್ತದೆ ಎಂದು ಆಸಿಫ್ ಒತ್ತಿ ಹೇಳಿದ್ದಾರೆ. ಖಂಡಿತ, ಅವರು ಯಾವುದೇ ರಚನೆಯನ್ನು ನಿರ್ಮಿಸಲು ಪ್ರಯತ್ನಿಸಿದರೆ, ನಾವು ಅದನ್ನು ಧ್ವಂಸಗೊಳಿಸುತ್ತೇವೆ.

ಆಕ್ರಮಣವು ಕೇವಲ ಫಿರಂಗಿ ಅಥವಾ ಗುಂಡುಗಳನ್ನು ಹಾರಿಸುವುದರ ಮೂಲಕ ಅಲ್ಲ; ಅದಕ್ಕೆ ಹಲವು ಮುಖಗಳಿವೆ. ಆ ಮುಖಗಳಲ್ಲಿ ಸಿಂಧೂ ನದಿ ನೀರನ್ನು ತಡೆಯುವುದು ಅಥವಾ ತಿರುಗಿಸುವುದು ಒಂದು. ಇದರಿಂದ ಪಾಕಿಸ್ತಾನದಲ್ಲಿ ಹಸಿವು ಮತ್ತು ಬಾಯಾರಿಕೆಯಿಂದ ಜನರ ಸಾವುಗಳಿಗೆ ಕಾರಣವಾಗಬಹುದು ಎಂದಿದ್ದಾರೆ. ಆದಾಗ್ಯೂ ಸದ್ಯಕ್ಕೆ ಪಾಕಿಸ್ತಾನವು ಸೂಕ್ತ ವೇದಿಕೆಗಳಲ್ಲಿ ಮತ್ತು ವಿಷಯವನ್ನು ಪ್ರಸ್ತಾಪಿಸುತ್ತದೆ ಎಂದು ಆಸಿಫ್ ತಿಳಿಸಿದ್ದಾರೆ. ಸಂಬಂಧಿತ ಪಾಲುದಾರರೊಂದಿಗೆ ಸಿಂಧೂ ನದಿ ಒಪ್ಪಂದ.

# ಸಿಂಗಾಪುರ ಪ್ರಧಾನಿ ಭವಿಷ್ಯ ನಾಳೆ ನಿರ್ಧಾರ



**ಸಿಂಗಾಪುರ, ಮೇ 3:** ಸಿಂಗಾಪುರದ ಅತಿದೊಡ್ಡ ವ್ಯಾಪಾರ ಪಾಲುದಾರ ಚೀನಾದ ಮೇಲೆ ಅಮೆರಿಕ ವಿಧಿಸಿರುವ ವ್ಯಾಪಾರ ಸುಂಕದಿಂದ ಹೆಚ್ಚುತ್ತಿರುವ ಜಾಗತಿಕ ಆರ್ಥಿಕ ಒತ್ತಡಗಳ ಮಧ್ಯೆ ಆಡಳಿತಾರೂಢ ಪೀಪಲ್ಸ್ ಆಕ್ಷನ್ ಪಾರ್ಟಿ (ಪಿಎಪಿ) ನವೀಕರಿಸಿದ ಜನಾದೇಶವನ್ನು ಬಯಸುತ್ತಿರುವುದರಿಂದ ಸಿಂಗಾಪುರದಲ್ಲಿ ಶನಿವಾರ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ 2.75 ದಶಲಕ್ಷಕ್ಕೂ ಹೆಚ್ಚು ನೋಂದಾಯಿತ ಮತದಾರರು ತಮ್ಮ ಮತಗಳನ್ನು ಚಲಾಯಿಸುತ್ತಿದ್ದಾರೆ.

ದ್ವೀಪದಾದ್ಯಂತ ಸ್ಥಾಪಿಸಲಾದ 1,240 ಕೇಂದ್ರಗಳಲ್ಲಿ ಸ್ಥಳೀಯ ಸಮಯ ಬೆಳಿಗ್ಗೆ 8 ಗಂಟೆಗೆ ಮತದಾನ ಪ್ರಾರಂಭವಾಯಿತು. ಮತದಾನ ಕೇಂದ್ರಗಳನ್ನು ರಾತ್ರಿ 8 ಗಂಟೆಗೆ ಮುಚ್ಚಲಾಗುವುದು ಮತ್ತು ತಡರಾತ್ರಿ ಫಲಿತಾಂಶಗಳನ್ನು ನಿರೀಕ್ಷಿಸಲಾಗಿದೆ. ಬೆಳಿಗ್ಗೆ 8 ಗಂಟೆಗೆ ಮತದಾನ ಕೇಂದ್ರಗಳು ತೆರೆಯುವ ಒಂದು ಗಂಟೆಗೂ ಮೊದಲು ಕೆಲವು ಮತದಾರರು ಭಾರಿ ಮಳೆಯನ್ನು ಲೆಕ್ಕಿಸದೆ ತಮ್ಮ ಮತ ಚಲಾಯಿಸಲು ಸರತಿ ಸಾಲಿನಲ್ಲಿ ನಿಂತರು. ಪ್ರಧಾನಿ ಲಾರೆನ್ಸ್ ವಾಂಗ್ ಅವರು ಅಧಿಕಾರದಲ್ಲಿ ಸುಮಾರು ಒಂದು ವರ್ಷವನ್ನು ಪೂರ್ಣಗೊಳಿಸಿದ್ದು, ಸ್ವಾತಂತ್ರ್ಯದ ನಂತರ ನಗರ– ರಾಜ್ಯವನ್ನು ಆಳುತ್ತಿರುವ ಮತ್ತು ಅದರ ಅಭಿವೃದ್ಧಿಯನ್ನು ಜಾಗತಿಕ ಹಣಕಾಸು ಕೇಂದ್ರವಾಗಿ ಮುನ್ನಡೆಸಿದ ಪಿಎಪಿಗೆ ಹೊಸ ಜನಾದೇಶವನ್ನು ಬಯಸುತ್ತಿದ್ದಾರೆ.

ಇದು 1948 ರಲ್ಲಿ ಮೊದಲ ಸಾರ್ವತ್ರಿಕ ಚುನಾವಣೆಯ ನಂತರ ಸಿಂಗಾಪುರದ 19 ನೇ ಚುನಾವಣೆಯಾಗಿದೆ ಮತ್ತು 1965 ರಲ್ಲಿ ಸ್ವಾತಂತ್ರ್ಯದ ನಂತರ 14 ನೇ ಚುನಾವಣೆಯಾಗಿದೆ. ಸಿಂಗಾಪುರದಲ್ಲಿ 2.758,846 ನೋಂದಾಯಿತ ಮತದಾರರಿದ್ದಾರೆ.

# 2ನೇ ಬಾರಿಗೆ ಆಸ್ಟ್ರೇಲಿಯಾ ಪ್ರಧಾನಿಯಾಗಿ ಆಂಥೋನಿ ಆಯ್ಕೆ, ಪ್ರಧಾನಿ ಮೋದಿ ಅಭಿನಂದನೆ

**ನವದೆಹಲಿ, ಮೇ 3:** ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರ ಎಡಪಂಥೀಯ ಲೇಬರ್ ಪಕ್ಷವು ಸಾರ್ವತ್ರಿಕ ಚುನಾವಣೆಯಲ್ಲಿ ಭರ್ಜರಿ ಜಯಗಳಿಸಿದೆ. ಇದರೊಂದಿಗೆ ಅಂಥೋನಿ ಅಲ್ಬನೀಸ್ ಅವರು 21 ವರ್ಷಗಳ ಬಳಿಕ ಸತತ ಮೂರು ವರ್ಷಗಳ ಅಧಿಕಾರವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ಎರಡನೇ ಬಾರಿಗೆ ಆಯ್ಕೆಯಾದ ಮೊದಲ ಆಸ್ಟ್ರೇಲಿಯಾದ ಪ್ರಧಾನಿ ಎಂದೆನಿಸಿಕೊಂಡಿದ್ದಾರೆ.



ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿಕ್ರಿಯೆ ನೀಡಿದ್ದು, ಆಸ್ಟ್ರೇಲಿಯಾದ ಪ್ರಧಾನ ಮಂತ್ರಿಯಾಗಿ ನಿಮ್ಮ ಅದ್ಭುತ ಗೆಲುವು ಮತ್ತು ಪುನರಾಯ್ಕೆಗೆ ಅಭಿನಂದನೆಗಳು ಎಂದಿದ್ದಾರೆ. ಈ ಜನಾದೇಶವು ನಿಮ್ಮ ನಾಯಕತ್ವದಲ್ಲಿ ಆಸ್ಟ್ರೇಲಿಯಾದ ಜನರ ಶಾಶ್ವತ ವಿಶ್ವಾಸವನ್ನು ಸೂಚಿಸುತ್ತದೆ. ಭಾರತ–ಆಸ್ಟ್ರೇಲಿಯಾ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಆಳಗೊಳಿಸಲು ಮತ್ತು ಇಂಡೋ–ಪೆಸಿಫಿಕ್ನಲ್ಲಿ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗಾಗಿ ಉಭಯ ರಾಷ್ಟ್ರಗಳ ಪಾಲುದಾರಿಕೆ, ದೃಷ್ಟಿಕೋನವನ್ನು ಮುನ್ನಡೆಸಲು ಹಾಗೂ ಒಟ್ಟಾಗಿ ಕೆಲಸ ಮಾಡಲು ನಾನು ಎದುರು ನೋಡುತ್ತಿದ್ದೇನೆ ಎಂದು ಮೋದಿಯವರು ಅಭಿಪ್ರಾಯಪಟ್ಟಿದ್ದಾರೆ. ವಿರೋಧ ಪಕ್ಷದ ನಾಯಕ ಪೀಟರ್ ಡನ್ ಇಂದು ನಡೆದ ಚುನಾವಣೆಯಲ್ಲಿ ಸೋಲು ಒಪ್ಪಿಕೊಂಡಿದ್ದು, ಈ ಪ್ರಚಾರದ ಸಮಯದಲ್ಲಿ ನಾವು ಸಾಕಷ್ಟು ಉತ್ತಮವಾಗಿ ಕಾರ್ಯನಿರ್ವಹಿಸಲಿಲ್ಲ. ಎಂದು ಹೇಳಿದ್ದಾರೆ. ಎಂದು ಭಾವಿಸುವೆ. ನಾನು ಸೋಲನ್ನು ಸಂಪೂರ್ಣ ಸ್ವೀಕರಿಸುತ್ತೇನೆ.

# ಭಾರತದ ಈಶಾನ್ಯ ರಾಜ್ಯಗಳ ವಶಕ್ಕೆ ಯೂನಸ್ ನಿಕಟವರ್ತಿ ಕರೆ


**ಢಾಕಾ, ಮೇ 3:** ಪಹಲ್ಯಾಮ್ ದಾಳಿಗೆ ಪ್ರತಿಯಾಗಿ ಭಾರತವು ಪಾಕಿಸ್ತಾನದ ಮೇಲೆ ದಾಳಿ ನಡೆಸಿದರೆ, ಬಾಂಗ್ಲಾದೇಶವು ಚೀನಾದೊಂದಿಗೆ ಸೇರಿ ಭಾರತದ ಏಳು ಈಶಾನ್ಯ ರಾಜ್ಯಗಳನ್ನು ವಶಕ್ಕೆ ಪಡೆಯಬೇಕು ಎಂದು ಬಾಂಗ್ಲಾ ಸೇನೆಯ ನಿವೃತ್ತ ಅಧಿಕಾರಿ ಮತ್ತು ಮುಖ್ಯ ಸಲಹೆಗಾರ ಮೊಹಮ್ಮದ್ ಯೂನುಸ್ ಅವರ ನಿಕಟವರ್ತಿ ಸಲಹೆ ನೀಡಿದ್ದಾರೆ. ಮೇಜರ್ ಜನರಲ್ (ನಿವೃತ್ತ) ಎಎಲ್ಎಮ್ ಫಜ್ಲೂರ್ ರಹಮಾನ್ ಅವರು, ಈಶಾನ್ಯ ರಾಜ್ಯಗಳನ್ನು ವಶಕ್ಕೆ ಪಡೆಯುವ ಬಗ್ಗೆ ಚೀನಾದೊಂದಿಗೆ ಚರ್ಚೆ ಆರಂಭಿಸಬೇಕಿದೆ ಎಂದೂ ಹೇಳಿದ್ದಾರೆ. ರಹಮಾನ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಈ ಹೇಳಿಕೆ ಬಗ್ಗೆ ಬಾಂಗ್ಲಾ ಮಧ್ಯಂತರ ಸರ್ಕಾರ ಅನ್ಯ ಕಾಯ್ದುಕೊಂಡಿದೆ. ಈ ಹೇಳಿಕೆಯು ಸರ್ಕಾರದ ನೀತಿ ನಿರ್ಧಾರಗಳ ಮೇಲೆ ಪರಿಣಾಮ ಬೀರುವುದಿಲ್ಲ. ಇಂಥ ಮಾತುಗಳನ್ನು ಸರ್ಕಾರ ಬೆಂಬಲಿಸುವುದೂ ಇಲ್ಲ. ಸಮರ್ಥಿಸುವುದೂ ಇಲ್ಲ' ಎಂದು ವಿದೇಶಾಂಗ ಸಚಿವಾಲಯ ಸ್ಪಷ್ಟನೆ ನೀಡಿದೆ. ಯೂನುಸ್ ಅವರ ಸರ್ಕಾರವು ರಹಮಾನ್ ಅವರನ್ನು ರಾಷ್ಟ್ರೀಯ ಸ್ವತಂತ್ರ ಆಯೋಗದ ಮುಖ್ಯಸ್ಥರನ್ನಾಗಿ 2024ರಲ್ಲಿ ನೇಮಕ ಮಾಡಿದೆ. ಈ ಆಯೋಗವು 2009ರ ಬಾಂಗ್ಲಾ ರೈಫಲ್ಸ್ ದಂಗೆಯಲ್ಲಿನ ಹತ್ಯೆ ಬಗ್ಗೆ ತನಿಖೆ ನಡೆಸುತ್ತಿದೆ.



ಉತ್ತರ ಗಾಜಾ ಪಟ್ಟಿಯ ಜಬಾಲಿಯಾ ನಿರಾಶ್ರಿತರ ಶಿಬಿರದ ಮೇಲೆ ಇಸ್ರೇಲ್ ಶೆಲ್ ದಾಳಿ ನಡೆಸಿದ ನಂತರ ಬದುಕುಳಿದವರಿಗಾಗಿ ಪ್ಯಾಲೆಸ್ತೀನಿಯನ್ನರು ಹುಡುಕಾಟ ನಡೆಸುತ್ತಿದ್ದಾರೆ. ಶುಕ್ರವಾರ ಬೆಳಗಿನ ಜಾವದಿಂದ ಗಾಜಾ ಪಟ್ಟಿಯಾದ್ಯಂತ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 32 ಪ್ಯಾಲೆಸ್ಟೀನಿಯರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಎನ್ಕ್ಲೇವ್‌ನ ನಾಗರಿಕ ರಕ್ಷಣಾ ವೇದಿಕೆ ವರದಿ ಮಾಡಿದೆ.

# ರಕ್ಷಣಾ ಸಚಿವ ರಾಜನಾಥ ಸಿಂಗ್ ರಷ್ಯಾ ಭೇಟಿ ರದ್ದು: ಅಧಿಕಾರಿಗಳಿಂದ ಮಾಹಿತಿ

**ಮಾಸ್ಕೋ, ಮೇ 3:** ಎರಡನೇ ವಿಶ್ವ ಸಮರದ ವಿಜಯೋತ್ಸವ ಸಮಾರಂಭಕ್ಕೆ ಆಹ್ವಾನಿತ ಭಾರತದ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರು ಮೇ 9ರಂದು ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿಲ್ಲ. ಬದಲಾಗಿ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಭಾಗವಹಿಸಲಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.ಇದಕ್ಕೂ ಮುನ್ನ ಈ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ರಷ್ಯಾ ಆಹ್ವಾನ ನೀಡಿತ್ತು. ಆದರೆ, ಮೋದಿ ಅವರು ಭಾಗವಹಿಸುವುದಿಲ್ಲ ಎಂದು ಕ್ರೆಮ್ಲಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್ ಖಚಿತ ಪಡಿಸಿದರು. ಈ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ಬದಲು ರಕ್ಷಣಾ ಸಚಿವ ರಾಜನಾಥ್




ಸಿಂಗ್ ಅವರು ಭಾಗವಹಿಸಲಿದ್ದಾರೆ ಎಂದೂ ಮಾಧ್ಯಮಗಳು ವರದಿ ಮಾಡಿದ್ದವು. ನಾಜಿ ಜರ್ಮನಿ ವಿರುದ್ಧ ಗೆಲುವು ಸಾಧಿಸಿದ ನೆನಪು ಮತ್ತು ರಷ್ಯಾದ 80ನೇ ವಾರ್ಷಿಕೋತ್ಸವ ಸಮಾರಂಭಕ್ಕೆ ಆಯ್ದ ಆಪ್ತ ರಾಷ್ಟ್ರಗಳಿಗೆ ಆಮಂತ್ರಣ ನೀಡಿದ್ದೇವೆ ಎಂದು ಈಚೆಗೆ ರಷ್ಯಾ ವಿದೇಶಾಂಗ ಸಚಿವ ಯೂರಿ ಉಶಾಕೋವ್ ರಷ್ಯನ್ ಸರ್ಕಾರಿ ಮಾಧ್ಯಮಕ್ಕೆ ತಿಳಿಸಿದ್ದರು. 'ಒಪ್ಪಂದದಂತೆ ಭಾರತಕ್ಕೆ ಭೇಟಿ ನೀಡುವ ಸರದಿ ನಮ್ಮದಿದೆ. ಅಧ್ಯಕ್ಷ ವ್ಯಾಡಿಮಿರ್ ಪುಟಿನ್ ಭಾರತ ಭೇಟಿಯ ಚರ್ಚೆ ನಡೆದಿದೆ' ಎಂದು ಅವರು ಹೇಳಿದ್ದರು.2000ನೇ ಇಸವಿಯಲ್ಲಿ ಭಾರತಕ್ಕೆ ಭೇಟಿ ನೀಡಿದ್ದ ವುಟಿನ್ ಅಂದಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರೊಂದಿಗೆ ರಚನಾತ್ಮಕ ಪಾಲುದಾರಿಕೆ ಘೋಷಣೆಗೆ ಸಹಿ ಹಾಕಿದ್ದರು.ರಷ್ಯಾದ 80ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಚೀನಾ ಅಧ್ಯಕ್ಷ ಷಿ ಜಿನ್ಪಿಂಗ್ ಸೇರಿದಂತೆ ಜಾಗತಿಕ ನಾಯಕರು ಭಾಗವಹಿಸಲಿದ್ದಾರೆ ಎಂದು ವರದಿಯಾಗಿದೆ.



ಇಂಡೋನೇಷ್ಯಾದ ಬಾಲಿಯಲ್ಲಿ ನಡೆದ IFSC ಕ್ಲೈಂಬಿಂಗ್ ವಿಶ್ವಕಪ್ ಬಾಲಿಯಲ್ಲಿ ಮಹಿಳೆಯರ ವೇಗದ ಚಿನ್ನದ ಪದಕ ಓಟದಲ್ಲಿ ಚೀನಾದ ಝೌ ಯಾಫೀ ಅವರೊಂದಿಗೆ ಗೆದ್ದ ನಂತರ ಪೋಲೆಂಡ್‌ನ ಅಲೆಕ್ಸಾಂಡ್ರಾ ಮಿರೋಸ್ಲಾ ಹರ್ಷ ವ್ಯಕ್ತಪಡಿಸಿದರು

# ದಕ್ಷಿಣ ಭಾರತ ಕುಸ್ತಿ ಸಂಘದ ಅಧ್ಯಕ್ಷರಾಗಿ ವಿ. ಎನ್. ಪ್ರಸಾದ್, ಉಪಾಧ್ಯಕ್ಷರಾಗಿ ಬೆಳ್ಳಿಪಾಡಿ ಗುಣರಂಜನ್ ಶೆಟ್ಟಿ ಆಯ್ಕೆ

**ಬೆಂಗಳೂರು, ಮೇ, 3;** ದಕ್ಷಿಣ ಭಾರತ ಕುಸ್ತಿ ಸಂಘ [ಸೌತ್ ಇಂಡಿಯಾ ವ್ರೆಸಲ್ಲಿಂಗ್ ಅಸೋಸಿಯೇಷನ್]ಗೆ ಚುನಾವಣೆ ನಡೆದಿದ್ದು, 2025 29 ರ ಸಾಲಿಗೆ ಅಧ್ಯಕ್ಷರಾಗಿ ಕೇರಳದ ವಿ.ಎನ್. ಪ್ರಸಾದ್, ಉಪಾಧ್ಯಕ್ಷರಾಗಿ ರಾಜ್ಯದ ಬೆಳ್ಳಿಪ್ಪಾಡಿ ಗುಣರಂಜನ್ ಶೆಟ್ಟಿ ಆಯ್ಕೆಯಾಗಿದ್ದಾರೆ. ಈ ಮೂಲಕ ಕುಸ್ತಿ ಸಂಘಕ್ಕೆ ದಕ್ಷಿಣ ಭಾರತಕ್ಕೆ ಮೊದಲ ಬಾರಿಗೆ ಪ್ರಮುಖ ಪ್ರಾತಿನಿಧ್ಯ ದೊರೆತಿದೆ. ಸಂಘದ ಪೋಷಕರಾಗಿ ಆರ್. ಕೆ. ಪುರುಷೋತ್ತಮ್, ತಮಿಳುನಾಡಿನ ಎಂ. ಲೋಗನಾಥನ್ ಪ್ರಧಾನ ಕಾರ್ಯದರ್ಶಿ, ಜಂಟಿ ಕಾರ್ಯದರ್ಶಿಗಳಾಗಿ ರಾಜ್ಯದ ಜೆ. ಶ್ರೀನಿವಾಸ, ತೆಲಂಗಾಣದ ಅಹಮ್ಮದ್, ಖಜಾಂಚಿಯಾಗಿ ಪುದುಚೇರಿಯ ವಿನೋಥ್. ಕೆ, ಕಾರ್ಯಕಾರಿ ಸಮಿತಿ ಸದಸ್ಯರಾಗಿ ತಮಿಳುನಾಡಿನ ಐ.ಸಿ. ಕೊಂಡೇಶ್ವರನ್, ಕೇರಳದ ಬಿ. ರಾಜಶೇಖರನ್ ನಾಯರ್ ಮತ್ತು ಆಂಧ್ರಪ್ರದೇಶದ ಭೂಷಣ್ ಆಯ್ಕೆಯಾಗಿದ್ದಾರೆ.



ವಿ.ಎನ್. ಪ್ರಸಾದ್

# ಪಾಕ್‌ನಲ್ಲಿ ನಿಗದಿತ ವಾಲಿಬಾಲ್ ಟೂರ್ನಿ ಸ್ಥಳಾಂತರ

**ಕರಾಚಿ, ಮೇ, 3;** ಪಹಲ್ಲಾಮ್ ನಲ್ಲಿ ಉಗ್ರರ ದಾಳಿಯ ನಂತರ ಭಾರತವು ಮಧ್ಯ ಏಷ್ಯನ್ ವಾಲಿಬಾಲ್ ಟೂರ್ನಿಯಿಂದ ಭಾರತ ಹಿಂದೆಸರಿದಿತ್ತು. ಪಾಕಿಸ್ತಾನ ಆತಿಥ್ಯದಲ್ಲಿ ನಿಗದಿಯಾಗಿದ್ದ ಈ ಟೂರ್ನಿಯನ್ನು ಈಗ ಉಜ್ಬೆಕಿಸ್ತಾನದ ರಾಜಧಾನಿ ತಾಷ್ಕೆಂಟ್‌ಗೆ ಸ್ಥಳಾಂತರಿಸಲಾಗಿದೆ ಎಂದು ಪಾಕಿಸ್ತಾನ ಫೆಡರೇಷನ್ ಅಧಿಕಾರಿಯೊಬ್ಬರು ಶನಿವಾರ ತಿಳಿಸಿದ್ದಾರೆ. ಸೆಂಟ್ರಲ್ ಏಷ್ಯಾ ವಾಲಿಬಾಲ್ ಸಂಸ್ಥೆ (ಸಿಎವಿಎ) ಈ ನಿರ್ಧಾರಕ್ಕೆ ಬಂದಿದೆ. 'ಭಾರತ ಹಿಂದೆ ಸರಿದಿದ್ದರೂ, ಟೂರ್ನಿಯನ್ನು ಸ್ಥಳಾಂತರಿಸುತ್ತಿರುವುದು ನಿರಾಸೆ ಮೂಡಿಸಿದೆ. ಆದರೆ ನಾವು ಸಿಎವಿಎ ಸರ್ವಸದಸ್ಯರ ಸಮಿತಿ ಭಾವನೆಯನ್ನು ಅರ್ಥಮಾಡಿಕೊಳ್ಳುತ್ತಿದ್ದೇವೆ' ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪಾಕಿಸ್ತಾನ, ಇರಾನ್, ತುರ್ಕಮೆನಿಸ್ತಾನ, ಕಿರ್ಗಿಸ್ತಾನ, ತಾಜಿಕಿಸ್ತಾನ, ಉಜ್ಬೇಕಿಸ್ತಾನ ತಂಡಗಳು ಕಣದಲ್ಲಿವೆ. ಟೂರ್ನಿಯ ದಿನಾಂಕ ಬದಲಾಗಿಲ್ಲ. ಮೇ 28ರಿಂದ ಟೂರ್ನಿ ನಿಗದಿಯಾಗಿದೆ. ಟೂರ್ನಿಯಿಂದ ಭಾರತ ಹಿಂದೆಸರಿದಿದೆ ಎಂದು ಪಾಕಿಸ್ತಾನ ವಾಲಿಬಾಲ್ ಫೆಡರೇಷನ್ ಅಧಿಕಾರಿ ಅಬ್ದುಲ್ ಅಹದ್ ಏ 27ರಂದು ಪ್ರಕಟಿಸಿದ್ದರು.

# ಸಿಎಸ್‌ಕೆ ವಿರುದ್ಧ ಆರ್‌ಸಿಬಿಗೆ ರೋಚಕ ಜಯ



**ಬೆಂಗಳೂರು, ಮೇ 3:** ಬೆಂಗಳೂರಿನ ಎಂ ಚಿನ್ನಸ್ವಾಮಿ ಅಂಗಳದಲ್ಲಿ ನಡೆದ 18ನೇ ಆವೃತ್ತಿಯ 52ನೇ ಪಂದ್ಯ ರೋಚಕತೆ ಹುಟ್ಟಿಸಿತ್ತು. ಕೊನೆಯ ಓವರ್‌ನಲ್ಲಿ ಯಶ್ ದಯಾಳ್ ನಡೆಸಿದ ಅಮೋಘ ಬೌಲಿಂಗ್ ನಡೆಸಿದ ಪರಿಣಾಮ ರಾಯಲ್ ಚಾಲೆಂಜರ್ಸ್ ಬೆಂಗಳೂರು 2 ರನ್ ರೋಚಕ ಜಯ ಸಾಧಿಸಿ ಇತಿಹಾಸ ನಿರ್ಮಿಸಿದೆ.

ಲೀಗ್ ಹಂತದಲ್ಲಿ ಈ ಹಿಂದೆ ಎರಡು ಬಾರಿ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಮಣಿಸಿದ ಹಿರಿಮೆಯನ್ನು ರಜತ್ ಪಟಿದಾರ್ ತನ್ನದಾಗಿಸಿಕೊಂಡಿದೆ.

ಡೆತ್ ಓವರ್‌ಗಳಲ್ಲಿ ಅಮೋಘ ಬೌಲಿಂಗ್ ನಡೆಸಿದ ಆರ್‌ಸಿಬಿ ಬೌಲರ್ಸ್ ಅಬ್ಬರಿಸಿದರು. ಸವಾಲಿನ ಮೊತ್ತವನ್ನು ಕಲೆ ಹಾಕುವಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಸೋಲು ಕಂಡಿದೆ.

ವಿಜಯಲಕ್ಷ್ಮೀ ಕೊನೆಯ ವರೆಗೆ ಚಂಚಲೆಯಾಗಿದ್ದಳು. ಆದರೆ ಕೊನೆಯ ಓವರ್‌ನಲ್ಲಿ ಯಶ್ ದಯಾಳ್ ಬಿಗುವಿನ ದಾಳಿ ನಡೆಸಿದರು. ಈ ಓವರ್‌ನಲ್ಲಿ ಒಂದು ನೋಬಾಲ್ ಎಸೆದ್ರೂ ಸಿಎಸ್‌ಕೆ ಇದರ ಲಾಭವನ್ನು ಪಡೆಯುವಲ್ಲಿ ವಿಫಲರಾದರು. ದಯಾಳ್ ಎಸೆತದ ಲೋ ಫುಲ್ ಟಾಸ್ ಎಸೆತಗಳಿಗೆ ಉತ್ತರಿಸುವಲ್ಲಿ ಸಿಎಸ್‌ಕೆ ಬ್ಯಾಟರ್‌ಗಳು ವಿಫಲರಾದರು. ಕೊನೆಯ ಓವರ್‌ನಲ್ಲಿ 15 ರನ್ ಡಿಫೆಂಡ್ ಮಾಡಿಕೊಂಡ ಆರ್‌ಸಿಬಿ ಪಂದ್ಯವನ್ನು ಗೆದ್ದು ಬೀಗಿದೆ.

ಈ ಜಯದ ಮೂಲಕ ಆರ್‌ಸಿಬಿ ಆಡಿರುವ 11 ಪಂದ್ಯಗಳಲ್ಲಿ 8 ಜಯ ದಾಖಲಿಸಿದ್ದು, 16 ಅಂಕಗಳೊಂದಿಗೆ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನವನ್ನು ಪಡೆದಿದೆ.

ಟಾಸ್ ಸೋತರೂ ಮೊದಲು ಬ್ಯಾಟ್ ಮಾಡಿದ ಆರ್‌ಸಿಬಿ 20 ಓವರ್‌ಗಳಲ್ಲಿ 5 ವಿಕೆಟ್‌ಗೆ 213 ರನ್ ಸಿಡಿಸಿತು. ಇದಕ್ಕುತ್ತರವಾಗಿ ಬ್ಯಾಟ್ ಮಾಡಿದ ಸಿಎಸ್‌ಕೆ 20 ಓವರ್‌ಗಳಲ್ಲಿ 5 ವಿಕೆಟ್‌ಗೆ 211 ರನ್ ಸಿಡಿಸಿ ಸೋಲು ಕಂಡಿತು